♦ ಮಂಡ್ಯ ♦ ಮೈಸೂರು ♦ ಚಾಮರಾಜನಗರ ♦ ಹಾಸನ ♦ ರಾಮನಗರ ♦ ತುಮಕೂರು ♦ ಬೆಂಗಳೂರು ಗ್ರಾಮಾಂತರ ♦ ಬೆಂಗಳೂರು ನಗರ

E-mail:kayakayogi @gmail.com

website: www.kayakayogi.com

ಕಾಯಕ ಯೋಗಿ

Connecting hearts in the cultural capital

ASK ಮೈಸೂರು

#askmysuru

ಸಂಪಾದಕರು:ಅರುಣಜ್ಯೋತಿ ಬಿ.ಕೆ. KAYAKA YOGI - Regional Daily ಪ್ರಾದೇಶಿಕ ದಿನಪತ್ರಿಕೆ

RNI NO.KARKAN/2018/77805 | POST NO.KA/SK/MND/999/2022-2024 | ಮಂಡ್ಯ Mandya | ಸಂಪುಟ volume 07 | ಸಂಚಿಕೆ Issue 12 | ಮಂಗಳವಾರ Tuesday | 16-04-2024 | ಪುಟಗಳು Pages 06 | ಬೆಲೆ Rate 02 | ಸಂಪರ್ಕ 9980605484

ಕಾಂಗ್ರೆಸ್ ಪಕ್ಷದಲ್ಲಿ ಪಿಎಂ ಅಭ್ಯರ್ಥಿ ಯಾರು

ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಪ್ರಶ್ನೆ

■ ಕಾಯಕಯೋಗಿ ಸುದ್ದಿ

ಮಂಜುಸ್ವಾಮಿ ಎಂ ಎನ್ ಕೊರಟಗೆರೆ

ಕೊರಟಗೆರೆ: ಕರ್ನಾಟಕದ 28 ಲೋಕಸಭಾ ಕ್ಷೇತ್ರದಲ್ಲೂ ನಮ್ಮ ಮೈತ್ರಿ ಅಭ್ಯರ್ಥಿಗಳೇ ಗೆಲ್ತಾರೇ. ಬಿಜೆಪಿ–ಜೆಡಿಎಸ್ ಅಭ್ಯರ್ಥಿಗಳ ಗೆಲ್ಲಿಸಿ ಪಾರ್ಲಿಮೆಂಟ್‌ಗೆ ಕಳಿಸಿಕೊಡುವ ಶಕ್ತಿಗಿನ್ನೂ ಇದೆ. ರಾಷ್ಟ್ರೀಯ ಕಾಂಗ್ರೇಸ್ ಪಕ್ಷದಲ್ಲಿ ಪ್ರಧಾನಿ ಆಗುವ ಅರ್ಹತೆ ಯಾರಿಗೇ ಇದೇ ಹೇಳಿ. ತುಮಕೂರು ಕ್ಷೇತ್ರದ ಮೈತ್ರಿ ಅಭ್ಯರ್ಥಿ ವಿ.ಸೋಮಣ್ಣ ಗೆದ್ದರೇ ನಿಮ್ಮ ದೇವೇಗೌಡರೇ ಗೆದ್ದಂತೆ ಎಂದು ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ತಿಳಿಸಿದರು.

ಕೊರಟಗೆರೆ ಪಟ್ಟಣದ ಊರ್ಡಿಗೆರೆ ಸಮೀಪದ ಖಾಸಗಿ ಕಲ್ಯಾಣ ಮಂಟಪದಲ್ಲಿ ಭಾರತೀಯ ಜನತಾಪಾರ್ಟಿ ಮತ್ತು ಜಾತ್ಯಾತೀತ ಜನತಾದಳ ಪಕ್ಷದಿಂದ ಸೋಮವಾರ ಏರ್ಪಡಿಸಲಾಗಿದ್ದ ಕಾರ್ಯಕರ್ತರ ಬೃಹತ್ ಸಮಾವೇಶ ಕಾರ್ಯ ಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

>> ವಿ.ಸೋಮಣ್ಣ ಗೆದ್ದರೇ ದೇವೇಗೌಡರೇ ಗೆದ್ದಂತೆ

ನಾನು ಕಾವೇರಿ ವಿಚಾರದಲ್ಲಿ ಮೋದಿಯನ್ನು ನಂಬಿದ್ದೇನೆ. 1962ರಿಂದ ನಾನು ಕಾವೇರಿ ನೀರಿಗಾಗಿ ಹೋರಾಟ ಮಾಡಿದ್ದೇನೆ. ವಿ.ಸೋಮಣ್ಣ ಗೆದ್ರೇ ತಲೆ ಎತ್ತಿ ನಾನು ಮೋದಿಗೆ ಕಾವೇರಿ ನೀರು ಮತ್ತು ಮೇಕೆದಾಟಿನ ಬಗ್ಗೆ ಪ್ರಶ್ನೆ ಮಾಡ್ತಿನಿ. ತಮಿಳುನಾಡಿನ ಸ್ಟಾಲಿನ್ ನೀರಿನ ವೈರತ್ವದ ಬಗ್ಗೆ ಪ್ರಧಾನಿ ಮೋದಿಗೂ ಅರ್ಥ ಆಗಿದೆ. ನಾನು 2019ರಲ್ಲಿ ಸೋತಿದ್ದಕ್ಕೆ ವ್ಯಥೆಯಿಲ್ಲ ಆದರೇ ಈ ಬಾರಿ ವಿ.ಸೋಮಣ್ಣ ಗೆದ್ದು ದೆಹಲಿಗೆ ಹೋಗಬೇಕಿದೆ ಎಂದು ಮನವಿ ಮಾಡಿದರು.

ಸಿದ್ದರಾಮಯ್ಯನವರೇ ನೀವು ರಾಜ್ಯದ 7ಕೋಟಿ ಜನರ ಮುಖ್ಯಮಂತ್ರಿ. 150ಕೋಟಿ ಜನರ ಪ್ರಧಾನಮಂತ್ರಿ ನರೇಂದ್ರಮೋದಿ ಬಗ್ಗೆ ಮಾತನಾಡುವ ಮುನ್ನ ಎಚ್ಚರವಹಿಸಿ. ಸೋಮಣ್ಣ ಎಲ್ಲಿಯವನು ಅಂತಾ ನೀವು ಕೇಳ್ತಿರಾ. ನೀವು ಎಲ್ಲಿಯವರು ಬಾದಾಮಿಗೆ ಯಾಕೆ ಹೋದ್ರಿ ಹೇಳಿ. ಹೆಗಡೆ ಸಿಎಂ ಆಗಿದ್ದಾಗ ಬರಗಾಲ ಇತ್ತು ಆಗ ಅವರ ಕೇಂದ್ರ ಎಷ್ಟು ಹಣ ಕೊಡ್ತು ಅಂತಾ ಸಿದ್ದರಾಮಯ್ಯ ಹೇಳಲಿ. ನಾನು ತುಮಕೂರಿಗೆ ನೀರು ಕೋಡೋದಿಲ್ಲ ಅಂತೇಳಿ ನನ್ನ ಸೋಲಿಸಿದ್ರು. ಈಗ ಬೆಂಗಳೂರಿನಲ್ಲಿ ಕುಡಿಯೋ ನೀರಿನ ದಂದೇ ಎಷ್ಟು ನಡೆಯುತ್ತಿದೆ ಎಂಬುದು ಮೋದಿಯ ಗಮನಕ್ಕೆ ಹೋಗಿದೆ ಎಂದರು.

ತುಮಕೂರು ಲೋಕಸಭಾ ಅಭ್ಯರ್ಥಿ ವಿ.ಸೋಮಣ್ಣ ಮಾತನಾಡಿ ಸಿದ್ದರಾಮಯ್ಯ ಸಿಎಂ ಮಾಡೋಕೆ 86ಶಾಸಕರ ಸಹಿ ಹಾಕಿಸಿ ದೇವೇಗೌಡರಿಗೆ ಕೊಟ್ಟಿದ್ದು ಇದೇ ಸೋಮಣ್ಣ. ಒಂದೇ ಬೂತ್‌ನಲ್ಲಿ 2ಸಾವಿರ ಮತಗಳ ಲೀಡ್ ಕೊಡಿಸಿದ್ದು ಇದೇ ಸೋಮಣ್ಣ. ನೀವು ಮಾತನಾಡುವಾಗ ಅವರ ಅರ್ಹತೆ ಬಗ್ಗೆ ತಿಳಿಯಬೇಕಿದೆ. ನಿಮಗೇ ಅವಕಾಶ ಸಿಗ್ತು ನೀವು ಮುಖ್ಯಮಂತ್ರಿ ಆಗಿದ್ದೀರಿ. ಅರ್ಹತೆ ಇದ್ದೋರಿಗೆ ಸರಿಯಾದ ಅವಕಾಶ ಸಿಗೋದಿಲ್ಲ. ನೀವು ಎಲ್ಲೋ ಕೊತಿದ್ದೀರಿ ಅಂತಾ ಇನ್ನೋಬ್ಬರನ್ನು ಟೀಕೆ ಮಾಡ್ಬೇಡಿ ಎಂದು ಕಿಡಿಕಾರಿದರು.

ನಾವು ಬಡವರ ಮಕ್ಕಳು ನಿಮ್ಮ ಹಾಗೇ ಶ್ರೀಮಂತರ ಮಕ್ಕಳಲ್ಲ. ನಾವು ಇನ್ನೋಬ್ಬರ ಬಗ್ಗೆ ರಾಜಕೀಯ ಪ್ರೇರಿತವಾಗಿ ಮಾತನಾಡಲ್ಲ. ಸೋಮಣ್ಣ ಹಿಂದೆ ಇಡೀ ಭಾರತ ದೇಶ ಇದೆ. ನರೇಂದ್ರ ಮೋದಿ, ಅಮಿತ್‌ಶಾ ಅಂತಹ ನಾಯಕರು ಇದಾರೇ. ನನಗೇ ಸಂಸ್ಕಾರ ಹೇಳಿಕೊಟ್ಟ ದೇವೇಗೌಡರು ಜೊತೆಗಿ ದ್ದಾರೆ. ನಾನು ಯಾರ ಬಗ್ಗೆ ಟೀಕೆ ಮಾಡೋ ದಿಲ್ಲ ಎಂದು ಪರೋಕ್ಷವಾಗಿ ಗೃಹಸಚಿವ ಡಾ.ಜಿ.ಪರಮೇಶ್ವರ್‌ಗೆ ಟಾಂಗ್ ನೀಡಿದರು.

ಕಾರ್ಯಕ್ರಮದಲ್ಲಿ ಮಾಜಿ ಸಚಿವ ಗೋಪಾಲಯ್ಯ, ಮಾಜಿ ಶಾಸಕ ಪಿ.ಆರ್. ಸುಧಾಕರಲಾಲ್, ಬಿಜೆಪಿ ಮುಖಂಡ ಅನಿಲ್‌ಕುಮಾರ್, ಎಂಎಲ್‌ಸಿ ನಾರಾಯಣ ಸ್ವಾಮಿ, ಮಧುಗಿರಿ ಬಿಜೆಪಿ ಜಿಲ್ಲಾಧ್ಯಕ್ಷ ಹನುಮಂತೇಗೌಡ, ಜೆಡಿಎಸ್ ಜಿಲ್ಲಾಧ್ಯಕ್ಷ ಅಂಜಿನಪ್ಪ, ಬಿಜೆಪಿ ಯುವಧ್ಯಕ್ಷ ಶಿವಕುಮಾರ್, ಮಾಜಿ ಅಧ್ಯಕ್ಷ ಪವನಕುಮಾರ್, ಗುರುಧತ್, ದಾಸಲುಕುಂಟೆ ರಘು ಸೇರಿದಂತೆ ಇತರರು ಇದ್ದರು.



ಮೂರು ಗಂಟೆ ತಡವಾಗಿ ಸಮಾವೇಶ ಆರಂಭ..

ಮೈತ್ರಿಪಕ್ಷದ ಜೆಡಿಎಸ್ ಮತ್ತು ಬಿಜೆಪಿ ಕಾರ್ಯಕರ್ತರ ಸಮಾವೇಶಕ್ಕೆ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ಸೋಮವಾರ ಬೆ.10ಗಂಟೆಗೆ ಬರಬೇಕಿತ್ತು. ಆದರೇ ಕೆಲವು ಕಾರಣದಿಂದ 3ಗಂಟೆ ತಡವಾಗಿ ಮಧ್ಯಾಹ್ನ 1ಗಂಟೆಗೆ ಆಗಮಿಸಿದ ಪರಿಣಾಮ ಸಮವೇಶ ತಡವಾಗಿ ಆರಂಭ ವಾಯಿತು. ಹಳ್ಳಿಗಳಿಂದ ಆಗಮಿಸಿದ್ದ ನೂರಾರು ಜನ ಮುಖಂಡರು ಮತ್ತು ಕಾರ್ಯಕರ್ತರು ಬಿಸಿಲಿನ ತಾಪಕ್ಕೆ ಕಾದು ಕಾದು ಬೇಜಾರಿನಿಂದ ಹಿಂದಿರುಗಿದ ಘಟನೆ ನಡೆಯಿತು.



ಹಾಲಿ ಸಂಸದ ಬಸವರಾಜು ಗೈರು..

ಮೈತ್ರಿಪಕ್ಷದ ಬಿಜೆಪಿ ಮತ್ತು ಜೆಡಿಎಸ್ ಸಮನ್ವಯ ಸಮಾವೇಶದಲ್ಲೂ ಗೈರಾಗಿದ್ದ ತುಮಕೂರು ಹಾಲಿ ಸಂಸದ ಜಿ.ಎಸ್.ಬಸವರಾಜು ಕೊರಟಗೆರೆಯಲ್ಲಿ ಸೋಮವಾರ ನಡೆದ ಮಾಜಿ ಪ್ರಧಾನಿಗಳ ಸಮಾವೇಶದಲ್ಲೂ ಮತ್ತೇ ಗೈರು. ಕೊರಟಗೆರೆಯಲ್ಲಿ ನಡೆದ ವಿ.ಸೋಮಣ್ಣನವರ ಸುದ್ದಿಗೋಷ್ಟಿ ಸೇರಿದಂತೆ ಕೊರಟಗೆರೆ ಕ್ಷೇತ್ರದ ಬೂತ್ ಮಟ್ಟದ ಸಭೆ ಮತ್ತು ಗ್ರಾಪಂ ಮಟ್ಟದ ಯಾವುದೇ ಸಮಾರಂಭದಲ್ಲಿ ಭಾಗವಹಿಸದೇ ಇರುವುದು ಹಲವು ಅನುಮಾನಕ್ಕೆ ಕಾರಣವಾಗಿ ಕಾರ್ಯಕರ್ತರಲ್ಲಿ ಗೊಂದಲ ಸೃಷ್ಟಿಯಾಗಿದೆ.

ಚುಟುಕು ಸುದ್ದಿ

ಹವಾಮಾನ ವರದಿ: ಇನ್ನೆರಡು ದಿನ ಉರಿಬಿಸಿಲು ಸಾಧ್ಯತೆ

ಬೆಂಗಳೂರು: ರಾಜ್ಯದ ಅನೇಕ ಜಿಲ್ಲೆಗಳಲ್ಲಿ ಭಾನುವಾರ ಕೂಡ ಮಳೆಯಾಗಿದೆ. ಉತ್ತರ ಒಳನಾಡಿನ ಕೆಲವು ಕಡೆ, ಕರಾವಳಿ ಮತ್ತು ದಕ್ಷಿಣ ಒಳನಾಡಿನ ಒಂದೆರಡು ಕಳೆಗಳಲ್ಲಿ ಮಳೆಯಾಗಿದ್ದು, ಇನ್ನೂ ಮೂರು ದಿನ ರಾಜ್ಯದಲ್ಲಿ ಒಣಹವೆ ಇರಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಶಿವಮೊಗ್ಗ ಜಿಲ್ಲೆ ಆಗುಂಬೆಯಲ್ಲಿ 8 ಸೆ.ಮೀ. ಕೊಪ್ಪಳ ಜಿಲ್ಲೆ ತಾವರೆಗೇರಾದಲ್ಲಿ 7 ಸೆ.ಮೀ. ದಕ್ಷಿಣ ಕನ್ನಡ ಜಿಲ್ಲೆಯ ಧರ್ಮಸ್ಥಳ, ಚಿಕ್ಕಮಗಳೂರು ಜಿಲ್ಲೆಯ ಜಯಪುರ, ಎನ್.ಆರ್. ಪುರದಲ್ಲಿ 4 ಸೆ.ಮೀ. ಮಳೆಯಾಗಿದೆ.

ರಾಯಚೂರು ಜಿಲ್ಲೆಯ ಮುದಗಲ್, ವಿಜಯಪುರ, ಶಿವಮೊಗ್ಗ, ಬೀದರ್, ಗದಗ, ಕಲಬುರಗಿ, ಧಾರವಾಡ, ಚಿಕ್ಕಮಗಳೂರು, ಬಳ್ಳಾರಿ ಜಿಲ್ಲೆಗಳಲ್ಲಿ ಮಳೆಯಾಗಿದೆ.

ಸೋಮವಾರದಿಂದ ಶಿವಮೊಗ್ಗ, ಚಿಕ್ಕಮಗಳೂರು, ಹಾಸನ, ಕೊಡಗು ಜಿಲ್ಲೆಗಳ ಒಂದೆರಡು ಕಡೆ ಮಳೆಯಾಗುವ ಸಂಭವ ಇದೆ. ಏಪ್ರಿಲ್ 17 ರಿಂದ ಮೂರು ದಿನ ಬಹುತೇಕ ಎಲ್ಲಾ ಜಿಲ್ಲೆಗಳಲ್ಲಿ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಏಪ್ರಿಲ್ 17ರಂದು ದಕ್ಷಿಣ ಕನ್ನಡ, ಬೀದರ್, ಗದಗ, ಕಲಬುರಗಿ, ಕೊಪ್ಪಳ, ರಾಯಚೂರು, ವಿಜಯಪುರ, ಯಾದಗಿರಿ ಸೇರಿ 22 ಜಿಲ್ಲೆಗಳಲ್ಲಿ ಮಳೆಯಾಗುವ ಸಾಧ್ಯತೆ ಇದೆ.

ಮಿಸ್ಟರ್ ಕುಮಾರಸ್ವಾಮಿ ನೀನು ಚುನಾವಣೆಯಲ್ಲಿ ಗೆಲ್ಲಲ್ಲ: ಡಿಕೆಶಿ

ಬೆಳಗಾವಿ: ಮಿಸ್ಟರ್ ಕುಮಾರಸ್ವಾಮಿ ನೀನು ಈ ಚುನಾವಣೆಯಲ್ಲಿ ಯಾವುದೇ ಕಾರಣಕ್ಕೂ ಗೆಲ್ಲಲ್ಲ ಎಂದು ಡಿಸಿಎಂ ಡಿ.ಕೆ ಶಿವಕುಮಾರ್ ಮಾಜಿ ಸಿಎಂ ಕುಮಾರಸ್ವಾಮಿ ವಿರುದ್ಧ ಏಕವಚನದಲ್ಲೇ ವಾಗ್ದಾಳಿ ನಡೆಸಿದ್ದಾರೆ.

ಬೆಳಗಾವಿಯ ಕಾಂಗ್ರೆಸ್ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, 'ಕುಮಾರಸ್ವಾಮಿ ಹೇಗಿದ್ದರೂ ಎಂಪಿಯಾಗುವುದಿಲ್ಲ. ಮಿಸ್ಟರ್ ಕುಮಾರಸ್ವಾಮಿ ಹೆದರಿ ಪಕ್ಕದ ಜಿಲ್ಲೆಗೆ ಹೋಗಿದ್ದೀಯ. ಚರ್ಚೆ ಮಾಡಲು ಸದನಕ್ಕೆ ಬಾ. ನೀನು ಎಂತ ಸುಳ್ಳುಗಾರ ಎಂಬುದು ಗೊತ್ತಾಗಲಿದೆ' ಎಂದರು.

ನಾನು ಕಲ್ಲು ಲೂಟಿ ಮಾಡಿದೆನೋ, ಮೋಸ ಮಾಡಿದೆನೋ ಎಂಬ ಬಗ್ಗೆ ಕುಮಾರಸ್ವಾಮಿ ಬಹಿರಂಗ ಚರ್ಚೆಗೆ ಬರಲಿ ಎಂದು ಡಿಕೆ ಶಿವಕುಮಾರ್ ಸವಾಲು ಹಾಕಿದರು.

ಏ.18,19ರಂದು 13 ಪರೀಕ್ಷಾ ಕೇಂದ್ರಗಳಲ್ಲಿ ಸಿಇಟಿ ಪರೀಕ್ಷೆ: ಎಡಿಸಿ

■ ಕಾಯಕಯೋಗಿ ಸುದ್ದಿ

ಮಂಡ್ಯ : ಜಿಲ್ಲೆಯಲ್ಲಿ ಒಟ್ಟು 13 ಪರೀಕ್ಷಾ ಕೇಂದ್ರಗಳಲ್ಲಿ ಸಿ. ಇ. ಟಿ ಪರೀಕ್ಷೆಯು ಏಪ್ರಿಲ್ 18, 19 ರಂದು ನಡೆಯಲಿದ್ದು, ಒಟ್ಟು 5958 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಪರೀಕ್ಷೆಯನ್ನು ವ್ಯವಸ್ಥಿತವಾಗಿ ನಡೆಸಿ ಎಂದು ಅಪರ ಜಿಲ್ಲಾಧಿಕಾರಿ ಎಚ್.ಎಲ್.ನಾಗರಾಜ್ ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ 18 ಮತ್ತು 19 ರಂದು ಜಿಲ್ಲೆಯಲ್ಲಿ ನಡೆಯುವ ಸಿ. ಇ. ಟಿ ಪರೀಕ್ಷೆ ಕುರಿತು ಪೂರ್ವಭಾವಿ ಸಭೆ ನಡೆಸಿ ಮಾತನಾಡಿದರು.

ಈಗಾಗಲೇ ಕೆ ಆರ್ ಪೇಟೆ ತಾಲ್ಲೂಕಿನ 2 ಪರೀಕ್ಷಾ ಕೇಂದ್ರಗಳಲ್ಲಿ ಒಟ್ಟು 1142 ವಿದ್ಯಾರ್ಥಿಗಳು ಹಾಗೂ ಮಂಡ್ಯ ನಗರದ 11 ಪರೀಕ್ಷೆ ಕೇಂದ್ರಗಳಲ್ಲಿ ಒಟ್ಟು 4816 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲು ನೋಂದಣಿಯಾಗಿರುತ್ತಾರೆ ಎಂದರು.

ಕೆಆರ್‌ಪೇಟೆ ತಾಲೂಕಿನ ಸರ್ಕಾರಿ ಪದವಿ ಪೂರ್ವ ಕಾಲೇಜು ಹಾಗೂ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು, ಮಂಡ್ಯ ತಾಲ್ಲೂಕಿನ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು, ಕಲ್ಲುಕಟ್ಟಡ, ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು (ಮಾಜಿ ಪುರಸಭೆ), ಶ್ರೀ ಲಕ್ಷ್ಮಿ ಜನಾರ್ಧನ ಬಾಲಕಿಯರ ಪದವಿ ಪೂರ್ವ ಕಾಲೇಜು, ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು ಅರ್ಕೇಶ್ವರ ನಗರ, ಮಾಂಡವ್ಯ ಪದವಿ ಪೂರ್ವ ಕಾಲೇಜು, ತಾವರೆಗೆರೆ ನೆಹರೂನಗರ, ಸರ್ಕಾರಿ ಪದವಿ ಪೂರ್ವ ಕಾಲೇಜು ಪೊಲೀಸ್ ಕಾಲೋನಿ, ರೋಟರಿ ಸಂಯುಕ್ತ ಪದವಿ ಪೂರ್ವ ಕಾಲೇಜು ಎಂ. ಸಿ. ರಸ್ತೆ, ಸೇಂಟ್ ಜಾನ್ ಪದವಿ ಪೂರ್ವ ಕಾಲೇಜು, ಕಾರ್ಮೆಲ್ ಬಾಲಕಿಯರ ಪದವಿ ಪೂರ್ವ ಕಾಲೇಜು, ಮಾಂಡವ್ಯ ಎಕ್ಸ್ ಲೆನ್ಸ್ ಪದವಿ ಪೂರ್ವ ಕಾಲೇಜು ಎಂ. ಸಿ. ರಸ್ತೆ, ಸದ್ವಿದ್ಯಾ ಪದವಿ ಪೂರ್ವ ಕಾಲೇಜು ಪರೀಕ್ಷಾ ಕೇಂದ್ರಗಳಲ್ಲಿ ವಿದ್ಯಾರ್ಥಿಗಳು ಸಿಇಟಿ ಪರೀಕ್ಷೆಯನ್ನು ಬರೆಯಲಿದ್ದಾರೆ ಎಂದರು.



ಪರೀಕ್ಷಾ ದಿನದಂದು ಪರೀಕ್ಷೆಗೆ ಹಾಜರಾಗುವ ಮತ್ತು ಗೈರುಹಾಜರಾಗುವ ಅಭ್ಯರ್ಥಿಗಳ ವಿವರಗಳನ್ನು ಆನ್ ಲೈನ್ ಮೂಲಕ ದಾಖಲಿಸಬೇಕು. ಪರೀಕ್ಷೆ ಬರೆಯುವ ವಿದ್ಯರ್ಥಿಗಳಿಗೆ ಪರೀಕ್ಷೆ ಬರೆಯಲು ತೊಂದರೆಯಾಗದಂತೆ ಬೆಂಚ್ ಹಾಗೂ ಡೆಸ್ಕ್ ಉತ್ತಮ ವ್ಯವಸ್ಥೆಯಲ್ಲಿ ಇರಲಿ ಎಂದರು.

ಪರೀಕ್ಷಾ ಕರ್ತವ್ಯಕ್ಕೆ ನಿಯೋಜನೆಗೊಂಡಿರುವ ಉಪಮುಖ್ಯ ಅಧೀಕ್ಷಕರು, ವೀಕ್ಷಕರು, ಪ್ರಶ್ನೆಪತ್ರಿಕಾ ಪಾಲಕರು ಹಾಗೂ ಜಾಗೃತದಳದ ಸದಸ್ಯರುಗಳು ಪರೀಕ್ಷೆ ಪ್ರಾರಂಭವಾಗುವುದಕ್ಕೂ ಮೊದಲು 02 ಗಂಟೆ ಮುಂಚಿತವಾಗಿ ಪರೀಕ್ಷಾ ಕೇಂದ್ರದಲ್ಲಿ ಹಾಜರಿರಬೇಕು ಎಂದರು.

ಪರೀಕ್ಷೆ ನಡೆಯುವ ದಿನಗಳಂದು ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀ. ಸುತ್ತಳತೆಯಲ್ಲಿ ಐಪಿಸಿ ಸೆಕ್ಷನ್ 144ನೇ ಕಲಂ ಜಾರಿಗೊಳಿಸಲು ಮತ್ತು ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲಿನ ಜೆರಾಕ್ಸ್ ಅಂಗಡಿಗಳನ್ನು ಮುಚ್ಚಲು ಕ್ರಮಕೈಗೊಳ್ಳಲಾಗುವುದು ಎಂದರು

ಅಭ್ಯರ್ಥಿಗಳು ಯಾವುದೇ ಆಧುನಿಕ ಎಲೆಕ್ಟ್ರಾನಿಕ್ ಉಪಕರಣಗಳು, ಮೊಬೈಲ್ ಫೋನ್, ಬ್ಲೂಟೂತ್, ಕ್ಯಾಲ್ಕುಲೇಟರ್, ಪೆನ್ ಡ್ರೈವ್ ಗಳು. ಇಯರ್‌ವೋನ್‌ಗಳು, ಮೈಕ್ರೋಫೋನ್‌ಗಳು ಮತ್ತು ಕೈಗಡಿಯಾರ ಗಳನ್ನು ಪರೀಕ್ಷಾ ಕೊಠಡಿಯೊಳಗೆ ತರುವುದನ್ನು ನಿಷೇಧಿಸಲಾಗಿರುತ್ತದೆ ಎಂದರು.

ಪರೀಕ್ಷೆಯ ದಿನದಂದು ಅಭ್ಯರ್ಥಿಗಳು ಕಡ್ಡಾಯವಾಗಿ ಪ್ರವೇಶಪತ್ರವನ್ನು ಹಾಜರುಪಡಿಸಬೇಕು. ಕೊನೆಯ ಬೆಲ್ ಆಗುವವರೆವಿಗೂ ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯಿಂದ ಹೊರಹೋಗಲು ಅನುಮತಿ ನೀಡದಂತೆ ಪರೀಕ್ಷಾಕೇಂದ್ರಗಳ ಉಪಮುಖ್ಯ ಅಧೀಕ್ಷಕರು ಅಗತ್ಯ ಕ್ರಮ ವಹಿಸಬೇಕು ಎಂದರು.

6ನೇ ಪುಟಕ್ಕೆ

ನನ್ನ ಹೇಳಿಕೆಯಿಂದ ತಾಯಂದಿರಿಗೆ ನೋವಾಗಿದ್ದರೆ ವಿಷಾದ ವ್ಯಕ್ತಪಡಿಸುವೆ: ಎಚ್ಡಿಕೆ

■ ಕಾಯಕಯೋಗಿ ಸುದ್ದಿ

ಬೆಂಗಳೂರು: ಯಾವುದೇ ಮಹಿಳೆಯರನ್ನೂ ನಾನು ಅವಮಾನಿಸಿಲ್ಲ. ಆದರೂ, ನನ್ನ ಹೇಳಿಕೆಯಿಂದ ರಾಜ್ಯದ ತಾಯಂದಿರಿಗೆ ನೋವಾಗಿದ್ದರೆ ವಿಷಾದ ವ್ಯಕ್ತಪಡಿಸುವೆ ಎಂದು ಜೆಡಿಎಸ್ ರಾಜ್ಯ ಘಟಕದ ಅಧ್ಯಕ್ಷ ಎಚ್.ಡಿ. ಕುಮಾರಸ್ವಾಮಿ ಹೇಳಿದರು.

ಪಕ್ಷದ ಕಚೇರಿಯಲ್ಲಿ ಸೋಮವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, 'ನಾನು ಚುನಾವಣಾ ಪ್ರಚಾರ ಸಭೆಯಲ್ಲಿ ಗ್ಯಾರಂಟಿ ಯೋಜನೆಗಳ ಕುರಿತು ಮಾತನಾಡಿದ್ದೇನೆಯೇ ಹೊರತು ಮಹಿಳೆಯರನ್ನು ಅವಮಾನ ಮಾಡಿಲ್ಲ. ಗ್ಯಾರಂಟಿ ಯೋಜನೆಗಳಿಗೆ ಮಾರುಹೋಗಿ ಮಹಿಳೆಯರು ಕಾಂಗ್ರೆಸ್ ಪಕ್ಷಕ್ಕೆ ಮತ ಹಾಕಿದ್ದರಿಂದ ರಾಜ್ಯದ ಸಂಪತ್ತಿನ ಲೂಟಿ ಮತ್ತು ಸಾಲದ ಹೊರೆ ಹೆಚ್ಚಳ ಆಗಿರುವ ಕುರಿತು ಎಚ್ಚರಿಸಿದ್ದೆ. ಅದನ್ನು ತಪ್ಪಾಗಿ ಬಿಂಬಿಸಲಾಗಿದೆ' ಎಂದರು.

2,000 ಕೊಟ್ಟು ದುಡಿಯುವ ಜನರಿಂದ 5,000 ಕಿಸೆಗಳವು ಮಾಡುತ್ತಾರೆ ಎಂಬುದನ್ನು ಹೇಳಿದ್ದೆ. ಮಹಿಳೆಯರನ್ನು ಗೌರವಿಸಿ ಸಾರಾಯಿ ನಿಷೇಧ ಮಾಡಿದ್ದೆ. ಕೋಟಿಗಟ್ಟಲೆ ಆಮಿಷ ಒಡ್ಡಿದ್ದರು. ಕಾಲಲ್ಲಿ ಒದ್ದು ಸಾರಾಯಿ ನಿಷೇಧ ಮಾಡಿದ್ದೆ ಎಂದು ಹೇಳಿದರು.

ಮಹಿಳೆಯರ ಕುರಿತು ಎಲ್ಲಿಯೂ ಅವಮಾನಕರ ಪದಗಳನ್ನು ಬಳಸಿಲ್ಲ. ತಾಯಂದಿರು ಎಂಬ ಗೌರವಸೂಚಕ ಪದವನ್ನು ಬಳಸಿಯೇ ಮಾತನಾಡಿದ್ದೇನೆ. ದಾರಿ ತಪ್ಪಿದ್ದಾರೆ ಎಂಬುದು ಅಶ್ಲೀಲ ಪದವಲ್ಲ. ಮನೆಯಲ್ಲಿ ಮಕ್ಕಳಿಗೆ ದಾರಿ ತಪ್ಪಬೇಡಿ ಎಂದು ಹೇಳುವುದಿಲ್ಲವೆ? ಅದು ಹೇಗೆ ತಪ್ಪಾಗುತ್ತದೆ ಎಂದು ಕೇಳಿದರು.

ಪ್ರಧಾನಿ ಮೋದಿಯನ್ನು ಹಿಟ್ಲರ್, ಮುಸಲೋನಿಗೆ ಹೋಲಿಸಿ ಅವಹೇಳನ: ಸಿಎಂ ದೂರು

ಬೆಂಗಳೂರು: ಪ್ರಧಾನಿ ನರೇಂದ್ರ ಮೋದಿ ಅವರನ್ನು ಹಿಟ್ಲರ್, ಮುಸಲೋನಿಗೆ ಹೋಲಿಸಿ ಅವಹೇಳನ ಮಾಡುತ್ತಿರುವ ಸಿಎಂ ಸಿದ್ದರಾಮಯ್ಯ ವಿರುದ್ಧ ಕ್ರಮ ಕೈಗೊಳ್ಳಬೇಕು, ಅವರನ್ನು ಸ್ಟಾರ್ ಪ್ರಚಾರಕರ ಪಟ್ಟಿಯಿಂದ ಕೈಬಿಡಬೇಕು ಎಂದು ಕೇಂದ್ರ ಚುನಾವಣಾ ಆಯೋಗಕ್ಕೆ ಬಿಜೆಪಿ ದೂರು ಸಲ್ಲಿಸಿದೆ.

ಶಾಸಕ ಎಸ್, ಸುರೇಶ್ ಕುಮಾರ್ ಮತ್ತು ಬಿಜೆಪಿ ಕಾನೂನು ಪ್ರಕೋಷ್ಠದ ರಾಜ್ಯ ಘಟಕದ ಅಧ್ಯಕ್ಷ ವಿವೇಕ್ ಎಸ್ . ರೆಡ್ಡಿ ನೇತೃತ್ವದ ನಿಯೋಗ ರಾಜ್ಯದ ಮುಖ್ಯ ಚುನಾವಣಾಧಿಕಾರಿ ಮನೋಜ್ ಕುಮಾರ್ ಅವರನ್ನು ಶನಿವಾರ ಭೇಟಿ ಮಾಡಿ ದೂರು ಸಲ್ಲಿಸಿತು.

ಎಸ್, ಸುರೇಶ್ ಕುಮಾರ್ ಅವರು ಮಾತನಾಡಿ ಕೊ

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ-2 | 16-04-2024

ಮಂಡ್ಯ

ಕಾಂಗ್ರೆಸ್ ಅಭ್ಯರ್ಥಿ ಬೆಂಬಲಿಸಲು ಮಾನವ ಬಂಧುತ್ವ ವೇದಿಕೆ ಮನವಿ

ಮಂಡ್ಯ : ಸಂವಿಧಾನ ನಾಶ ಮಾಡುವ ಪಕ್ಷವನ್ನು ಮಣಿಸಬೇಕಾದರೆ ಅದರ ವಿರೋಧಿ ಪಕ್ಷವನ್ನು ಅಧಿಕಾರಕ್ಕೆ ತರುವುದು ಅನಿವಾರ್ಯ. ಆದ್ದರಿಂದ ಮಾನವ ಬಂಧುತ್ವ ವೇದಿಕೆ ಮಂಡ್ಯ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಸ್ಟಾರ್‌ಚಂದ್ರು ಅವರನ್ನು ಬೆಂಬಲಿಸಲು ನಿರ್ಧರಿಸಿದ್ದು, ಜಿಲ್ಲೆಯ ಮತದಾರರು ಕೂಡ ಕಾಂಗ್ರೆಸ್ ಬೆಂಬಲಿಸಬೇಕೆಂದು ವೇದಿಕೆ ಜಿಲ್ಲಾಧ್ಯಕ್ಷ ದೇವರಾಜ್‌ಕೊಪ್ಪ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮತದಾರರು ಇದೊಂದು ಕಾಲಾವಕಾಶವನ್ನು ಬಳಸಿಕೊಂಡು ಪ್ರಜಾಪ್ರಭುತ್ವ ರಕ್ಷಣೆಗೆ ನಿಲ್ಲಬೇಕು. ಸಂವಿಧಾನ ವಿರೋಧಿ ಪಕ್ಷವನ್ನು ತಿರಸ್ಕರಿಸಿ ಕಾಂಗ್ರೆಸ್ ಪಕ್ಷವನ್ನು ಗೆಲ್ಲಿಸಬೇಕೆಂದರು.

ಮಾನವ ಬಂಧುತ್ವ ವೇದಿಕೆ ವೈಜ್ಞಾನಿಕ ಜನಪರ ಸಂಘಟನೆಯಾಗಿದ್ದು, ಸಮಾಜದಲ್ಲಿ ಮೂಢನಂಬಿಕೆ ತೊಲಗಿಸಿ, ವೈಜ್ಞಾನಿಕ ದೃಷ್ಟಿಕೋನ ಬೆಳೆಸುವ ಕೆಲಸ ಮಾಡುತ್ತಾ ಬಂದಿದೆ. ಸಚಿವ ಸತೀಶ್ ಜಾರಕಿಹೊಳಿ ಅವರು ಈ ಸಂಘಟನೆಯನ್ನು ಹುಟ್ಟುಹಾಕಿದ್ದು, ಬುದ್ಧ, ಬಸವ, ಅಂಬೇಡ್ಕರ್ ಕುವೆಂಪು ಅವರ ಚಿಂತನೆಯ ತಳಹದಿಯಲ್ಲಿ ಸಂಘಟನೆಯನ್ನು ಮುನ್ನಡೆಸುತ್ತಾ ಬಂದಿದ್ದಾರೆ. ಇದೊಂದು ರಾಜಕೀಯೇತರ ಸಂಘಟನೆಯಾಗಿದ್ದರು. ಈ ಸಂಧರ್ಭದಲ್ಲಿ ಅನಿವಾರ್ಯವಾಗಿ ರಾಜಕೀಯವಾಗಿ ತನ್ನ ನಿಲುವನ್ನು ಪ್ರಕಟಿಸಬೇಕಾದ ಸ್ಥಿತಿ ಬಂದಿದೆ ಎಂದು ವಿವರಿಸಿದರು.

ಸಂವಿಧಾನ ಪಾಲಿಸಬೇಕಾದ ಮತ್ತು ರಕ್ಷಿಸಬೇಕಾದ ಪ್ರಜಾಪ್ರತಿನಿಧಿಗಳು ಸಂವಿಧಾನವನ್ನೇ ಬದಲಿಸುವ ಮಾತನಾಡುತ್ತಿದ್ದಾರೆ. ಇದಕ್ಕೆ ಪೂರಕವಾಗಿ ಜನ ವಿರೋಧಿ, ರೈತವಿರೋಧಿ ಕಾನೂನುಗಳನ್ನು ಜಾರಿಗೆ ತರುವ ಕೆಲಸವು ಅವರಿದಂದ ನಡೆಯುತ್ತಿದೆ. ಇಂತಹ ಬೆಳವಣಿಗೆಗಳು ಪ್ರಜಾಪ್ರಭುತ್ವವನ್ನು ನಾಶ ಮಾಡುವ ಮುನ್ಸೂಚನೆಯಾಗಿದೆ. ಆದ್ದರಿಂದ ಪ್ರಜಾಪ್ರಭುತ್ವ ಮತ್ತು ಸಂವಿಧಾನಕ್ಕೆ ಈಗ ರಕ್ಷಣೆ ಬೇಕಾಗಿದೆ ಈ ನಿಟ್ಟಿನಲ್ಲಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಬೇಕೆಂದು ಕೋರಿದರು.

ಗೋಷ್ಠಿಯಲ್ಲಿ ವೇದಿಕೆಯ ಪದಾಧಿಕಾರಿಗಳಾದ ಎನ್.ಶೇಖರ್, ಬಸವರಾಜು, ರವಿ, ಮರಿಸ್ವಾಮಿ, ವಿಜಯ್‌ಕುಮಾರ್, ಲೋಕೇಶ್ ಇದ್ದರು.

ಲಿಂಗಾಯತ ಸಮುದಾಯ ಕಾಂಗ್ರೆಸ್ ಅಭ್ಯರ್ಥಿ ಬೆಂಬಲಿಸಲು ಮನವಿ

ಚಲುವರಾಯಸ್ವಾಮಿ ನಾಯಕತ್ವದಲ್ಲಿ ವಿಶ್ವಾಸ : ಬಿಎಸ್‌ವೈಗೆ ಬಗೆದ ದ್ರೋಹಕ್ಕೆ ತಕ್ಕ ಪಾಠ

■ ಕಾಯಕಯೋಗಿ ಸುದ್ದಿ

ಮಂಡ್ಯ : ಮಂಡ್ಯ ಜಿಲ್ಲೆಯ ವೀರಶೈವ ಲಿಂಗಾಯತ ಸಮುದಾಯದ ಜನತೆ ಈ ಬಾರಿಯ ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ವೆಂಕಟರಮಣೇಗೌಡ (ಸ್ಟಾರ್‌ಚಂದ್ರು) ಅವರನ್ನು ಬೆಂಬಲಿಸಬೇಕೆಂದು ಜಿ.ಪಂ. ಮಾಜಿ ಅಧ್ಯಕ್ಷ ಆರ್.ಎನ್.ವಿಶ್ವಾಸ್ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜಕೀಯ ಇತಿಹಾಸವನ್ನು ಅವಲೋಕಿಸಿದಾಗ ನಮ್ಮ ಸಮುದಾಯದ ನಾಯಕತ್ವವನ್ನು ಹಣಿಯುತ್ತಲೇ ಬಂದಿರುವ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರ ಕುಟುಂಬ ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ಅವರಿಗೆ ಅಧಿಕಾರ ವಂಚಿಸಿ ವಚನ ಭ್ರಷ್ಟರಾಗಿದ್ದಾರೆ. ಕುಮಾರಸ್ವಾಮಿಯವರು ಮುಖ್ಯಮಂತ್ರಿಯಾಗಿದ್ದಾಗ ಉಸಿರುಗಟ್ಟಿಸುವ ವಾತಾವರಣವಿತ್ತು. ಯಾವೊಂದು ನಿರ್ಧಾರವನ್ನು ಸಹ ಯಡಿಯೂರಪ್ಪ ತೆಗೆದು ಕೊಳ್ಳಲಾಗದ ಪರಿಸ್ಥಿತಿಯನ್ನು ನಿರ್ಮಾಣ ಮಾಡಿ ಕಿರುಕುಳ ನೀಡಿದ್ದನ್ನು ಮಂಡ್ಯ ಜಿಲ್ಲೆಯ ಸ್ವಾಭಿಮಾನಿ ಲಿಂಗಾಯತರು ಮರೆತಿಲ್ಲ ಎಂದು ತಿಳಿಸಿದರು.

ಕನ್ನಡನಾಡಿನ ಎಲ್ಲಾ ಸಮುದಾಯದ ಬೆಂಬಲದೊಂದಿಗೆ ರಾಜ್ಯದ ಅಧಿಕಾರ ಚುಕ್ಕಾಣಿ ಹಿಡಿದ ಬಿಎಸ್‌ವೈ ಅವರಿಗೆ ಸಮರ್ಪಕವಾಗಿ ಆಡಳಿತ ನಡೆಸಲು ಅಡ್ಡಗಾಲು ಹಾಕುತ್ತಲೇ ಬಂದ ದೇವೇಗೌಡರು ಹಾಗೂ ಕುಮಾರಸ್ವಾಮಿಯವರ ವಿರುದ್ಧ ಸದನದ ಒಳಗೆ 'ಈ ಅಪ್ಪಮಕ್ಕಳು ಮುಂಬರುವ ದಿನಗಳಲ್ಲಿ ನಿಮ್ಮನ್ನು ರಾಜಕೀಯವಾಗಿ ತುಳಿಯುತ್ತಾರೆ. ಇವರೊಟ್ಟಿಗೆ ಹೋದರೆ ನಿಮ್ಮ ಸಿಎಂ ಕನಸು ನನಸಾಗದು' ಎಂದು ಡಿ.ಕೆ.ಶಿವಕುಮಾರ್ ಅವರಿಗೆ ಆಕ್ರೋಶಭರಿತರಾಗಿ ಹೇಳಿದ್ದ ಯಡಿಯೂರಪ್ಪ ನವರು ಇದೀಗ ಅಪವಿತ್ರ ಮೈತ್ರಿ ಮಾಡಿಕೊಂಡಿರುವುದು ನಗೆಪಾಟಲಿಗೀಡಾಗಿದೆ ಎಂದರು.

ರಾಮಕೃಷ್ಣಹೆಗಡೆ, ಜೆ.ಹೆಚ್.ಪಟೇಲ್, ಬಚ್ಚೇಗೌಡ, ಎಂ.ಪಿ.ಪ್ರಕಾಶ್, ಸಿಎಂ ಸಿದ್ದರಾಮಯ್ಯ, ಸಚಿವರಾದ ಚಲುವರಾಯಸ್ವಾಮಿ ಹಾಗೂ ಮಂಡ್ಯ ಜಿಲ್ಲೆಯ ಹಲವಾರು ಶಾಸಕರ ಭವಿಷ್ಯಕ್ಕೆ ಅಡ್ಡಗಾಲು ಹಾಕಿಕೊಂಡೇ ಬಂದಿರುವ ದೇವೇಗೌಡರ ಕುಟುಂಬ ರಾಜಕಾರಣದ ವಿರುದ್ಧ ಜನಜಾಗೃತರಾಗಬೇಕಿದೆ. ಎರಡು ಲಕ್ಷಕ್ಕೂ ಅಧಿಕ ಸಂಖ್ಯೆಯ ಮತದಾರರಿರುವ ನಮ್ಮ



ಸಮಾಜದ ಮತಗಳು ನಿರ್ಣಾಯಕ ಮತಗಳಾಗಿದ್ದು ಯಾವುದೇ ಅಭ್ಯರ್ಥಿಯ ಗೆಲುವು ನಮ್ಮ ಸಮುದಾಯದ ಬಲದ ಮೇಲೆ ನಿಂತಿದೆ ಎಂದು ಹೇಳಿದರು.

ಪ್ರಜಾಪ್ರಭುತ್ವದ ವ್ಯವಸ್ಥೆ ಉಳಿಯಬೇಕಾದರೆ ಕೋಮುವಾದಿ ಬಿಜೆಪಿಯನ್ನು ದೂರ ಇಡಬೇಕಾದ ಅನಿವಾರ್ಯತೆ ಎದುರಾಗಿದೆ. ಹನ್ನೆರಡನೇ ಶತಮಾನದಲ್ಲೇ ಇಂತಹ ಕೋಮು ವಾದವನ್ನು ವಿಶ್ವಗುರು ಬಸವಣ್ಣನವರು ವಿರೋಧಿಸಿ ಸಮಸಮಾಜವನ್ನು ನಿರ್ಮಾಣ ಮಾಡಿದ್ದರು. ಇಂತಹ ಶರಣಪರಂಪರೆಯ ಪರವಾಗಿ ನಿಂತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಅಧಿಕಾರವಧಿಯಲ್ಲಿ ಅಣ್ಣ ಬಸವಣ್ಣನವರನ್ನು ಸಾಂಸ್ಕೃತಿಕ ನಾಯಕರೆಂದು ಘೋಷಿಸಿದರು. ಎಲ್ಲಾ ಸರ್ಕಾರಿ ಕಚೇರಿಯಲ್ಲೂ ಬಸವಣ್ಣನವರ ಭಾವಚಿತ್ರ ಕಡ್ಡಾಯವೆಂದು ಆದೇಶಿಸಿದ್ದಾರೆ. ನಮ್ಮ ಸಮಾಜದ ಪರವಾಗಿ ಅಪಾರ ಪ್ರೀತಿ ಗೌರವವಿಟ್ಟುಕೊಂಡಿರುವ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಬೇಕಿದೆ ಒತ್ತಾಯಿಸಿದರು.

ಸಚಿವ ಎನ್.ಚಲುವರಾಯಸ್ವಾಮಿಯವರು ಜಿಲ್ಲಾಪಂಚಾಯಿತಿ ಸದಸ್ಯರಾಗಿದ್ದ ಕಾಲದಿಂದಲೂ ನಮ್ಮ ಸಮಾಜದ ಮೇಲೆ ಗೌರವವನ್ನಿಟ್ಟುಕೊಂಡ ಪರಿಣಾಮ ಜಿಲ್ಲಾಪಂಚಾಯಿತಿ ಉಪಾಧ್ಯಕ್ಷರು ಹಾಗೂ ಅಧ್ಯಕ್ಷರ ಸ್ಥಾನವನ್ನು ನಮ್ಮ ಸಮಾಜಕ್ಕೆ ನೀಡಿದ್ದರು. ಮುಂಬರುವ ದಿನಗಳಲ್ಲಿ ವೀರಶೈವ ವಿದ್ಯಾರ್ಥಿನಿಲಯದಲ್ಲಿ ಬಸವಭವನ ನಿರ್ಮಾಣ, ಡಿಸಿ ಕಚೇರಿ ಎದುರು ಅಶ್ವರೂಢ ಬಸವಣ್ಣನವರ ಪುತ್ಥಳಿ ಸ್ಥಾಪನೆ, ನಿಗಮಮಂಡಳಿಗಳಲ್ಲಿ ಸಮಾಜಕ್ಕೆ ಆದ್ಯತೆ, ಸ್ಥಳೀಯ ಚುನಾವಣೆಯಲ್ಲಿ ಟಿಕೆಟ್ ಹಂಚಿಕೆ ಸೇರಿದಂತೆ ವೀರಶೈವ ಲಿಂಗಾಯತರ ಪರವಾಗಿ ನಿಲ್ಲುವ ಭರವಸೆ ನೀಡಿರುವ ಹಿನ್ನೆಲೆಯಲ್ಲಿ ಅವರ ಮೇಲೆ ವಿಶ್ವಾಸವಿಟ್ಟು ಸಮಾಜದ ಬಂಧುಗಳು ಕಾಂಗ್ರೆಸ್ ಅಭ್ಯರ್ಥಿಯನ್ನು ಬೆಂಬಲಿಸಬೇಕೆಂದು ಮನವಿ ಮಾಡುತ್ತೇವೆ.

ಅಧಿಕಾರದ ದುರಾಸೆಯಿಂದ ಬಿಜೆಪಿ ಜೆಡಿಎಸ್ ಜೊತೆ ಮಾಡಿಕೊಂಡಿರುವ ಮೈತ್ರಿ ಮುಂದೊಂದು ದಿನ ಬಿಎಸ್‌ವೈ ಪುತ್ರ ವಿಜಯೇಂದ್ರ ಅವರಿಗೆ ಕಂಟಕಪ್ರಾಯವಾಗಲಿದೆ. ಭವಿಷ್ಯದ ಮುಖ್ಯಮಂತ್ರಿ ಕನಸು ಕಾಣುತ್ತಿರುವ ಬಿವೈವಿ ಅವರಿಗೆ ದೇವೇಗೌಡರ ಕುಟುಂಬದವರೆ ಹಿತಶತ್ರುಗಳಾಗಲಿದ್ದಾರೆ. ನಮ್ಮ ಅಮೂಲ್ಯವಾದ ಮತಗಳನ್ನು ಕುಟುಂಬ ರಾಜಕಾರಣಕ್ಕೆ ಒತ್ತೆಯಾಗಿಡದೆ ಸ್ವಾಭಿಮಾನಿ ಶರಣರು ಕಾಂಗ್ರೆಸ್ ಬೆಂಬಲಿಸಬೇಕು ಎಂದು ತಿಳಿಸಿದರು.

ಏ.19ರಂದು ಸಭೆ :

ರಾಜಕೀಯ ತಂತ್ರ-ಕುತಂತ್ರಗಳಿಗೆ ಸಮುದಾಯ ಬಲಿಯಾಗದೆ ಮಂಡ್ಯ ಜಿಲ್ಲೆಯ ಲಿಂಗಾಯತ ಮತದಾರರು ಎಚ್ಚೆತ್ತುಕೊಳ್ಳಬೇಕಾದ ಅನಿವಾರ್ಯತೆ ಸಮುದಾಯದ ಭವಿಷ್ಯದ ದೃಷ್ಟಿಯಿಂದ ಅಗತ್ಯವಿರುವುದನ್ನು ಮನಗಂಡು ಏಪ್ರಿಲ್ 19ನೇ ಶುಕ್ರವಾರ ಬೆಳಿಗ್ಗೆ 11ಗಂಟೆಗೆ ಮಂಡ್ಯ ನಗರದ ಸುಮರವಿ ಕಲ್ಯಾಣ ಮಂಟಪದಲ್ಲಿ 'ಕಾಂಗ್ರೆಸ್ ಬೆಂಬಲಿತ ವೀರಶೈವ ಲಿಂಗಾಯತರ ರಾಜಕೀಯ ಜನಜಾಗೃತಿ ಸಭೆ' ನಡೆಯಲಿದೆ ಎಂದರು.

ಸಚಿವರಾದ ಎನ್.ಚಲುವರಾಯಸ್ವಾಮಿ ಅಧ್ಯಕ್ಷತೆಯಲ್ಲಿ ಬೃಹತ್ ಕೈಗಾರಿಕಾ ಸಚಿವರಾದ ಎಂ.ಬಿ.ಪಾಟೀಲ್, ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ವಿಜಯಾನಂದ ಕಾಶಪ್ಪ, ಕೆಪಿಸಿಸಿ ಕಾರ್ಯಾಧ್ಯಕ್ಷರಾದ ವಿನಯಕುಲಕರ್ಣಿ ಸೇರಿದಂತೆ ಜಿಲ್ಲೆಯ ಎಲ್ಲಾ ಕಾಂಗ್ರೆಸ್ ಶಾಸಕರು, ವಿಧಾನಪರಿಷತ್ ಸದಸ್ಯರು ಹಾಗೂ ಕಾಂಗ್ರೆಸ್ ಮುಖಂಡರು ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು.

ಗೋಷ್ಠಿಯಲ್ಲಿ ಸಮಾಜದ ಮುಖಂಡರಾದ ರಾಷ್ಟ್ರೀಯ ಬಸವದಳದ ಅಧ್ಯಕ್ಷ ಎಂ.ಗುರುಪ್ರಸಾದ್, ಕಾಂಗ್ರೆಸ್ ಮುಖಂಡರಾದ ಕೆರಗೋಡು ಶಿವಾನಂದ, ಸುಂಡಹಳ್ಳಿ ಸೋಮಶೇಖರ್, ಪ್ರಫುಲ್ಲಚಂದ್ರ, ಸಾಸಲು ಈರಪ್ಪ, ಮಹದೇವ ಪ್ರಸಾದ್, ಎಸ್.ಪಿ.ಉಮೇಶ್, ಸಿ.ರುದ್ರೇಶ್, ಆನಂದ್, ರುದ್ರಪ್ಪ, ಸಂತೆಕಸಲಗೆರೆ ಕುಮಾರಸ್ವಾಮಿ ಇದ್ದರು.

ಸಂವಿಧಾನದ ಬಲದಿಂದ ದೇಶ ಸುಭದ್ರ : ರುದ್ರೇಶ್

ಸಿದ್ದಗಂಗಾಶ್ರೀ ಉದ್ಯಾನವನದಲ್ಲಿ ಅಂಬೇಡ್ಕರ್ ಜನ್ಮದಿನಾಚರಣೆ

■ ಕಾಯಕಯೋಗಿ ಸುದ್ದಿ

ಮಂಡ್ಯ : ದೇಶದ ಕಟ್ಟಕಡೆಯ ವ್ಯಕ್ತಿಗೂ ಶಕ್ತಿ ತುಂಬಿದ ಬಾಬಾಸಾಹೇಬ್ ಅಂಬೇಡ್ಕರ್ ಅವರ ಸಂವಿಧಾನದ ಬಲದಿಂದ ಭಾರತದೇಶ ಸುಭದ್ರವಾಗಿದೆ ಎಂದು ಬಿಜೆಪಿ ರಾಜ್ಯ ಮುಖಂಡ ರುದ್ರೇಶ್ ಹೇಳಿದರು.

ನಗರದ ಸ್ವರ್ಣಸಂದ್ರ ಬಡಾವಣೆಯ ಡಾ.ಶ್ರೀ ಶಿವಕುಮಾರಮಹಾಸ್ವಾಮೀಜಿ ಉದ್ಯಾನ ವನದಲ್ಲಿ ಕಾಯಕಯೋಗಿ ಫೌಂಡೇಶನ್ ವತಿಯಿಂದ ಆಯೋಜಿಸಲಾಗಿದ್ದ ಅಂಬೇ ಡ್ಕರ್ 133ನೇ ಜನ್ಮದಿನಾಚರಣೆಯಲ್ಲಿ ಪುಷ್ಪ ನಮನ ಸಲ್ಲಿಸಿ ಅವರು ಮಾತನಾಡಿದರು.

ಅಂಬೇಡ್ಕರ್ ಅವರು ಬರಿ ವ್ಯಕ್ತಿಯಲ್ಲ, ಈ ದೇಶದ ಶಕ್ತಿ. ವಿಶ್ವಕ್ಕೆ ಮಾದರಿಯಾಗುವ ಸಂವಿಧಾನವನ್ನು ಬಾಬಾಸಾಹೇಬ್ ಅಂಬೇ ಡ್ಕರ್ ಅವರು ಕೊಟ್ಟಿದ್ದಾರೆ. ನಾವು ಇಂದು ಸರ್ವ ಸ್ವತಂತ್ರವಾಗಿ ಒಂದಾಗಿ ಬಾಳುತ್ತಿದ್ದೇವೆ ಎಂದರೆ ಅದಕ್ಕೆ ಅಂಬೇಡ್ಕರ್ ಅವರು ಈ ದೇಶಕ್ಕೆ ಕೊಟ್ಟ



ಸಂವಿಧಾನ ಕಾರಣ ಎಂದರು.

ಬಿಜೆಪಿ ರೈತಮೋರ್ಚಾ ರಾಜ್ಯ ಉಪಾಧ್ಯಕ್ಷರಾದ ಎಂ.ಆರ್.ಕುಮಾರಸ್ವಾಮಿ ಮಾತನಾಡಿ, ಬಾಬಾಸಾಹೇಬ್ ಅಂಬೇಡ್ಕರ್ ಅವರು ಒಂದು ವೇಳೆ ಇಲ್ಲದೆ ಹೋಗಿದ್ದರೆ ಅಶಾಂತಿ ತಲೆ ತೂಗುತಿತ್ತು, ಬೇರೆ ದೇಶಗಳ ಹಾಗೆ ದಿವಾಳಿ ಹೇಳುತಿತ್ತು, ಬಾಬಾಸಾಹೇಬ್ ಅಂಬೇಡ್ಕರ್ ಅವರು ರಚಿಸಿರುವ ಸಂವಿಧಾನ ಯಾವುದೇ ಒಂದು ಮೂಲ ವರ್ಗಕ್ಕೆ ಸೇರಿರುವುದು ಅಲ್ಲಾ, ಸರ್ವರಿಗೂ ಸಮಪಾಲು, ಸಮ ಬಾಳು ಸಿಗಲಿ ಎಂಬುದು ಆಶಾಯವಾಗಿದೆ, ಭಾರತ ದೇಶ ಬೇರೆ ದೇಶಗಳಿಗಿನ್ನ ಬಲಿಷ್ಠ ಹೊಂದಿದೆ ಎಂದರೆ ಅದು ಸಂವಿಧಾನದಿಂದ ಮಾತ್ರ ಎಂದರು.

ಲಿಂಗಾಯತ ಮಹಾ ಸಭಾ ಅಧ್ಯಕ್ಷ ಎಂ.ಎಸ್. ಮಂಜುನಾಥ್ ಮಾತನಾಡಿ, ಅಂಬೇಡ್ಕರ್ ಅವರು ರಚಿಸಿರುವ ಸಂವಿಧಾನದಿಂದ ನಾವು ಸಮಾನತೆ ಬದುಕು ಕಟ್ಟಿಕೊಳ್ಳುವ ಸ್ಥಿತಿ ಬಂದಿದೆ, ಒಬ್ಬ ಸಾದಾರಣ ಮನುಷ್ಯನಿಂದ ರಾಷ್ಟ್ರಪತಿಗಳ ವರಗೂ ಒಂದೇ ಸಮಾನತೆ ಯ ಹಕ್ಕನ್ನು ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಕೊಟ್ಟಿದ್ದಾರೆ ಎಂದರು. ಕಾಯಕಯೋಗಿ ಫೌಂಡೇಶನ್ ಅಧ್ಯಕ್ಷ ಎಂ.ಶಿವಕುಮಾರ್ ಅಧ್ಯಕ್ಷೀಯ ಭಾಷಣ ಮಾಡಿದರು. ಬಿಜೆಪಿ ಮುಖಂಡರಾದ ಮೋಹನ್‌ಕುಮಾರ್, ಫೌಂಡೇಶನ್ ಕಾರ್ಯದರ್ಶಿ ಬಿ.ಕೆ.ಅರುಣಜ್ಯೋತಿ, ಅರ್ಚಕರ ಸಂಘದ ಅಧ್ಯಕ್ಷ ಅರುಣ್‌ಕುಮಾರ್, ಶಿವಲಿಂಗಪ್ಪ, ನಾಗೇಶ್ ಮತ್ತಿತರರು ಉಪಸ್ಥಿತರಿದ್ದರು.

ಅನಾರೋಗ್ಯದಿಂದ ವಿದ್ಯಾರ್ಥಿನಿ ಸಾವು

■ ಕಾಯಕಯೋಗಿ ಸುದ್ದಿ

ಮಂಡ್ಯ: ಅನಾರೋಗ್ಯದಿಂದ ವಿದ್ಯಾರ್ಥಿನಿಯೊಬ್ಬರು ಚಿಕಿತ್ಸೆ ಫಲಿಸದೆ ಮೃತಪಟ್ಟಿರುವ ಘಟನೆ ನಡೆದಿದೆ.

ನಗರದ ಮಾಂಡವ್ಯ ಎಕ್ಸಲೆನ್ಸ್ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿನಿ ವರ್ಷಾ(18) ಮೃತ ವಿದ್ಯಾರ್ಥಿನಿ.



ನಗರದ ಕಲ್ಲಹಳ್ಳಿ ವಿ.ವಿ.ನಗರದ ನಿವಾಸಿಗಳಾದ ಅನಿತಾ ಹಾಗೂ ಹೇಮಚಂದ್ರು(ಮಂಜು) ಅವರ ಪುತ್ರಿ ವರ್ಷಾ ಪ್ರಸಕ್ತ 2023- 24ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ.80ರಷ್ಟು ಅಂಕ ಪಡೆದು ಉತ್ತೀರ್ಣರಾಗಿದ್ದರು. ಇದೇ ತಿಂಗಳ 18ರಂದು ನಡೆಯಲಿರುವ ಸಿಇಟಿ ಪರೀಕ್ಷೆಗೆ ಸಿದ್ದತೆ ನಡೆಸಿದ್ದರು.

ಕಳೆದ ಮೂರ್ನಾಲ್ಕು ದಿನಗಳಿಂದ ಹೊಟ್ಟೆ ನೋವಿನಿಂದ ಬಳಲುತ್ತಿದ್ದ ವರ್ಷಾ ಅವರನ್ನು ಶನಿವಾರ ನಗರದ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಭಾನುವಾರ ಅಪೆಂಡಿಸ್ ಶಸ್ತ್ರ ಚಿಕಿತ್ಸೆ ನಡೆಯಬೇಕಿದ್ದು, ಆ ವೇಳೆ ಹೃದಯಾಘಾತ ಸಂಭವಿಸಿ, ತೀವ್ರ ಅಸ್ವಸ್ಥಗೊಂಡಿದ್ದರು.

ತಕ್ಷಣ ಅವರನ್ನು ಮೈಸೂರಿನ ಮಣಿಪಾಲ್ ಆಸ್ಪತ್ರೆಗೆ ದಾಖಲಿಸಿದ್ದು, ಅಲ್ಲಿಯೂ ಹೃದಯ ಸ್ಥಂಭನ ಉಂಟಾಗಿ, ಚಿಕಿತ್ಸೆ ಫಲಿಸಿದೆ ಸೋಮವಾರ ಮುಂಜಾನೆ ಮೃತಪಟ್ಟರು.

ಮಾಜಿ ಸಚಿವ ಸಿ.ಎಸ್.ಪುಟ್ಟರಾಜು, ರೆಡ್‌ಕ್ರಾಸ್ ಸಂಸ್ಥೆ ನಿರ್ದೇಶಕ ರಂಗಸ್ವಾಮಿ, ಮಾಂಡವ್ಯ ಕಾಲೇಜಿನ ನೂರಾರು ವಿದ್ಯಾರ್ಥಿಗಳು ಸೇರಿದಂತೆ ಹಲವು ಗಣ್ಯರು ಮೃತರ ಅಂತಿಮ ದರ್ಶನ ಪಡೆದರು. ಮೃತರ ಅಂತ್ಯಕ್ರಿಯೆ ಕಲ್ಲಹಳ್ಳಿಯ ಸ್ಮಶಾನದಲ್ಲಿ ಸೋಮವಾರ ಸಂಜೆ ಜರುಗಿತು.

ಮೌಲ್ಯಮಾಪನ ಕೇಂದ್ರದ ಸುತ್ತ ನಿಷೇಧಾಜ್ಞೆ

■ ಕಾಯಕಯೋಗಿ ಸುದ್ದಿ

ಮಂಡ್ಯ : ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಮಾರ್ಚ್/ ಏಪ್ರಿಲ್ 2024 ರ ಮುಖ್ಯ ಎಸ್ ಎಸ್ ಎಲ್ ಸಿ ಪರೀಕ್ಷೆಯ ಮೌಲ್ಯಮಾಪನ ಕಾರ್ಯವು ಒಟ್ಟು 6 ಕೇಂದ್ರಗಳಲ್ಲಿ ಏಪ್ರಿಲ್ 15 ರಿಂದ ನಡೆಯಲಿದೆ.

ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಮೌಲ್ಯಮಾಪನ ಕಾರ್ಯವು ಏಪ್ರಿಲ್ 15 ರಿಂದ ಪೂರ್ಣಗೊಳ್ಳುವವರೆಗೂ ಒಟ್ಟು 6 ಮೌಲ್ಯಮಾಪನ ಕೇಂದ್ರಗಳ ಸುತ್ತಮುತ್ತ 200 ಮೀಟರ್ ವ್ಯಾಪ್ತಿಯ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಡಾ.ಕುಮಾರ ಅವರು ಆದೇಶ ಹೊರಡಿಸಿದ್ದಾರೆ.

ಮೌಲ್ಯ ಮಾಪನ ಕೇಂದ್ರಗಳು:

ಮಂಡ್ಯ ಕಾರ್ಮೆಲ್ ಕಾನ್ವೆಂಟ್, ಸ. ಪ. ಪೂ. ಕಾ. ಕಲ್ಲು ಕಟ್ಟಡ, ಸೆಂಟ್ ಜಾನ್ ಪ್ರೌಢಶಾಲೆ, ಸೆಂಟ್ ಜೋಸೆಫ್ ಪ್ರೌಢಶಾಲೆ, ರೋಟರಿ ಪ್ರೌಢಶಾಲೆ, ಲಕ್ಷ್ಮಿ ಜನಾರ್ಧನ ಬಾಲಿಕ ಪ್ರೌಢಶಾಲೆಗಳಲ್ಲಿ ಮೌಲ್ಯಮಾಪನ ನಡೆಯಲಿದೆ.

ಬಿಜೆಪಿ ಬೆಂಬಲಿತ ವೀರಶೈವ ಲಿಂಗಾಯತರ ಸಭೆ

ಬಿವೈವಿ ಕೈ ಬಲಪಡಿಸಿ-ಎಚ್‌ಡಿಕೆ ಗೆಲ್ಲಿಸಿ : ರುದ್ರೇಶ್ ಮನವಿ

■ ಕಾಯಕಯೋಗಿ ಸುದ್ದಿ

ಮಂಡ್ಯ : ವೀರಶೈವ ಲಿಂಗಾಯತ ಸಮುದಾಯದ ಪ್ರಭಾವಿ ನಾಯಕರಾಗಿರುವ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರ ಕೈ ಬಲಪಡಿಸಲು ಮಂಡ್ಯ ಲೋಕಸಭೆ ಚುನಾವಣೆಯಲ್ಲಿ ಮಾಜಿ ಸಿಎಂ ಎಚ್.ಡಿ.ಕುಮಾರಸ್ವಾಮಿಯವರನ್ನು ಅತ್ಯಧಿಕ ಮತಗಳಿಂದ ಗೆಲ್ಲಿಸಬೇಕೆಂದು ರಾಜ್ಯ ಬಿಜೆಪಿ ಮುಖಂಡ ರುದ್ರೇಶ್ ಮನವಿ ಮಾಡಿದರು.

ನಗರದ ವೀರಶೈವ ವಿದ್ಯಾರ್ಥಿನಿಲಯದಲ್ಲಿ ನಡೆದ ಮಂಡ್ಯ ಜಿಲ್ಲೆಯ ವಿವಿಧ ವೀರಶೈವ ಸಂಘಟನೆಗಳ ಒಕ್ಕೂಟದ ಮುಖಂಡರೊಂದಿಗೆ ಸಮಾಲೋಚನಾ ಸಭೆ ನಡೆಸಿ ಅವರು ಮಾತನಾಡಿದರು.

ಜೆಡಿಎಸ್ ಹಾ

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ-3

16-04-2024

ಮೈಸೂರು

"ಹುತಾತ್ಮ ರೈತ ಶುಭಕರನ್ ಸಿಂಗ್ ಚಿತಾ ಭಸ್ಮ ಕೂಡಲಸಂಗಮದಲ್ಲಿ ಲೀನಾ"

ಟಿ ನರಸೀಪುರ:ರೈತರಿಗೆಬೆಂಬಲ ಬೆಲೆ ನೀಡುವಂತೆ ಕೇಂದ್ರ ಸರ್ಕಾರದ ವಿರುದ್ಧ ದೆಹಲಿಯಲ್ಲಿ ನಡೆದಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದಪಂಜಾಬ್ ಮೂಲದ ಯುವ ರೈತ ಹೋರಾಟಗಾರ ಶುಭಕರನ್ ಸಿಂಗ್ ಪೋಲೀಸರ ಗುಂಡೇಟಿಗೆ ಬಲಿಯಾಗಿ ಹುತಾತ್ಮರಾದ ಯುವ ರೈತ ಶುಭಕರನ್ ಸಿಂಗ್ ಚಿತಾ ಬಸ್ಮವನ್ನುಎಲ್ಲಾ ರಾಜ್ಯಗಳಿಗೂ ಕಳಿಸಲಾಗಿದ್ದು ಕರ್ನಾಟಕ ರಾಜ್ಯಕ್ಕೆಕೇರಳ ಗಡಿ ಭಾಗದಿಂದ ಚಿತಾಬಸ್ಮ ತಲುಪಿದ್ದು ನಿನ್ನೆ ಚಾಮರಾಜನಗರದಲ್ಲಿ ಯುವ ರೈತ ಶುಭಕರನ್ ಸಿಂಗ್ ರವರ ಚಿತಾಬಸ್ಮವನ್ನುಕರ್ನಾಟಕ ರಾಜ್ಯ ಕಬ್ಬು ಬೆಳೆಗಾರರ ಸಂಘದರಾಜ್ಯಾಧ್ಯಕ್ಷರಾದ ಕುರುಬೂರು ಶಾಂತಕುಮಾರ್ ನೇತೃತ್ವದಲ್ಲಿ ಮೆರವಣಿಗೆ ಹೊರಡು ಇಂದುದಕ್ಷಿಣ ಕಾಶಿ ಎಂದು ಪ್ರಸಿದ್ಧಿಯಾಗಿರುವ ಕಾಸಿಗಿಂತಲೂ ಗುಲಗಂಜಿ ಮೇಲಾಗಿರುವ ಕೂಡಲಸಂಗಮದಲ್ಲಿ ಕರ್ನಾ ಟಕ ರಾಜ್ಯಕಬ್ಬಿ ಬೆಳೆಗಾರರ ಸಂಘದ ಮೈಸೂರು ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾದಕಿರಗಸೂರು ಶಂಕರ್ ರವರ ನೇತೃತ್ವದಲ್ಲಿ ಅಸ್ಥಿಯನ್ನು ಕೂಡಲಸಂಗಮದಲ್ಲಿವಿಸರ್ಜಿಸಿ ಹುತಾತ್ಮರೈತರ ಆತ್ಮಕ್ಕೆಶಾಂತಿಯನ್ನು ಕೋರಿ ಕೇಂದ್ರ ಹಾಗೂ



ರಾಜ್ಯ ಸರ್ಕಾರವುಹುತಾತ್ಮ ರೈತರ ಕುಟುಂಬಕ್ಕೆಒಂದು ಕೋಟಿ ಪರಿಹಾರವನ್ನು ನೀಡಬೇಕೆಂದುಒತ್ತಾಯಿಸಿದರು

ಈ ಸಂದರ್ಭದಲ್ಲಿತಾಲೂಕು ಅಧ್ಯಕ್ಷ ಅಪ್ಪಣ್ಣ,ಪ್ರಸಾದ್ ನಾಯಕ್, ಪರಶಿವಮೂರ್ತಿ, ಸಾಂತರಾಜು, ರವಿ,ಮಲ್ಲೇಶ್ ಗೌರಿಶಂಕರ್, ಲೋಕೇಶ್, ಶಂಕರ್,ಸೇರಿದಂತೆ ಉಪಸ್ಥಿತರು ಹಾಜರಿದ್ದರು

ವಿಕಸಿತ ಭಾರತ ಮೋದಿ ಗ್ಯಾರಂಟಿ

ಮೈಸೂರಿನ ಬೃಹತ್ ಸಮಾವೇಶದಲ್ಲಿ ಪ್ರಧಾನಿ ನರೇಂದ್ರ ಮೋದಿ ಘೋಷಣೆ

■ ಕಾಯಕಯೋಗಿ ಸುದ್ದಿ

ಮೈಸೂರು: ಮುಂದಿನ 5 ವರ್ಷಗಳಲ್ಲಿ ವಿಕಾಸ ಯೋಜನೆ, ಬಡವರ ಶ್ರೇಯೋಭಿವೃದ್ಧಿ ಶೇ.100 ರಷ್ಟು ಯಶಸ್ಸಾಗುತ್ತದೆ ಇದು ಮೋದಿ ಗ್ಯಾರಂಟಿ ಪ್ರಧಾನಿ ನರೇಂದ್ರಮೋದಿ ಘೋಷಣೆ ಮಾಡಿದರು.

ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಆಯೋಜಿಸಿದ್ದ ಮೈಸೂರು-ಕೊಡಗು, ಮಂಡ್ಯ, ಚಾಮರಾಜನಗರ ಹಾಗೂ ಹಾಸನ ಲೋಕಸಭಾ ಕ್ಷೇತ್ರದ ಮೈತ್ರಿ ಅಭ್ಯರ್ಥಿಗಳ ಬೃಹತ್ ಪ್ರಚಾರ ಸಭೆಯನ್ನುದ್ದೇಶಿಸಿ ಮಾತನಾಡಿದರು. ಕಾಂಗ್ರೆಸ್ ಕೇವಲ ಸಮಸ್ಯೆ ಸೃಷ್ಟಿಸಲು ತಿಳಿದಿದೆ. ಹೀಗಾಗಿಯೇ ಕರ್ನಾಟಕ ದಲ್ಲಿ ಈಗ ಸಮಸ್ಯೆಗಳು ತಾಂಡವವಾಡುತ್ತಿದೆ. ಕರ್ನಾಟಕದಲ್ಲಿ ಖಜಾನೆ ಖಾಲಿಯಾಗಿದ್ದು, ಕಾಂಗ್ರೆಸ್ ಪಾಲಿಗೆ ಕರ್ನಾಟಕ ಕೇವಲ ಎಟಿಎಂ ಯಂತ್ರದಂತೆ ಹಣ ಎಣಿಸುವ ರಾಜ್ಯ ವಾಗಿದೆ ಎಂದರು.

ರಾಜ್ಯದಲ್ಲಿ ಕುಡಿಯುವ ನೀರು ದೊರಕದಂತ ದುಸ್ಥಿತಿಯಿದೆ. ಭಾರತದಲ್ಲಿ ಕಾಂಗ್ರೆಸ್‌ಗೆ ಚುನಾವಣೆ ಎದುರಿಸಲು ಕೋಟ್ಯಾಂತರ ಹಣವನ್ನು ಕರ್ನಾಟಕದಿಂದ ಭರಿಸಲಾಗುತ್ತಿದೆ ದೂರಿದರು. ಇದಕ್ಕೆಲ್ಲಾ ಉತ್ತರವನ್ನು ಮತ ದಾರ ಏ.26ರಂದು ನೀಡಬೇಕಾಗಿದೆ ಎಂದು ಮನವಿ ಮಾಡಿದರು. ಮೈಸೂರು ಕೊಡಗಿನಿಂದ ಸ್ಪರ್ಧಿಸಿರುವ ಯದುವೀರ್ ಒಡೆಯರ್, ಮಂಡ್ಯದಿಂದ ಸ್ಪರ್ಧಿಸಿರುವ ಕುಮಾರಸ್ವಾಮಿ, ಚಾಮರಾಜನಗರದ ಬಾಲರಾಜು, ಹಾಸನದಿಂದ ಸ್ಪರ್ಧಿಸಿರುವ ಪ್ರಜ್ವಲ್ ರೇವಣ್ಣರನ್ನು ಗೆಲ್ಲಿಸುವಂತೆ ಮತದಾರರನ್ನು ಕೋರಿದರು. ಮನೆಮನೆಗೆ ತೆರಳಿ ಮೋದಿಯ ನಮಸ್ಕಾರಗಳನ್ನು ಬಿಜೆಪಿ-ಜೆಡಿಎಸ್ ಕಾರ್ಯಕರ್ತರು ಮತದಾರರಿಗೆ ತಿಳಿಸುವಂತೆಯೂ ಹೇಳಿದರು.

ಮೈಸೂರಿನಲ್ಲಿ ಸೇರಿರುವ ಈ ಜನಸ್ತೋಮ ಕರ್ನಾಟಕದಲ್ಲಿ 28 ಸ್ಥಾನಗಳು ಮೈತ್ರಿ ಪಕ್ಷಗಳ ಅಭ್ಯರ್ಥಿಗಳಿಗೆ ದೊರಕುತ್ತದೆ ಎಂಬುದಕ್ಕೆ ಸಾಕ್ಷಿಯಾಗಿದೆ. ದೇಶದಲ್ಲಿ ಮತ್ತೊಮ್ಮೆ ಮೋದಿ ಬೇಕು ಎಂಬುದನ್ನು ನೀವೆಲ್ಲಾ ಸಾಕ್ಷೀಕರಿಸಿದ್ದೀರಿ. ಬಿಜೆಪಿ ಇಂದು ತನ್ನ ಪ್ರಣಾಳಿಕೆಯ ಸಂಕಲ್ಪ ಪತ್ರ ಬಿಡುಗಡೆಗೊಳಿಸಿದೆ, ಇದು ಮೋದಿಯ ಗ್ಯಾರಂಟಿಯಾಗಿದೆ. ಪ್ರತೀ ಬಡಮ್ಮಕ್ಕೆಗೆ 5 ವರ್ಷದವರೆಗೂ ಉಚಿತ ಪಡಿತರ ದೊರಕಲಿದೆ. 70 ವರ್ಷ ಮೇಲ್ಪಟ್ಟವರಿಗೆ ಆಯುಷ್ಮಾನ್ ಭಾರತ್ ಯೋಜನೆಯಡಿ ಉಚಿತ ಚಿಕಿತ್ಸೆ, ಮಹಿಳೆಯರಿಗೂ ಅನೇಕ ಯೋಜನೆ ನೀಡಿದ್ದೇವೆ. ಡಿಜಿಟಲ್ ಇಂಡಿಯಾ ವ್ಯವಸ್ಥೆಯು ನಮ್ಮನ್ನು ಅಭಿವೃದ್ಧಿಯ ಪರಿವರ್ತನೆಯ



ಹಾದಿಯಲ್ಲಿ ಮುನ್ನಡೆಸುತ್ತಾ ಬಂದಿದೆ. ಭವಿಷ್ಯದ ದಿನಗಳಲ್ಲಿ ಎಕ್ಸ್ ಪ್ರೆಸ್ ವೇ, ವಾಟರ್ ವೇ, ಏರ್ ವೇ ಗಳಲ್ಲಿ ವಿಶ್ವದಜೆ9ಯ ಗುಣಮಟ್ಟ ತಲುಪಿ ವಿಶ್ವದ ಗಮನ ಸೆಳೆಯಲಿದೆ ಎಂದು ಹೇಳಿದರು.

ಕೆಲವೇ ವರ್ಷಗಳ ಹಿಂದಿನವರೆಗೂ ಭಾರತ ಬೇರೆ ದೇಶಗಳನ್ನು ಅವಲಂಭಿಸಿತ್ತು, ಈಗ ಭಾರತ ವಿಶ್ವದಲ್ಲಿಯೇ ನವನವೀನ ತಾಂತ್ರೀಕತೆಯ ದೇಶವಾಗಿ ಪರಿವರ್ತಿತ ವಾಗಿದೆ. ಭಾರತ್ ಅಭಿವೃದ್ಧಿಯ ಪಥದಲ್ಲಿ ಮುನ್ನಡೆಯಲಿದೆ. ಇದು ಮೋದಿ ಗ್ಯಾರಂಟಿ ಯಾಗಿದೆ. ಕರ್ನಾಟಕ ಭಾರತದ ಐಟಿ ಟೆಕ್ನಾಲಜಿ ಹಬ್ ಆಗಿದೆ. ಕರ್ನಾಟಕದ ಯುವಪೀಳಿಗೆಗೆ ಇದರ ಪ್ರಯೋಜನ ಸಿಗಲಿದೆ. ನನ್ನದು ವಿಕಾಸ ಅಬಿವೃದ್ಧಿಯ ಗ್ಯಾರಂಟಿಯಾ ಗಿದೆ. ಕರ್ನಾಟಕದ ಅನೇಕ ಸ್ಥಳಗಳನ್ನು ಪ್ರಗತಿಗೊಳಿಸಿ ವಿಶ್ವಮಟ್ಟದಲ್ಲಿ ಜನಪ್ರಿಯಗೊಳಿ ಸಲಾಗುತ್ತದೆ. ಈ ಎಲ್ಲಾ ಅಭಿವೃದ್ಧಿಗಳಿಗಾಗಿ ಬಿಜೆಪಿ, ಎನ್‌ಡಿಎ ಅನಿವಾರ್ಯವಾಗಿದೆ. ಎನ್‌ಡಿಎ ಏನು ಹೇಳುತ್ತದೆಯೋ ಅದನ್ನು ಮಾಡಿ ತೋರಿಸುತ್ತದೆ ಎಂದರು.

ಅಯೋಧ್ಯೆಯಲ್ಲಿ ಶ್ರೀರಾಮಮಂದಿರದ ನಿರ್ಮಾಣ, ಆರ್ಟಿಕಲ್ 370 ಸೇರಿ ನಾವು ಏನೆಲ್ಲಾ ಹೇಳಿದ್ದೆವೋ ಅದೆಲ್ಲವನ್ನೂ ಮಾಡಿ ತೋರಿಸಿದ್ದೇವೆ. ಬಿಜೆಪಿಯು ತಾಕತ್ತು ಯಾವುದೆಂದರೆ ಅದು ಜನಗಳು ನೀಡುವ ಮತ ಎಂದು ಹೇಳಿದರು. ನೀವು ನೀಡುವ ಮತ ನನ್ನ ಶಕ್ತಿಯನ್ನು ಇಮ್ಮಡಿಗೊಳಿಸಲಿದೆ. ಯಡಿಯೂರಪ್ಪ, ಕುಮಾರಸ್ವಾಮಿಯಂತಹ ನಾಯಕರ ನೇತೃತ್ವ ಕರ್ನಾಟಕದಲ್ಲಿ ಪ್ರಗತಿಗೆ ನಾಂದಿ ಹಾಡುತ್ತದೆ ಎಂದು ನುಡಿದರು.

ಫೀಲ್ಡ್ ಮಾರ್ಷಲ್ ಕಾರ್ಯಪ್ಪ, ಕುವೆಂಪು, ಕೃಷ್ಣರಾಜ ಒಡೆಯರ್ ಅವರ ದೇಶಸೇವೆಯನ್ನೂ ಮೋದಿ ಸ್ಮರಿಸಿದರು. ಈ ಕನ್ನಡ ನಾಡು ತಮ್ಮ ಮಕ್ಕಳನ್ನು ಸೇನೆಗೆ ಸೇರ್ಪಡೆಯಾಗುವಂತೆ ಪ್ರೇರೇಪಿಸಿದ ಪುಣ್ಯ ಭೂಮಿಯಾಗಿದೆ. ದೇಶದ ವಿರುದ್ಧ ಮಾತನಾಡುವವರಿಗೆ ಕಾಂಗ್ರೆಸ್ ಟಿಕೇಟ್ ನೀಡುತ್ತದೆ. ಭಾರತ ಮಾತಾಕೀ ಜೈ ಎಂದು ಹೇಳಲೂ ಕಾಂಗ್ರೆಸ್‌ನಲ್ಲಿ ಅನುಮತಿ ಪಡೆಯುವಂಥ ಪರಿಸ್ಥಿತಿಯಿದೆ. ಇಂಥ ಕಾಂಗ್ರೆಸ್ಸಿಗೆ ಮತಕೊಡುತ್ತೀರಾ ಎಂದು ಪ್ರಶ್ನಿಸಿದರು. ಕಾಂಗ್ರೆಸ್‌ನ ನಾಯಕ ವಿದೇಶಗಳಲ್ಲಿ ಭಾರತದ ಕೀರ್ತಿಗೆ ಚ್ಯುತಿ ಬರುವಂತ ಹೇಳಿಕೆ ನೀಡುತ್ತಿದ್ದಾರೆ. ವಿಶ್ವಮಟ್ಟದಲ್ಲಿ ಮಾನ್ಯತೆಗಳಿಸಿರುವ ಭಾರತಕ್ಕೆ ಈ ಮೂಲಕ ಅಪಕೀರ್ತಿ ತರುವ ಕೆಲಸವನ್ನು ಈ ನಾಯಕ ಮಾಡುತ್ತಿದ್ದಾರೆ. ಕರ್ನಾಟಕದಲ್ಲಿ ಧಾರ್ಮಿಕ ವಿರೋಧಿ ಚಟುವಟಿಕೆಗಳಿಗೆ ಇಲ್ಲಿನ ಸರ್ಕಾರ ಪ್ರೋತ್ಸಾಹ ನೀಡುತ್ತಿದೆ ಎಂದು ಹೇಳಿದರು.

ಅಯೋಧ್ಯೆಯಲ್ಲಿ ಶ್ರೀರಾಮಮಂದಿರ ಪ್ರತಿಷ್ಠಾಪನೆ ಸಂದರ್ಭವೂ ಕಾಂಗ್ರೆಸ್ ನಾಯಕರು ಆಹ್ವಾನ ತಿರಸ್ಕರಿಸಿ ಕಾರ್ಯಕ್ರಮವನ್ನೇ ಬಹಿಷ್ಕರಿಸುವ ಮೂಲಕ ಹಿಂದೂಧರ್ಮದ ಶಕ್ತಿಯ ವಿರುದ್ಧ ತಾವಿದ್ದೇವೆ ಎಂದು ನಿರೂಪಿಸಿದ್ದಾರೆ. ಆದರೆ ಮೋದಿ ಎಲ್ಲಿಯವರೆಗೆ ಇರುತ್ತಾರೋ, ಎಲ್ಲಿಯವರೆಗೆ ನಿಮ್ಮ ಆಶೀರ್ವಾದ ಮೋದಿಗಿರುತ್ತದೋ ಅಲ್ಲಿಯವರೆಗೆ ಹಿಂದೂ ಗಳ ನಂಬಿಕೆಯನ್ನು ಯಾರೂ ಛಿದ್ರಪಡಿಸಲಾಗುವುದಿಲ್ಲ, ಇದು ಮೋದಿ ಗ್ಯಾರಂಟಿ. ಭಾರತದ ವಿಕಾಸಕ್ಕೆ ನಿಮ್ಮ ಮೋದಿ ದಿನದ ಎಲ್ಲಾ ಸಮಯವನ್ನೂ ಕಳೆಯುತ್ತಿದ್ದಾರೆ. ಮೋದಿ ಪಾಲಿಗೆ ಪ್ರತಿಕ್ಷಣವೂ ಜನರ ಹಿತ ಮುಖ್ಯ, ಭಾರತದ ಸಂರಕ್ಷಣೆ ಮುಖ್ಯ. ದಿನದ 24 ಗಂಟೆ ವರ್ಷದ ಎಲ್ಲಾ ಸಮಯವೂ ನಿಮಗಾಗಿ, ನಿಮ್ಮ ಭಾರತಕ್ಕಾಗಿ ಮೀಸಲಿರಿಸಿದ್ದೇನೆಂದು ಹೇಳಿದರು.

ಒಕ್ಕಲಿಗರು ರಾಜರನ್ನೇ ಬೆಂಬಲಿಸುವರು: ಮಾಜಿ ಸಚಿವ ಸಿ.ಟಿ.ರವಿ ಮಾತನಾಡಿ, ಮೈಸೂರು ಕೊಡಗು ಲೋಕಸಭಾ ಕ್ಷೇತ್ರದಲ್ಲಿ ಸಿದ್ದರಾಮಯ್ಯ ತಮ್ಮ ಪಕ್ಷದ ಅಭ್ಯರ್ಥಿಯನ್ನು ಒಕ್ಕಲಿಗ ಎಂದು ಪದೇ ಪದೇ ಹೇಳುತ್ತಿದ್ದಾರೆ. ಆದರೆ ಒಕ್ಕಲಿಗರು ಸದಾ ಮೈಸೂರು ರಾಜವಂಶಸ್ಥರಿಗೆ ಬೆಂಬಲ ನೀಡುತ್ತಾ ಬಂದವರು ಎಂಬುದನ್ನು ಯಾರೂ ಮರೆಯ ಬಾರದು. ಮೈಸೂರು ರಾಜಮನೆತನದ ಬಗ್ಗೆ ಒಕ್ಕಲಿಗರಿಗೆ ಅಪಾರ ಗೌರವವಿದೆ. ಈ ಬಾರಿಯೂ ಯದುವೀರ್ ಅತ್ಯಧಿಕ ಮತಗಳಿಂದ ಈ ಕ್ಷೇತ್ರದಲ್ಲಿ ಗೆಲುವು ಸಾಧಿಸಲಿದ್ದಾರೆ ಎಂದು ಹೇಳಿದರು.ವಿರೋಧ ಪಕ್ಷದ ನಾಯಕ ಆರ್.ಆಶೋಕ್, ಮಾಜಿ ಸಚಿವರಾದ ಎಚ್.ಡಿ. ರೇವಣ್ಣ, ಜಿ.ಟಿ.ದೇವೇಗೌಡ, ವಿಧಾನ ಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ, ಶಾಸಕರಾದ ಹರೀಶ್ ಗೌಡ, ಶ್ರೀವತ್ಸ, ಮಾಜಿ ಸಂಸದರಾದ ಸುಮಲತಾ,ಪ್ರತಾಪಸಿಂಹ, ಮಾಜಿ ಶಾಸಕರಾದ ಎಸ್.ಎ.ರಾಮದಾಸ್, ಹರ್ಷವರ್ಧನ್, ಅಶ್ವಿನ್ ಕುಮಾರ್, ಪ್ರೀತಂ ಗೌಡ ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ರಾಜೇಂದ್ರ, ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ, ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ ಇದ್ದರು.

ಹಾಲು ಉತ್ಪಾದಕರ ಒಕ್ಕೂಟದಿಂದ ಬೇಸಿಗೆಗಾಗಿ ಆರೋಗ್ಯ ಪೂರ್ಣ ಉತ್ಪನ್ನ

■ ಕಾಯಕಯೋಗಿ ಸುದ್ದಿ
ವಿಶೇಷ ವರದಿ

ಮೈಸೂರು ಹಾಲು ಉತ್ಪಾದಕರ ಒಕ್ಕೂಟ ಈ ಬಾರಿ ಬೇಸಿಗೆಗಾಗಿ ವಿಭಿನ್ನ ಹಾಗೂ ಆರೋಗ್ಯ ಪೂರ್ಣ ಉತ್ಪನ್ನ ಗಳನ್ನು ಜನರಿಗೆ ಪರಿಚಯ ಮಾಡಿದೆ. ಉತ್ಪನ್ನಗಳಾದ ರಾಗಿ ಅಂಬಲಿ ಹಾಗೂ ಪ್ರೊ ಬಯಟಿ ಕ್ ಮಜ್ಜಿಗೆಯನ್ನು ಹೊಸದಾಗಿ ಪರಿಚಯ ಮಾಡಿದ್ದಾರೆ.



ಹಾಗೂ ಉತ್ಪನ್ನ ವನ್ನು ಬಿಡುಗಡೆ ಗೊಳಿಸಿದ ಒಂದು ವಾರದೋಳಗೆ ಉತ್ತಮ ಬೇಡಿಕೆ ಬಂದಿದ್ದು ಇದ್ದರಿಂದ ಉತ್ಪಾದನೆ ಮುಂದವರೆಸಿ ಉತ್ಪಾದನೆ ಪ್ರಮಾಣ ಅಧಿಕ ಗೊಳಿಸಲು ಮೈಮುಲ್ ಯೋಜನೆ ರೂಪಿಸುತ್ತಿದೆ.

ಏಪ್ರಿಲ್ ಮೊದಲ ವಾರದಿಂದಲೇ ರಾಗಿ ಅಂಬಲಿ ಹಾಗೂ ಪ್ರೋ ಬಯಾಟಿಕ್ ಮಜ್ಜಿಗೆ



ಯನ್ನು ಹೊರ ತರಲಾಗಿದೆ. ರಾಗಿ ಅಂಬಲಿ ಮನೆಯಲ್ಲಿ ಸಾಮಾನ್ಯವಾಗಿ ತಯಾರಿಸುವ ಪೇಯ. ಬಹುತೇಕರು ರಾಗಿಯನ್ನು ಅಂಬಲಿ ರೂಪದಲ್ಲಿ ಮಾಡಿ ಕುಡಿಯುವುದುಂಟು. ಇದನ್ನೇ ಆರೋಗ್ಯ ಕರವಾಗಿ ರೂಪಿಸುವ ಉದ್ದೇಶದಿಂದ ಹುರಿದ ರಾಗಿ ಹಿಟ್ಟಿಗೆ ಮಜ್ಜಿಗೆ ಹಾಗೂ ಜೀರಿಗೆಯನ್ನು ಸೇರಿಸಿ ರುಚಿಕರವಾಗಿ ಅಂಬಲಿ ರೂಪಿಸಲಾಗಿದೆ. 200 ಎಂಎಲ್ ನ ಪ್ಯಾಕ್ ನ ದರ 10 ರೂ. ಹೊಂದಿದೆ.

ನಾವೇ ರೈತರಿಂದ ರಾಗಿ ಖರೀದಿಸಿ ಅದನ್ನು ಪುಡಿ ಮಾಡಲು ಬೇಕಾದ ಯಂತ್ರ ಗಳನ್ನು ಹಾಕಿದ್ದೇವೆ. ಅಂಬಲಿ, ಮಜ್ಜಿಗೆ, ಜೀರಿಗೆ ಸೇರಿಸಿ ಪ್ಯಾಕೇಟ್ ಅನ್ನು ಸಿದ್ಧಪಡಿಸುತ್ತೇವೆ. ಇದು ದೇಹದ ಉಷ್ಣಾಂಶ ನಿಯಂತ್ರಿಸಲು ಉತ್ತಮ ರಾಮಬಾಣ. ಸದ್ಯ ಒಂದು ಸಾವಿರ ಲೀಟರ್ ರಾಗಿ ಅಂಬಲಿ ತಯಾರಿಸುತ್ತಿದ್ದು, ಬೇಡಿಕೆಯಿದೆ. ಇದನ್ನು ನೋಡಿಕೊಂಡು ಮುಂದೆಯೂ ರಾಗಿ ಅಂಬಲಿ ಪ್ಯಾಕೇಟ್ ಅನ್ನು ದೊಡ್ಡದು ಮಾಡುವ ಯೋಚನೆಯಿದೆ. ಇತರೆ ರುಚಿಗಳಲ್ಲೂ ರಾಗಿ ಅಂಬಲಿ ಹೊರ ತರಲಾಗುತ್ತದೆ ಎನ್ನುವುದು ಮೈಸೂರು ಹಾಲು ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕ ವಿಜಯಕುಮಾರ್ ಹೇಳುತ್ತಾರೆ. ಇನ್ನು ಪ್ರೋಬಯಾಟಿಕ್ ಮಜ್ಜಿಗೆಯೂ ಮೈಸೂರು ಡೇರಿಯ ಹೊಸ ಉತ್ಪನ್ನವೇ. ಇದರಲ್ಲಿ ಔಷಧೀಯ ಗುಣ ಇರುವ ಕೆಲವು ಉತ್ಪನ್ನಗಳನ್ನು ಮಜ್ಜಿಗೆಯೊಂದಿಗೆ ಸೇರಿಸಲಾಗಿದೆ. ಇದು ರುಚಿಕರವೂ ಆಗಿದೆ. ಜತೆಗೆ ಕರುಳಿಗೆ ಸಂಬಂಧಿಸಿ ಏನದರೂ ಸಮಸ್ಯೆ ಇದ್ದರೆ ಅದನ್ನು ಸರಿಪಡಿಸುತ್ತದೆ. ಹೊಟ್ಟೆಯೊಳಗಿನ ಪಚನ ಕ್ರಿಯೆಯನ್ನು ಪ್ರೋ ಬಯಾಟಿಕ್ ಮಜ್ಜಿಗೆ ಮಾಡಲಿದೆ. ಇದರ ಬೆಲೆಯೂ 200 ಎಂಎಲ್ ನ ಪ್ಯಾಕ್‌ಗೆ 10 ರೂ.ಗಳಾಗಿದೆ.

ಹೆಚ್.ಡಿ.ಕುಮಾರಸ್ವಾಮಿ ಹೇಳಿಕೆಗೆ ಖಂಡನೆ

■ ಕಾಯಕಯೋಗಿ ಸುದ್ದಿ

ಮದ್ದೂರು: ರಾಜ್ಯ ಸರ್ಕಾರದ 5 ಗ್ಯಾರಂಟಿ ಯೋಜನೆಗಳಿಂದ ಹಳ್ಳಿಯ ಹೆಣ್ಣು ಮಕ್ಕಳು ದಾರಿ ತಪ್ಪಿದ್ದಾರೆಂದು ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಹೇಳಿಕೆ ನೀಡುವ ಮೂಲಕ ಮಹಿಳೆಯರನ್ನು ಅವಮಾನಿಸಿದ್ದಾರೆ ಎಂದು ಕುಮಾರ ಸ್ವಾಮಿ ಅವರ ಹೇಳಿಕೆಯನ್ನು ಕಿಶನ್ ಕಾಂಗ್ರೆಸ್ ಜಿಲ್ಲಾಧ್ಯಕ್ಷ ದೇಶಹಳ್ಳಿ ಆರ್. ಮೋಹನ್ ಕುಮಾರ್ ಅವರು ಖಂಡಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತುರುವೇಕೆರೆಯಲ್ಲಿ ಪ್ರಚಾರ ಮಾಡುವ ಭರಾಟೆಯಲ್ಲಿ ಗ್ಯಾರಂಟಿ ಯೋಜನೆಗಳನ್ನು ಟೀಕಿಸುವುದರೊಂದಿಗೆ ಮಹಿಳೆಯರನ್ನು ಅವಮಾನಿಸಿದ್ದಾರೆ ಎಂದರು.

ದಾರಿ ತಪ್ಪುವ ಪರಿಪಾಠ ಇರುವ ಕುಮಾರಸ್ವಾಮಿ ಅವರಿಂದ ಮಾತ್ರ ಇಂತಹ ಮಾತುಗಳು ಹೊರಬೀಳಲು ಸಾಧ್ಯ. ಮುಖ್ಯಮಂತ್ರಿ ಆಗಿದ್ದವರ ಬಾಯಿಂದ ಇಂತಹ ಮಾತುಗಳು ಹೊರ ಬರುತ್ತಿರುವುದು ನಾಚಿಕೆಗೇಡಿನ ವಿಚಾರ. ಆ ಸ್ಥಾನದ ಗೌರವ ಕಾಪಾಡುವ ಕನಿಷ್ಠ ಪರಿಜ್ಞಾನ ಅವರಲ್ಲಿಲ್ಲ.

ಗ್ಯಾರಂಟಿ ಯೋಜನೆಗಳ ಅನುಷ್ಠಾನ ಆಗಿರುವುದು ಹಾಗೂ ಜನಸಾಮಾನ್ಯರು ಇದರ ಪ್ರಯೋಜನ ನಡೆಯುತ್ತಿರುವುದನ್ನು ಸಹಿಸಲಾರದೆ ಕುಮಾರಸ್ವಾಮಿ ಇಂತಹ ಹೇಳಿಕೆ ನೀಡಿದ್ದಾರೆ. ಮಹಿಳೆಯರಿಗೆ ಆಗುತ್ತಿರುವ ಲಾಭ ಸಹಿಸುವ ಮನಸ್ಸು ಕುಮಾರಸ್ವಾಮಿ ಅವರಿಗಿಲ್ಲ ಎಂಬುದು ಸಾಬೀತಾಗಿದೆ. ರೈತರ ಹೆಸರು, ಜಾತಿ ಹೆಸರು , ಜನಸಾಮಾನ್ಯರ ಜ್ವಲಂತ ಸಮಸ್ಯೆಗಳನ್ನು ಬಂಡವಾಳ ಮಾಡಿಕೊಂಡು ರಾಜಕಾರಣ ಮಾಡುತ್ತಿರುವ ಕುಮಾರಸ್ವಾಮಿಯವರಿಗೆ ಸಾಮಾನ್ಯ ಜನರ ಬದುಕಿನ ಪರಿವರ್ತನೆ ಹಾಗೂ ಅಭಿವೃದ್ಧಿಯಾಗುವುದು ಇವರ ರಾಜಕೀಯ ಭವಿಷ್ಯದ ದೃಷ್ಟಿಯಿಂದ ಇಷ್ಟವಿಲ್ಲ ಎಂದು ಕುಟುಕಿದ್ದಾರೆ. ಮಹಿಳೆಯರ ಬಗ್ಗೆ ತಪ್ಪಾಗಿ ಮಾತನಾಡಿರುವ ಹಾಗೂ ಮಹಿಳೆಯರಿಗೆ ಅಪಮಾನ ಮಾಡಿರುವ ಕುಮಾರಸ್ವಾಮಿಯವರಿಗೆ ಜಿಲ್ಲೆಯ ಮಹಿಳೆಯರು ಇದೇ 26ರಂದು ನಡೆಯುವ ಚುನಾವಣೆಯಲ್ಲಿ ಬುದ್ಧಿ ಕಲಿಸಬೇಕಾಗಿದೆ.

ಏ.26 ರಂದು ಕಾರ್ಮಿಕರಿಗೆ ವೇತನಸಹಿತ ರಜೆ

ಮಂಡ್ಯ : ಚುನಾವಣಾ ಆಯೋಗವು ಏಪ್ರಿಲ್ 26 ರ ಶುಕ್ರವಾರದಂದು ಕರ್ನಾಟಕ ಲೋಕಸಭಾ ಚುನಾವಣೆಯ ? 2024ರ ಪ್ರಕ್ರಿಯೆಯಲ್ಲಿ ಮತದಾನ ನಿಗಧಿಪಡಿಸಿದೆ. ಸದರಿ ದಿನದಂದು ಮಂಡ್ಯ ಜಿಲ್ಲಾದ್ಯಂತ ಎಲ್ಲಾ ಕಾರ್ಖಾನೆಗಳು, ವಾಣಿಜ್ಯ ಸಂಸ್ಥೆಗಳು, ಹೋಟೆಲ್ ಉದ್ಯಮಗಳು ಹಾಗೂ ಇತರೆ ಸಂಸ್ಥೆಗಳಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ 1951 ರ ಪ್ರಜಾ ಪ್ರತಿನಿಧಿ ಕಾಯ್ದೆ ಸೆಕ್ಷನ್ 135 (ಬಿ) ಅಡಿ ಹಾಗೂ ಕೈಗಾರಿಕಾ ಸಂಸ್ಥೆಗಳ (ರಾಷ್ಟ್ರೀಯ ಮತ್ತು ಹಬ್ಬದ ರಜೆಗಳು) ಕಾಯ್ದೆ ? 1963 ಕಲಂ 3 (ಎ)ರನ್ವಯ ಅರ್ಹ ಮತದಾರರಿಗೆ ವೇತನ ಸಹಿತ ರಜೆ ಘೋಷಿಸಿ ಸಂವಿಧಾನಾತ್ಮಕ ಹಕ್ಕಾದ ಮತವನ್ನು ಚಲಾಯಿಸುವುದಕ್ಕಾಗಿ ಎಲ್ಲಾ ಮಾಲೀಕರು/ನಿಯೋಜಕರು ಅನುವು ಮಾಡಿಕೊಡಬೇಕು.

ಮಾಜಿ ಸಿಎಂ ಎಚ್ಡಿಕೆ ಹೇಳಿಕೆ ಮಹಿಳೆಯರ ಸ್ವಾಭಿಮಾನಕ್ಕೆ ಧಕ್ಕೆ: ಡಾ.

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ-4

16-04-2024

ತುಮಕೂರು-ಚಾಮರಾಜನಗರ

ಕುಣಗಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಮತದಾನ ಜಾಗೃತಿ

ಚಾಮರಾಜನಗರ:- ಲೋಕಸಭಾ ಚುನಾವಣಾ-2024ರ ಪ್ರಯುಕ್ತ ಕೊಳ್ಳೇಗಾಲ ತಾಲ್ಲೂಕು ಪಂಚಾಯತ್ ಸ್ವೀಪ್ ಸಮಿತಿ ವತಿಯಿಂದ ಕುಣಗಳ್ಳಿ ಗ್ರಾಮ ಪಂಚಾಯತಿಯ ಪ್ರಮುಖ ಬೀದಿಗಳಲ್ಲಿ ಮತದಾನದ ಕುರಿತು ರಂಗೋಲಿ ಚಿತ್ರಗಳನ್ನು ವಿಶಿಷ್ಟವಾಗಿ ಚಿತ್ರಿಸುವ ಮೂಲಕ ವಿಶೇಷಚೇತನರು ಹಾಗೂ ಯುವ ಮತದಾರರಿಂದ ಮತದಾನದ ಜಾಗೃತಿ ಜಾಥಾ ನಡೆಯಿತು.

ಜಾಥಾ ಉದ್ದೇಶಿಸಿ ಮಾತನಾಡಿದ ತಾಲೂಕು ಪಂಚಾಯಿತಿ ಸಹಾಯಕ ನಿರ್ದೇಶಕರಾದ ಗೋಪಾಲಕೃಷ್ಣ ಅವರು ಪ್ರತಿಯೊಬ್ಬರು ಮತದಾನ ಕಾರ್ಯದಲ್ಲಿ ಭಾಗವಹಿಸಬೇಕು. ಒಂದು ಮತವು ವ್ಯರ್ಥವಾಗದಂತೆ ಏಪ್ರಿಲ್ 26ರಂದು ನಡೆಯಲಿರುವ ಮತದಾನ ಪ್ರಕ್ರಿಯೆಯಲ್ಲಿ ಪ್ರತಿಯೊಬ್ಬರು ಕಡ್ಡಾಯವಾಗಿ ನೈತಿಕ ಮತದಾನ ಮಾಡಬೇಕು. ಸದೃಢ ಭಾರತ, ಉತ್ತಮ ಸಮಾಜ ನಿರ್ಮಾಣವಾಗುತ್ತದೆ ಎಂದರು.

ಕುಣಗಳ್ಳಿ ಗ್ರಾಮ ಪಂಚಾಯಿತಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಚೆನ್ನೇಶ ಅವರು ಮಾತನಾಡಿ ಮತದಾನ ನಮ್ಮ ಹಕ್ಕು, ಯಾರು ಸಹ ಮತದಾನದಿಂದ ದೂರ ಉಳಿಯದೇ ತಪ್ಪದೇ ಮತ ಚಲಾಯಿಸಬೇಕು. ಪ್ರಜಾಪ್ರಭುತ್ವದ ಹಬ್ಬವನ್ನು ಎಲ್ಲರೂ ಮತ ಚಲಾಯಿಸುವ ಮುಖಾತರ ಆಚರಿಸಬೇಕು. ಐದು ವರ್ಷಕ್ಕೆ ಒಮ್ಮೆ ಮಾತ್ರ ಚುನಾವಣೆ ಬರುವುದು. ಅಭಿವೃದ್ಧಿ ಕೆಲಸಗಳನ್ನು ನೋಡಿ ನಿಮಗೆ ಬೇಕಾದ ವ್ಯಕ್ತಿಯನ್ನು ಆರಿಸಿಕೊಳ್ಳಿ. ಯಾವುದೇ ಆಸೆಗೆ ಒಳಗಾಗದೇ ಪ್ರಬುದ್ಧ ವ್ಯಕ್ತಿಯನ್ನು ಆಯ್ಕೆ ಮಾಡಿ. ಸೂಕ್ತವಾದ ಅಭ್ಯರ್ಥಿ ಆಯ್ಕೆಗೆ ಎಲ್ಲರೂ ತಪ್ಪದೇ ಮತದಾನ ಮಾಡಿ ಎಂದು ತಿಳಿಸಿದರು.



ತಾಲೂಕಿನ ಎಲ್ಲಾ ಗ್ರಾಮ ಪಂಚಾಯತಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಸಂಜೀವಿನಿ ಯೋಜನೆಯ ಒಕ್ಕೂಟದ ಸದಸ್ಯರು, ಗ್ರಾಮ ಪಂಚಾಯಿತಿ ವ್ಯಾಪ್ತಿಯ ವಿಶೇಷಚೇತನರು, ಸಾರ್ವಜನಿಕರು ಹಾಜರಿದ್ದರು.

ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರಲು ಪ್ರತಿಯೊಬ್ಬರೂ ಪಣತೊಡಿ: ಎಚ್‌ಸಿಎಂ

■ ಕಾಯಕಯೋಗಿ ಸುದ್ದಿ

ಚಾಮರಾಜನಗರ: ದೇಶದಲ್ಲಿರುವ ಜನ ವಿರೋಧಿ ಬಿಜೆಪಿ ಸರ್ಕಾರವನ್ನು ತಿರಸ್ಕರಿಸಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರಲು ಪ್ರತಿಯೊಬ್ಬರು ಪಣತೊಟ್ಟಿದ್ದಾರೆ ಎಂದು ಸಮಾಜ ಕಲ್ಯಾಣ ಇಲಾಖೆಯ ಸಚಿವ ಹೆಚ್ ಸಿ ಮಹದೇವಪ್ಪ ತಿಳಿಸಿದರು.

ಹನೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮಾರ್ಟಳ್ಳಿ, ಹೂಗ್ಯಂ, ಪೊನ್ನಾಚಿ, ಗ್ರಾಮದಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಸುನಿಲ್ ಬೋಸ್ ರವರ ಪರ ಹಮ್ಮಿಕೊಳ್ಳಲಾಗಿದ್ದ ಪ್ರಚಾರ ಸಭೆಯಲ್ಲಿ ಅವರು ಮಾತನಾಡಿದರು.

ಬಿಜೆಪಿಯ ಸಂಸದರು, ನಾಯಕರುಗಳು ಸಂವಿಧಾನ ಬದಲಾವಣೆ ಮಾಡಲು 400 ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿಗಳನ್ನು ಆಯ್ಕೆ ಮಾಡಬೇಕು ಎಂದು ಹೇಳುತ್ತಿದ್ದಾರೆ. ಇದು ವರೆಗೂ ಇದರ ಬಗ್ಗೆ ಮಾತನಾಡದೆ ಪ್ರಧಾನ ಮಂತ್ರಿ ನರೇಂದ್ರ ಮೋದಿ ರವರು ಅಂಬೇಡ್ಕರ್‌ರವರೆ ಹುಟ್ಟಿ ಬಂದರು ಸಂವಿಧಾನ ಬದಲಾವಣೆ ಮಾಡಲು ಸಾಧ್ಯವಿಲ್ಲ ಎಂದು ಹೇಳಿಕೆ ನೀಡಿರುವುದು ಹಾಸ್ಯಾಸ್ಪದ ಅಂಬೇಡ್ಕರ್ ಅಮತ್ತೆ ಎಲ್ಲಿ ಹುಟ್ಟಿ ಬರುತ್ತಾರೆ ಎಂದರು.

ಇವರು ಅಧಿಕಾರಕ್ಕೆ ಬರುವ ಮುನ್ನ



ದೇಶದಲ್ಲಿ ಶೇ2% ನಿರುದ್ಯೋಗಿಗಳಿದ್ದರೂ ಇವರು ಅಧಿಕಾರಕ್ಕೆ ಬಂದ ನಂತರ ಶೇ8% ನಿರುದ್ಯೋಗಿಗಳಿದ್ದಾರೆ. ಪ್ರತಿಯೊಂದು ಆಹಾರ ಪದಾರ್ಥಗಳು ಸೇರಿದಂತೆ ವಾಣಿಜ್ಯ ಪದಾರ್ಥ ಗಳಿಗೆ ಜಿಎಸ್‌ಟಿ ಹೇರಿಕೆ ಮಾಡಿದ್ದಾರೆ. ಆಹಾರ ಪದಾರ್ಥಗಳ ಬೆಲೆ ಏರಿಕೆಯಾಗಿದೆ ಇದರಿಂದ ಸಾಮಾನ್ಯ ಜನ ತತ್ತರಿಸಿ ಹೋಗಿ ದ್ದಾರೆ. ಎಚ್.ಡಿ.ಕುಮಾರಸ್ವಾಮಿಗೆ ರಾಜಕೀ ಯದಲ್ಲಿ ಸಿದ್ದಂತಾ ಮತ್ತು ಬದ್ಧತೆ ಎರಡೂ ಇಲ್ಲದಾಗಿದೆ. ರಾಜ್ಯದಲ್ಲಿ ಕಳೆದ ಬಾರಿ ಕಾಂಗ್ರೆಸ್ ಪಕ್ಷದ ಜೊತೆ ಮೈತ್ರಿ ಮಾಡಿ ಕೊಂಡು ಮುಖ್ಯ ಮಂತ್ರಿ ಆಗಿದ್ದಾಗ ಬಿಜೆಪಿ ಕೋಮುವಾದಿ ಪಕ್ಷ ಎಂದು ಹೇಳುತ್ತಿದ್ದವರು. ಈಗ ಅದೇ ಕೋಮುವಾದಿ ಬಿಜೆಪಿ ಪಕ್ಷದ ಜೊತೆ ಮೈತ್ರಿ ಮಾಡಿಕೊಂಡು ಲೋಕಸಭಾ ಚುನಾವಣೆ ಎದುರಿ ಸುತ್ತಿದ್ದಾರೆ. ಅವರಿಗೆ ಜನರ ಅಭಿವೃದ್ಧಿ ಮುಖ್ಯವೋ ಇಲ್ಲ ಅವರ ಕುಟುಂಬದ ಅಭಿ ವೃದ್ಧಿ ಮುಖ್ಯವೋ ಎಂಬುದನ್ನು ನೀವೇ ತೀರ್ಮಾ ನಿಸಬೇಕು.ಈ ನಿಟ್ಟಿನಲ್ಲಿ ಜನಪರ ಕಾಂಗ್ರೆಸ್ ಸರ್ಕಾರಕ್ಕೆ ಮತ ನೀಡುವಂತೆ ತಿಳಿಸಿದರು.

ಮಾಜಿ ಶಾಸಕ ಆರ್ ನರೇಂದ್ರ ಮಾತ ನಾಡಿ ರಾಜ್ಯದಲ್ಲಿ ಇನ್ನು ಮುಂದೆ ಜೆಡಿಎಸ್ ಪಕ್ಷ ಕರ್ನಾಟಕದಲ್ಲಿ ಇರುವುದಿಲ್ಲ ಬಿಜೆಪಿ ಮತ್ತು ಕಾಂಗ್ರೆಸ್ ಪಕ್ಷ ಮಾತ್ರ ಉಳಿದುಕೊಳ್ಳಲಿದೆ, ಜೆಡಿಎಸ್ ಪಕ್ಷವನ್ನು ಬಿಜೆಪಿಯವರೇ ಮುಗಿಸ ಲಿದ್ದಾರೆ. ಹನೂರು ವಿಧಾನಸಭಾ ಕ್ಷೇತ್ರ ಕಾಂಗ್ರೆಸ್‌ನ ಭದ್ರಕೋಟೆ ಕಳೆದ 70 ವರ್ಷಗಳಲ್ಲಿ ಕ್ಷೇತ್ರದ ಜನತೆ ನಮ್ಮ ಕುಟುಂಬದವರಿಗೆ ಸುಮಾರು



50 ವರ್ಷಗಳ ಕಾಲ ಅಧಿಕಾರ ನೀಡಿದ್ದಾರೆ. ನಿಮ್ಮ ಆಶೀರ್ವಾದದಿಂದ ಕ್ಷೇತ್ರದಲ್ಲಿ ನನ್ನ ಕೈಲಾದ ಮಟ್ಟಿಗೆ ಕ್ಷೇತ್ರದ ಅಭಿವೃದ್ಧಿಪಡಿಸಿದ್ದೇನೆ. ಮಾರ್ಟಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಪ್ರಜ್ಞಾವಂತರೆ ಹೆಚ್ಚಿದ್ದು ದೇಶದಲ್ಲಿ ಬಿಜೆಪಿ ಯಾವ ರೀತಿ ಸುಳ್ಳು ಹೇಳಿ ರಾಜಕೀಯ ಮಾಡುತ್ತಿದೆ ಎಂಬುದು ಎಲ್ಲರಿಗೂ ತಿಳಿದಿರುವ ವಿಚಾರ, ಕಳೆದ ಹತ್ತು ವರ್ಷದ ಅವಧಿಯಲ್ಲಿ ಬಿಜೆಪಿಯವರು ಬಡವರಿಗೆ ಯಾವುದೇ ಒಂದು ಉತ್ತಮ ಯೋಜನೆ ತರಲಿಲ್ಲ, ವಿದ್ಯಾವಂತರಿಗೆ ವರ್ಷಕ್ಕೆ ಎರಡು ಕೋಟಿ ಉದ್ಯೋಗ ನೀಡುವುದಾಗಿ ತಮ್ಮ ಪ್ರಣಾಳಿಕೆಯಲ್ಲಿ ನೀಡಿದ್ದರು ಆದರೆ ಇದುವರೆಗೂ ಉದ್ಯೋಗ ಕಲ್ಪಿಸುವಲ್ಲಿ ವಿಫಲ ರಾಗಿದ್ದಾರೆ. ಯುಪಿಎ ನೇತೃತ್ವದ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ರೈತರ ಸಾಲ ಮನ್ನಾ ಮಾಡಲಾಗಿತ್ತು ಆದರೆ ಬಿಜೆಪಿ ಸರ್ಕಾರ ಅಂದಾನಿ ಅಬಾನಿ, ಟಾಟಾ ರವರ ಅಂತಹ ಉಳ್ಳವರ ಸಾಲ ಮನ್ನಾ ಮಾಡಿದ್ದಾರೆ. ರೈತರು ಬೆಳೆದ ಬೆಳೆಗೆ ಬೆಂಬಲ ಬೆಲೆ ನೀಡದೆ ರಸಗೊಬ್ಬರ ಕೀಟನಾಶಕಗಳ ಬೆಲೆ ಏರಿಕೆ ಇದರಿಂದ ರೈತರಿಗೆ ತೀವ್ರ ತೊಂದರೆಯಾ ಗಿದ್ದು ಬಿಜೆಪಿ ಸರ್ಕಾರವನ್ನು ತಿರಸ್ಕರಿಸಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗೆ ಮತ ನೀಡಬೇಕು ಎಂದು ಮನವಿ ಮಾಡಿದರು.

ಇದೇ ಸಂದರ್ಭದಲ್ಲಿ ಜೆಡಿಎಸ್ ಪಕ್ಷದಿಂದ ಕಾಂಗ್ರೆಸ್ ಪಕ್ಷಕ್ಕೆ 10ಕ್ಕೂ ಹೆಚ್ಚು ಕಾರ್ಯಕರ್ತರು ಕಾಂಗ್ರೆಸ್ ಸೇರ್ಪಡೆಯಾದರು.

ಪಶ್ಚಿಮ ಉತ್ತರ ಪ್ರದೇಶವನ್ನು ಪ್ರತ್ಯೇಕ ರಾಜ್ಯವಾಗಿ ಘೋಷಿಸುತ್ತೇವೆ

ನವದೆಹಲಿ: ನಮ್ಮ ಪಕ್ಷವು ರಾಜ್ಯದಲ್ಲಿ ಅಧಿಕಾರಕ್ಕೆ ಬಂದರೆ ಪಶ್ಚಿಮ ಉತ್ತರ ಪ್ರದೇಶವನ್ನು ಪ್ರತ್ಯೇಕ ರಾಜ್ಯವನ್ನಾಗಿ ಘೋಷಿಸಲಾಗುವುದು ಎಂದು ಬಿಎಸ್ ಪಿ ಮುಖ್ಯಸ್ಥೆ ಮಾಯಾವತಿ ಹೇಳಿದ್ದಾರೆ.

ಪಶ್ಚಿಮ ಉತ್ತರ ಪ್ರದೇಶದಲ್ಲಿ ಹೈಕೋರ್ಟ್ ಪೀಠ ಸ್ಥಾಪಿಸುವುದಾಗಿ ಮಾಯಾವತಿ ಘೋಷಿಸಿದ್ದಾರೆ.

ನಮ್ಮ ಪಕ್ಷ ಕೆಲಸ ಮಾಡುವುದರಲ್ಲಿ ನಂಬಿಕೆ ಇಟ್ಟಿದೆ ಹಾಗಾಗಿ ಪ್ರಣಾಳಿಕೆ ಬಿಡುಗಡೆ ಮಾಡುವುದಿಲ್ಲ ಎಂದು ಮಾಯಾವತಿ ಹೇಳಿದರು.

ಉತ್ತರ ಪ್ರದೇಶದಲ್ಲಿ ನನ್ನ ನೇತೃತ್ವದಲ್ಲಿ 4 ಬಾರಿ ಸರ್ಕಾರ ರಚನೆಯಾಗಿದೆ, ನಮ್ಮ ಸರ್ಕಾರದಲ್ಲಿ ಯಾವುದೇ ಕೋಮುಗಲಭೆಗಳು ಇರಲಿಲ್ಲ, ಆದರೆ ಎಸ್ಪಿ ಸರ್ಕಾರದಲ್ಲಿ, ಜಾಟ್ ಮತ್ತು ಮುಸ್ಲಿಂ ಸಮುದಾಯಗಳನ್ನು ಪರಸ್ಪರ ಹೊಡೆದಾಡುವಂತೆ ಮಾಡಲಾಯಿತು. ಇಲ್ಲಿ ತೀರಾ ಹಿಂದುಳಿದ ಸಮುದಾಯದ ಒಬ್ಬರಿಗೆ ಟಿಕೆಟ್ ನೀಡಿ ಈ ಸ್ಥಳದಲ್ಲಿ ಮುಸ್ಲಿಂ ಸಮುದಾಯ ಮತ್ತು ಜಾಟ್ ಸಮುದಾಯದ ನಡುವೆ ಭಾಂದವ್ಯ ಮೂಡಿಸಿದ್ದೇವೆ. ನಾನು ಮುಜಾಫರ್ನಗರದಿಂದ ಮುಸ್ಲಿಂ ಸಮುದಾಯದ ಅಭ್ಯರ್ಥಿಯನ್ನು ಕಣಕ್ಕಿಳಿಸಲು ಬಯಸಿದ್ದೆ ಆದರೆ ಮುಸ್ಲಿಂ ಸಮುದಾಯದಿಂದ ಯಾರೂ ಸ್ಪರ್ಧಿಸಲು ಸಿದ್ಧರಿರಲಿಲ್ಲ ಎಂದರು.



ಗುಂಡ್ಲುಪೇಟೆ:- ತಾಲ್ಲೂಕಿನ ಪಡುಗೂರು ಗ್ರಾಮದಲ್ಲಿ ಅಂಬೇಡ್ಕರ್ ಯುವಕ ಸಂಘದ ವತಿಯಿಂದ ಡಾ.ಬಿ.ಆರ್.ಅಂಬೇಡ್ಕರ್ ಅವರ ಜಯಂತಿಯನ್ನು ಸರಳವಾಗಿ ಆಚರಣೆ ಮಾಡಲಾಯಿತು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಸದಸ್ಯರು, ಮಾಜಿ ಸದಸ್ಯರು, ಸಂಘದ ಅಧ್ಯಕ್ಷರು, ಉಪಾಧ್ಯಕ್ಷರು, ಪದಾಧಿಕಾರಿಗಳು, ಮಹಿಳೆಯರು, ವಿದ್ಯಾರ್ಥಿಗಳು, ಗ್ರಾಮಸ್ಥರು ಉಪಸ್ಥಿತರಿದ್ದರು.



ತುಮಕೂರು ಆಮರಜ್ಯೋತಿನಗರ ಅಂಬೇಡ್ಕರ್ ಪಾರ್ಕ್‌ನಲ್ಲಿ ಮಾನವ ಬಂಧುತ್ವ ವೇದಿಕೆ (ರಿ) ತುಮಕೂರು ಜಿಲ್ಲಾ ವತಿಯಿಂದ ಸಂವಿಧಾನ ಶಿಲ್ಪಿ ಭಾರತರತ್ನ ಬಾಬಾ ಸಾಹೇಬ್ ಅಂಬೇಡ್ಕರ್ ಅವರ 133 ನೇ ಜಯಂತೋತ್ಸವ ಆಚರಿಸಲಾಯಿತು. ಮನೋಜ್ ಟಿ. ಕಲೀಮ್ ಪಾಷಾ, ನಿತೀಶ್,ಶಿವರಾಜ್, ಲಕ್ಷ್ಮಣ್, ನಿವೃತ್ತ ಬಿಇಓ ಹಾಸನ ಸುರೇಶ್ ಜಿ ಆರ್, ಶಾರು ,ಮೌಲಾ ಪಾಷಾ,ಮುನಾವರ್, ಯೂಸುಫ್,ನಾಗರಾಜು, ವಿಜಯಕುಮಾರ್, ಮೊಹಮ್ಮದ್ ಗೌಸ್ ಸಾರ್ವಜಿಕರೊಂದಿಗೆ ಕಾರ್ಯಕ್ರಮ ಆಚರಿಸಲಾಯಿತು.

ಲೋಕಸಭಾ ಸಾರ್ವತ್ರಿಕ ಚುನಾವಣೆ : ಅಭ್ಯರ್ಥಿಗಳ ಚುನಾವಣಾ ವೆಚ್ಚದ ವಿವರ

■ ಕಾಯಕಯೋಗಿ ಸುದ್ದಿ

ಚಾಮರಾಜನಗರ:- ಲೋಕಸಭಾ ಸಾರ್ವತ್ರಿಕ ಚುನಾವಣೆ-2024ರ ಸಂಬಂಧ ಚಾಮರಾಜನಗರ ಲೋಕಸಭಾ ಚುನಾವಣೆಗೆ ಸ್ಪರ್ಧಿಸಿರುವ ಎಲ್ಲಾ ಅಭ್ಯರ್ಥಿಗಳು ಏಪ್ರಿಲ್ 11 ರವರೆಗಿನ ಚುನಾವಣಾ ವೆಚ್ಚದ ವಿವರಗಳನ್ನು ಸಲ್ಲಿಸಿದ್ದು, ಏಪ್ರಿಲ್ 13ರಂದು ನಡೆದ ಮೊದಲ ವೆಚ್ಚ ಪರಿಶೀಲನಾ ಸಭೆಯಲ್ಲಿ ಪರಿಶೀಲಿಸಲಾಗಿರುವ ವಿವರ ಇಂತಿದೆ.

ಬಹುಜನ ಸಮಾಜ ಪಾರ್ಟಿ ಅಭ್ಯರ್ಥಿ ಎಂ. ಕೃಷ್ಣಮೂರ್ತಿ ಅವರು ರೂ. 46,250, ಭಾರತೀಯ ಜನತಾ ಪಾರ್ಟಿ ಅಭ್ಯರ್ಥಿ ಎಸ್. ಬಾಲರಾಜು ಅವರು ರೂ. 13,98,165, ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಸುನೀಲ್ ಬೋಸ್ ಅವರು ರೂ. 16,45,009, ಡಾ. ಅಂಬೇಡ್ಕರ್ ಪೀಪಲ್ಸ್ ಪಾರ್ಟಿ ಅಭ್ಯರ್ಥಿ ಸಿ.ಎಂ. ಕೃಷ್ಣ ಅವರು ರೂ. 12,500, ಕರ್ನಾಟಕ ಜನತಾ ಪಾರ್ಟಿ (ಕೆ.ಜಿ.ಪಿ) ಅಭ್ಯರ್ಥಿ ನಿಂಗರಾಜು. ಎಸ್ ಅವರು ರೂ. 12,500, ಕರ್ನಾಟಕ ಪ್ರಜಾ ಪಾರ್ಟಿ (ರೈತ ಪರ್ವ) ಅಭ್ಯರ್ಥಿ ಪ್ರಸನ್ನ ಕುಮಾರ್. ಬಿ ಅವರು ರೂ. 12,500, ಕರ್ನಾಟಕ ರಾಷ್ಟ್ರ ಸಮಿತಿ (ಕೆ.ಆರ್.ಎಸ್) ಪಕ್ಷದ ಅಭ್ಯರ್ಥಿ ಮಹೇಶ್. ಎಂ ಅವರು ರೂ. 14,375, ಸೋಷಿಯಲಿಸ್ಟ್ ಯುನಿಟಿ ಸೆಂಟರ್ ಆಫ್ ಇಂಡಿಯಾ (ಕಮ್ಯೂನಿಸ್ಟ್) ಪಕ್ಷದ ಅಭ್ಯರ್ಥಿ ಸುಮ. ಎಸ್. ಅವರು ರೂ. 20,586, ಪಕ್ಷೇತರ ಅಭ್ಯರ್ಥಿಗಳಾದ ಎನ್. ಅಂಬರೀಷ್ ಅವರು ರೂ. 12,500, ನಿಂಗರಾಜು. ಜಿ ಅವರು ರೂ. 12,500, ಪ್ರದೀಪ್ ಕುಮಾರ್. ಎಂ ಅವರು ರೂ. 12,500, ಮಹದೇವಸ್ವಾಮಿ. ಬಿ.ಎಂ ಅವರು ರೂ. 12,500, ಜಿ.ಡಿ. ರಾಜಗೋಪಾಲ ಅವರು ರೂ. 13,680 ಹಾಗೂ ಹೆಚ್.ಕೆ. ನ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಾಯಕ ಯೋಗಿ ಪತ್ರಿಕೆ ಕೊಂಡು ಓದಿ

ಉನ್ನತ ಹುದ್ದೆಗಳ ಗುರಿ ಸಾಧನೆಗೆ ಪರಿಶ್ರಮ, ತಾಳ್ಮೆ, ಆತ್ಮವಿಶ್ವಾಸ ಮುಖ್ಯ

■ ಕಾಯಕಯೋಗಿ ಸುದ್ದಿ

ಚಾಮರಾಜನಗರ: ವಿದ್ಯಾರ್ಥಿಗಳು ಉನ್ನತ ಹುದ್ದೆಗಳನ್ನು ಪಡೆಯಲು ಓದಿನಲ್ಲಿ ಶ್ರದ್ಧೆ, ಪರಿಶ್ರಮ, ತಾಳ್ಮೆ ಹಾಗೂ ಆತ್ಮವಿಶ್ವಾಸ ಜಿಲ್ಲಾಧಿಕಾರಿ ಹೊಂದಿರಬೇಕು. ಆಗಮಾತ್ರ ತಾವು ಇತರೆ ವಿದ್ಯಾರ್ಥಿಗಳಿಗೆ ಮಾದರಿ ಯಾಗಲು ಸಾಧ್ಯವಾಗಲಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣ ದಲ್ಲಿ ದ್ವಿತೀಯ ಪಿ.ಯು.ಸಿ ಪರೀಕ್ಷೆಯಲ್ಲಿ ಜಿಲ್ಲೆಗೆ ಅತೀ ಹೆಚ್ಚು ಅಂಕ ಪಡೆದು ಉತ್ತೀರ್ಣ ರಾದ ವಿದ್ಯಾರ್ಥಿಗಳಿಗೆ ಜಿಲ್ಲಾ ಪದವಿ ಪೂರ್ವ ಶಿಕ್ಷಣ ಇಲಾಖೆ ಹಾಗೂ ಜಿಲ್ಲಾ ಪ್ರಾಂಶು ಪಾಲರ ಸಂಘದಿಂದ ಹಮ್ಮಿಕೊಳ್ಳಲಾಗಿದ್ದ ಸನ್ಮಾನ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳನ್ನು ಅಭಿನಂದಿಸಿ, ನಗದು ಬಹುಮಾನ ವಿತರಿಸಿ ಅವರು ಮಾತನಾಡಿದರು.

ಈ ಬಾರಿಯ ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚಿನ ಅಂಕಗಳನ್ನು ಪಡೆದು ಉತ್ತಮ ಸಾಧನೆ ಮಾಡಿದ್ದೀರಿ. ನಿಮ್ಮ ಈ ಸಾಧನೆ ಇತರರಿಗೆ ಪ್ರೇರಣೆಯಾಗಬೆಕು. ಮುಂದಿನ ದಿನಗಳಲ್ಲಿ ಉತ್ತಮ ಶಿಕ್ಷಣ ಪಡೆದು ಉನ್ನತ ಹುದ್ದೆಗಳನ್ನು



ಅಲಂಕರಿಸಿ ಜಿಲ್ಲೆ, ರಾಜ್ಯ, ದೇಶಕ್ಕೆ ಕೀರ್ತಿ ತರಬೇಕು. ವಿದ್ಯಾರ್ಥಿಗಳು ಸಾಮಾಜಿಕ ಕಳಕಳಿಯನ್ನು ಹೊಂದಿ ಇದೇ ಜಿಲ್ಲೆಯಲ್ಲಿ ಸೇವೆ ಸಲ್ಲಿಸಿ ಜಿಲ್ಲೆಯನ್ನು ಮುಂಚೂಣಿಗೆ ತರಲು ಮುಂದಾಗಬೇಕು ಎಂದರು.

ಪ್ರತಿಯೊಬ್ಬ ವಿದ್ಯಾರ್ಥಿಗೂ ಉನ್ನತ ಸ್ಥಾನ ಪಡೆಯಲು ಉತ್ತಮ ಅವಕಾಶಗಳಿವೆ. ಅವು ಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು. ಜಿಲ್ಲೆಯ ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಪಟ್ಟಣ ಪ್ರದೇಶದ ಮಕ್ಕಳಿಗೆ ಸಮಾನವಾಗಿ ಅಂಕ ಗಳನ್ನು ಪಡೆದು ಉತ್ತೀರ್ಣರಾಗಿದ್ದೀರಿ. ಅವ ರಷ್ಟೆ ನೀವು ಬುದ್ದಿವಂತರು, ಸಮರ್ಥ ರಾಗಿದ್ದೀರಿ. ಪ್ರತಿಯೊಬ್ಬ ವಿದ್ಯಾರ್ಥಿ ಯಲ್ಲೂ ಆತ್ಮವಿಶ್ವಾಸವಿದೆ ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಆನಂದ್ ಪ್ರಕಾಶ್ ಮೀನಾ ಮಾತನಾಡಿ ಭವಿಷ್ಯದಲ್ಲಿ ನಿಗದಿತ ಗುರಿ ಸಾಧನೆಗೆ ಪ್ರಯತ್ನ ಮಾಡಬೇಕು. ವಿದ್ಯಾರ್ಥಿಗಳ ಗುರಿ ಸಾಧನೆಗೆ ಪೋಷಕರು, ಶಿಕ್ಷಕರ ಸಹಕಾರ ಅತೀ ಮುಖ್ಯವಾಗಿದೆ. ಉನ್ನತ ಹುದ್ದೆಗಳನ್ನು ಅಲಂಕರಿಸಿ ಸಮಾಜಕ್ಕೆ ಉತ್ತಮ ಕೊಡುಗೆ ನೀಡಿ ಎಂದು ಸಲಹೆ ನೀಡಿದರು.

ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಮಂಜುನಾಥ ಪ್ರಸನ್ನ ಅವರು ಪ್ರಾಸ್ತಾವಿಕವಾಗಿ ಮಾತನಾಡಿ ದ್ವಿತೀಯಾಯ ಪಿ.ಯು.ಸಿ 1ನೇ ಹಂತದ ಪರೀಕ್ಷೆಯಲ್ಲಿ ಜಿಲ್ಲೆಯಲ್ಲಿ ಉನ್ನತ ಶ್ರೇಣಿ ಪಡೆದಿರುವ ಕಲಾ ವಿಭಾಗದಲ್ಲಿ 3, ವಾಣಿಜ್ಯ ವಿಭಾಗದಲ್ಲಿ 6 ಮತ್ತು ವಿಜ್ಞಾನ ವಿಭಾಗದ 3 ಸೇರಿದಂತೆ ಒಟ್ಟು 12 ಮಂದಿ ವಿದ್ಯಾರ್ಥಿಗಳನ್ನು ಜಿಲ್ಲಾಡಳಿತ ವತಿಯಿಂದ ಗೌರವಿಸಲಾಗುತ್ತಿದೆ ಎಂದರು.

ಇದೇ ಸಂದರ್ಭದಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳು ತಮ್ಮ ಮುಂದಿನ ಭವಿಷ್ಯದ ಗುರಿ ಕುರಿತು ಅನಿಸಿಕೆಗಳನ್ನು ಕಾರ್ಯಕ್ರಮದಲ್ಲಿ ಹಂಚಿಕೊಂಡರು. ವಿದ್ಯಾರ್ಥಿಗಳ ಅನಿಸಿಕೆಗಳಿಗೆ ಜಿಲ್ಲಾಧಿಕಾರಿಯವರಾದ ಶಿಲ್ಪಾ ನಾಗ್ ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಜಿಲ್ಲಾ ಪ್ರಾಂಶುಪಾಲರ ಸಂಘದಿಂದ ಪರೀಕ್ಷೆಯಲ್ಲಿ ಉತ್ತಮ ಅಂಕ ಪಡೆದ ಜಿಲ್ಲೆಯ ವಿವಿಧ ಕಾಲೇಜುಗಳ ವಿದ್ಯಾರ್ಥಿಗಳನ್ನು ಶಾಲು ಹೊದಿಸಿ, ಸ್ಮರಣಿಕೆ ಹಾಗೂ ನಗದು ಬಹುಮಾನ ನೀಡಿ ಸನ್ಮಾನಿಸಲಾಯಿತು.

ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ವಿದ್ಯಾರ್ಥಿಗಳ ಪೋಷಕರು, ಶಿಕ್ಷಕರು ಕಾರ್ಯಕ್ರಮದಲ್ಲಿ ಇದ್ದರ

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ-5

16-04-2024

ಹಾಸನ-ರಾಮನಗರ

ಕರಿಯಪ್ಪ ಹುಟ್ಟುಹಬ್ಬ ಸಂಭ್ರಮಾಚರಣೆ



■ ಕಾಯಕಯೋಗಿ ಸುದ್ದಿ

ಕನಕಪುರ :– ಕರ್ಮಯೋಗಿ ಹಾಗೂ ಹಿರಿಯ ಗಾಂಧಿವಾದಿ ಆರ್.ಇ.ಎಸ್ ಸಂಸ್ಥೆಯ ಪಿತಾಮಹ ಎಸ್. ಕರಿಯಪ್ಪನವರ 125ನೇ ಹುಟ್ಟುಹಬ್ಬವನ್ನು ಸಂಭ್ರಮ ಹಾಗೂ ಸಡಗರದಿಂದ ಆಚರಿಸಲಿರುವುದಾಗಿ ಸಂಸ್ಥೆಯ ಅಧ್ಯಕ್ಷ ಹೆಚ್.ಕೆ. ಶ್ರೀಕಂಠು ತಿಳಿಸಿದರು.

ಸೋಮವಾರ ಸಂಸ್ಥೆಯ ಆವರಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಪೂಜ್ಯ ಕರಿಯಪ್ಪನವರು ಶ್ರೀರಾಮನವಮಿಯಂದು ಜನಿಸಿದ್ದು, ಈ ಹಬ್ಬದ ದಿನವಾದ ಏಪ್ರಿಲ್ 17 ರಂದು ಅವರ ಹುಟ್ಟುಹಬ್ಬದ ಅಂಗವಾಗಿ ಶಾಲೆಯ ಎಲ್ಲಾ ಅಂಗ ಸಂಸ್ಥೆಗಳ ಸಹಸ್ರಾರು ವಿದ್ಯಾರ್ಥಿಗಳು ಸಂಸ್ಥೆಯ ಆವರಣದಲ್ಲಿರುವ ಅವರ ಸಮಾಧಿಗೆ ಪೂಜೆ ಸಲ್ಲಿಸಿ ನಂತರ ನಗರದ ಮುಖ್ಯ ರಸ್ತೆಗಳಲ್ಲಿ ಮೆರವಣಿಗೆ ಸಾಗುವುದರ ಮೂಲಕ ಸಂಸ್ಥೆಯಲ್ಲಿ ವಿವಿಧ ಕಾರ್ಯಕ್ರಮಗಳಿಗೆ ಚಾಲನೆ ನೀಡುವುದಾಗಿ ತಿಳಿಸಿದರು ಈ ಸಂದರ್ಭದಲ್ಲಿ ಸಾರ್ವಜನಿಕರು ಹಾಗೂ ಸಂಸ್ಥೆಯಲ್ಲಿ ವಿದ್ಯಾರ್ಜನೆ ಮಾಡಿದ ಹಳೆಯ ವಿದ್ಯಾರ್ಥಿಗಳು ಭಾಗವಹಿಸುವಂತೆ ಮನವಿ ಮಾಡಿದರು.

ಸಂಸ್ಥೆಯ ಗೌರವ ಕಾರ್ಯದರ್ಶಿ ಪುಟ್ಟಸ್ವಾಮಿ ಹಾಗೂ ಸಿಬ್ಬಂದಿವರ್ಗ ಹಾಜರಿದ್ದರು.

ಮತದಾರರಿಗೆ ಮನೆಯಿಂದಲೇ ಮತದಾನ ಮಾಡಲು ಅವಕಾಶ

■ ಕಾಯಕಯೋಗಿ ಸುದ್ದಿ

ಹಾಸನ: ಲೋಕಸಭಾ ಸಾರ್ವತ್ರಿಕ ಚುನಾವಣೆ–2024ರ ಸಂಬಂಧ ಚುನಾವಣಾ ಆಯೋಗದ ನಿರ್ದೇಶನದಂತೆ 85 ವರ್ಷ ಮೇಲ್ಪಟ್ಟ (35+) ಹಿರಿಯ ನಾಗರೀಕರು (AVSC) ಮತ್ತು ವಿಕಲ ಚೇತನ (PwD) (AVPD) ಮತದಾರರಿಗೆ ಮತದಾರರ ಮನೆಯಿಂದಲೇ ಮತದಾನ ಮಾಡಲು ಅವಕಾಶ ಕಲ್ಪಿಸಲಾಗಿರುತ್ತದೆ.

194–ಅರಸೀಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 580 ಮತದಾರರನ್ನು ಗುರುತಿಸಿದ್ದು, ಏ.13 ರಿಂದ 15 ರಂದು ಮತ ಚಲಾಯಿಸಲು ಎಲ್ಲಾ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ.

ಎಲ್ಲಾ ಮತದಾರರು ಈ ಮತದಾನದಲ್ಲಿ ಭಾಗವಹಿಸುವಂತೆ ಸಾರ್ವಜನಿಕರ ಮಾಹಿತಿಗಾಗಿ ಈ ಮೂಲಕ 194– ಅರಸೀಕೆರೆ ವಿಧಾನಸಭಾ ಕ್ಷೇತ್ರದ ಸಹಾಯಕ ಚುನಾವಣಾಧಿಕಾರಿ ತಿಳಿಸಿದ್ದಾರೆ.

ನಿಮ್ಮ ಆತ್ಮಸಾಕ್ಷಿಗೆ ತಕ್ಕಂತೆ ಮತ ಚಲಾಯಿಸಿ: ಡಾ.ಮಂಜುನಾಥ್

■ ಕಾಯಕಯೋಗಿ ಸುದ್ದಿ

ಕನಕಪುರ: ಈ ಚುನಾವಣೆ ಸ್ವಾಭಿಮಾನ ಹಾಗೂ ದೇಶದ ಸುರಕ್ಷತೆಯ ಚುನಾವಣೆಯಾಗಿದ್ದು ನಿಮ್ಮ ಆತ್ಮಸಾಕ್ಷಿಗೆ ತಕ್ಕಂತೆ ಮತ ಚಲಾಯಿಸಿ ಎಂದು ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಎನ್ ಡಿಎ ಮೈತ್ರಿ ಅಭ್ಯರ್ಥಿ ಡಾ. ಮಂಜುನಾಥ್ ಹೇಳಿದರು.

ಲೋಕಸಭಾ ಚುನಾವಣಾ ಪ್ರಚಾರದ ಅಂಗವಾಗಿ ಜೆಡಿಎಸ್ ಮುಖಂಡರು ಹಾಗೂ ಕಾರ್ಯಕರ್ತರೊಂದಿಗೆ ಡಾ. ಬಾಬಾ ಸಾಹೇಬ್ ಅಂಬೇಡ್ಕರ್‌ಪುತ್ಥಳಿಗೆ ಮಾಲಾರ್ಪಣೆ ಮಾಡಿದ ನಂತರ ನಗರದ ಮೇಳೆಕೋಟೆ, ಅಂಬೇಡ್ಕರ್ ಕಾಲೋನಿ ಸೇರಿದಂತೆ ಸಾತನೂರು, ಕೋಡಿಹಳ್ಳಿ, ದೊಡ್ಡಆಲಹಳ್ಳಿ ಹುಣಸನಹಳ್ಳಿ ಗ್ರಾಮಗಳಲ್ಲಿ ಮತಯಾಚಿಸಿದರು.

ಆಸ್ಪತ್ರೆಯ ವೈದ್ಯರ ಸಹಕಾರದಿಂದ ಸುಮಾರು 75 ಲಕ್ಷ ಹೃದಯ ಚಿಕಿತ್ಸೆ ಮಾಡಿ ಅವರ ಜೀವ ಹಾಗೂ ಜೀವನವನ್ನು ಉಳಿಸಿರುವ ತೃಪ್ತಿಯಿದ್ದು ನನ್ನ ಕೈಲಾದಷ್ಟು ಬಡವರು, ಕೂಲಿ ಕಾರ್ಮಿಕರು, ರೈತರ ಜೀವ ಕಾಪಾಡಿರುವ ಆತ್ಮತೃಪ್ತಿಯಿದೆ. ರಾಜಕೀಯ ನನಗೆ ಹೊಸದಿರಬಹುದು. ಆದರೆ ಜನ ಸಾಮಾನ್ಯರ ಒಡನಾಟ ನನಗೆ ಹತ್ತಿರ ವಾದುದು. ರಾಜಕೀಯದಿಂದ ನಾನು ಏನನ್ನೂ ಸಂಪಾದಿಸಲು ಬಂದಿಲ್ಲ. ದೇಶದ ಹಾಗೂ ಕನ್ನಡ ನಾಡಿನ ಜನರ ಆರೋಗ್ಯ ಸುಧಾರಣೆಗೆ ಏನಾದರೂ ಒಂದು ಶಾಶ್ವತ ಪರಿಹಾರ ಒದಗಿಸಬೇಕು ಬಯಕೆಯಾಗಿದೆ.



ಕ್ಷೇತ್ರದ ಮತದಾರರು ನಿಮ್ಮ ಸೇವೆ ಮಾಡಲು ನನಗೊಂದು ಅವಕಾಶ ಕೊಡಿ. ಆರೋಗ್ಯ ಕ್ಷೇತ್ರದಲ್ಲಿ ಬದಲಾವಣೆ ತರಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದರು.

ವಿಧಾನಪರಿಷತ್ ಸದಸ್ಯ ಯೋಗೇಶ್ವರ್ ಮಾತನಾಡಿ ದೇವೇಗೌಡರ ಮಾರ್ಗದರ್ಶನದಲ್ಲಿ ಯಾರು ನಿರೀಕ್ಷೆ ಮಾಡದ ಒಬ್ಬ ಸರಳ ಸಜ್ಜನ ವ್ಯಕ್ತಿಯನ್ನು ಮಾನ್ಯ ಪ್ರಧಾನ ಮಂತ್ರಿಗಳು ನಮ್ಮ ಲೋಕಸಭಾ ಕ್ಷೇತ್ರಕ್ಕೆ ಆಯ್ಕೆ ಮಾಡಿರುವುದು ಹೆಮ್ಮೆಯ ವಿಷಯ. ಈ ಚುನಾವಣೆ ಧರ್ಮ–ಅಧರ್ಮದ ನಡುವಿನ ಹೋರಾಟ.

ತಮ್ಮ ವೃತ್ತಿ ಜೀವನದಲ್ಲಿ ಲಕ್ಷಾಂತರ ಜನರ ಪ್ರಾಣ ಹಾಗೂ ಜೀವನ ಉಳಿಸಿರುವ ಸರಳ, ಸಜ್ಜನಿಕೆಯ ವ್ಯಕ್ತಿ ಹಾಗೂ ಒಂದೇ ಒಂದು ಕಪ್ಪು ಚುಕ್ಕೆ ಇಲ್ಲದ ವ್ಯಕ್ತಿ ಬೇಕೋ, ದರ್ಪ, ದೌರ್ಜನ್ಯ, ದಬ್ಬಾಳಿಕೆಯಿಂದಲೇ ಜನರನ್ನು ಬೆದರಿಸಿ, ಹೆದರಿಸಿ ರಾಜಕೀಯ ನಡೆಸುತ್ತಿರುವ ವ್ಯಕ್ತಿ ಬೇಕೋ ಜನರೇ ತೀರ್ಮಾನಿಸಬೇಕಿದೆ ಎಂದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಎ.ದೇವೇಗೌಡ, ಜೆಡಿಎಸ್ ರಾಜ್ಯ ಯುವ ಉಪಾಧ್ಯಕ್ಷ ಚಿನ್ನಸ್ವಾಮಿ, ಜೆಡಿಎಸ್ ತಾಲೂಕು ಅಧ್ಯಕ್ಷ ಬಿ.ನಾಗರಾಜು, ಮುಖಂಡರಾದ ಕಬ್ಬಾಳೇಗೌಡ, ಪಂಚಲಿಂಗೇಗೌಡ, ಸಿದ್ಧಮರೀಗೌಡ, ಪುಟ್ಟರಾಜು, ಸಮಾಜ ಸೇವಕ ಅನಿಲ್ ಕುಮಾರ್, ಬಿಜೆಪಿ ಜಿಲ್ಲಾಧ್ಯಕ್ಷ ಆನಂದಸ್ವಾಮಿ, ಜಿಲ್ಲಾ ಮುಖಂಡ ಶಿವಮಾದು, ಗ್ರಾಮಾಂತರ ಮಂಡಲ ಅಧ್ಯಕ್ಷ ಕೆ.ಪಿ.ಕುಮಾರ್, ಪ್ರ. ಕಾರ್ಯದರ್ಶಿ ಬೊಮ್ಮನಹಳ್ಳಿ ಕುಮಾರ್, ನಗರ ಮಂಡಲ ಅಧ್ಯಕ್ಷ ಮಂಜುನಾಥ್, ಬಿಜೆಪಿ ಜಿಲ್ಲಾ ರೈತಾ ಮೋರ್ಚಾ ಪ್ರ. ಕಾರ್ಯದರ್ಶಿ ನಾಗನಂದ್, ಜಿಲ್ಲಾ ಎಸ್‌ಟಿ ಮೋರ್ಚಾ ಅಧ್ಯಕ್ಷ ಶ್ರೀನಿವಾಸ್, ತಾಲೂಕು ಎಸ್‌ಟಿ ಮೋರ್ಚಾ ಅಧ್ಯಕ್ಷ ಶಿವಮುತ್ತು, ಯುವ ಮೋರ್ಚಾ ಅಧ್ಯಕ್ಷ ಸುನೀಲ್, ಶೇಖರ್, ಮಹಿಳಾ ಘಟಕದ ಪವಿತ್ರ, ಇನ್ನು ಮುಂತಾದವರು ಉಪಸ್ಥಿತರಿ ದ್ದರು.

ಅಂಬೇಡ್ಕರ್ ಚಿಂತನೆಗಳು ಬಹುಜನರಿಗೆ ಸ್ಫೂರ್ತಿ: ರಮೇಶ್

■ ಕಾಯಕಯೋಗಿ ಸುದ್ದಿ

ಕನಕಪುರ : ಡಾ" ಬಿ.ಆರ್ ಅಂಬೇಡ್ಕರ್ ಅವರು ಸ್ವತಂತ್ರ ಸಮಾನತೆ ಹಾಗೂ ಭಾತೃತ್ವದ ಮೂಲಕ ಭಾರತದ ಪ್ರತಿಯೊಬ್ಬ ಪ್ರಜೆಗೂ ಸಮಾನ ಸ್ಥಾನಮಾನ ಕಲ್ಪಿಸಿಕೊಡಲು ಶ್ರಮವಹಿಸಿದವರು ಇವರ ಚಿಂತನೆಗಳು ಇಂದಿಗೂ ಬಹುಜನರಿಗೆ ಸ್ಫೂರ್ತಿ ನೀಡುತ್ತಲೇ ಇದೆ ಎಂದು ಬಹುಜನ ಜಾಗೃತಿ ವೇದಿಕೆಯ ಜಿಲ್ಲಾಧ್ಯಕ್ಷ ನೀಲಿರಮೇಶ್ ಬಣ್ಣಿಸಿದರು.

ಕನಕಪುರ ಟೌನ್ ಟಿ ಎಂ ಸಿ ಕಾಲೋನಿಯಲ್ಲಿ ಬಹುಜನ ಜಾಗೃತಿ ವೇದಿಕೆ ವತಿಯಿಂದ ಡಾ" ಬಿಆರ್ ಅಂಬೇಡ್ಕರ್ ರವರ 133ನೇ ಹುಟ್ಟುಹಬ್ಬದ ಜನ್ಮ ದಿನಾಚರಣೆಯಲ್ಲಿ ಅಂಬೇಡ್ಕರ್ ಅವರ ಪ್ರತಿಮೆಗೆ ಪುಷ್ಪ ನಮನ ಮತ್ತು ಕೇಕ್ ಕೆಟ್ ಮಾಡಿ ಮಾತನಾಡಿದರು. ಜಗತ್ತು ಕಂಡ ಶ್ರೇಷ್ಠ ವ್ಯಕ್ತಿ ಡಾ" ಬಿಆರ್ ಅಂಬೇಡ್ಕರ್ ಅಸ್ಪೃಶ್ಯತೆ ಅಸಾಮಾನತೆ ಅವೈಜ್ಞಾನಿಕ ಸಂಪ್ರದಾಯಗಳನ್ನು ವಿರೋಧಿಸಿ ದೀನ ದಲಿತರ ಧ್ವನಿಯಾದವರು. ಅವರ ವಿಚಾರಗಳು ನಮಗೆ ಸದಾ ಆದರ್ಶ ಶೋಷಿತರ ಏಳಿಗೆಗಾಗಿ ಅಂಬೇಡ್ಕರ್ ತತ್ವಗಳ ಅಳವಡಿಕೆ ಅಗತ್ಯವಾಗಿದೆ. ಇತ್ತೀಚೆಗೆ ಸಂವಿ ಧಾನ ಬದಲಾವಣೆ ಮಾತು ಮನುವಾದಿ ಗಳಿಂದ ಎಲ್ಲೆಡೆ ಕೇಳಿ ಬರುತ್ತಿದೆ ಆದರೆ ಅದು ಸಾಧ್ಯವಿಲ್ಲದ ಮಾತು ಸಂವಿಧಾನ ಬದಲಾವಣೆ ಮಾಡಲು ಮುಂದಾದರೆ ದೇಶದಲ್ಲಿ ಮತ್ತೊಂದು ಕೋರೆಗಾವ್ ಯುದ್ಧ ನಡೆಯಲಿದೆ.



ಡಾ" ಬಿಆರ್ ಅಂಬೇಡ್ಕರ್ ದೇಶದ ಸಂಪತ್ತು ಬಹುಜನರು ಮನು ಧರ್ಮಶಾಸ್ತ್ರದ ಸಂಪ್ರದಾಯಿಕ ನಿಯಮಗಳಿಂದ ಶೋಷಣೆಗೆ ಒಳಗಾಗಿದ್ದರು. ಈ ಜೀವ ವಿರೋಧಿ ಧರ್ಮ ಶಾಸ್ತ್ರವನ್ನು ಸುಟ್ಟು ಮಾನವತಾ ವಾದದ ಸಂವಿಧಾನವನ್ನು ರಚಿಸಿಕೊಟ್ಟು ನಮ್ಮೆಲ್ಲರ ಸ್ವಾಭಿಮಾನ ಬದುಕು ಮತ್ತು ಗೌರವಯುತ ಜೀವನಕ್ಕೆ ಅವಕಾಶ ಮಾಡಿಕೊಟ್ಟಿದ್ದಾರೆ. ಮಹಿಳೆಯರಿಗೆ ಮತ್ತು ದಲಿತ ಶೋಷಿತರಿಗೆ ಮತದಾನದ ಹಕ್ಕು ಸಮಾನ ಅವಕಾಶ ಹೆರಿಗೆ ರಜೆ ನೀಡುವುದು ಬಾಬಾ ಸಾಹೇಬರ ಮುಖ್ಯ ಉದ್ದೇಶವಾಗಿತ್ತು. ಆ ಮೂಲಕ ಪ್ರಜಾಪ್ರಭುತ್ವದಲ್ಲಿ ಎಲ್ಲರೂ ಸಮಾನರು ಎಂಬ ಅಂಶವನ್ನು ಎತ್ತಿ ತೋರಿಸಿದ್ದಾರೆ ಎಂದರು.

ಈ ಸಂದರ್ಭದಲ್ಲಿ ನಗರಸಭೆಯ ರಾಜಸ್ವ ನಿರೀಕ್ಷಕರಾದ ರಮೇಶ್ ಗುತ್ತಿಗೆ ಪೌರ ಕಾರ್ಮಿಕರ ಸಂಘದ ಅಧ್ಯಕ್ಷ ವೆಂಕಟರಮಣ ಸ್ವಾಮಿ ನಗರಸಭೆಯ ಅಧಿಕಾರಿಗಳಾದ ರಾಗಯ್ಯ, ವಿನಯ್ ಹಾಗೂ ಗುತ್ತಿಗೆ ನೀರು ಸರಬರಾಜು ಅಧ್ಯಕ್ಷರಾದ ಮೋಹನ ಗ್ರಾಮದ ಮುಖಂಡರಾದ ಮುಲಕೊಂಡಯ್ಯ, ವೆಂಕಟಮ್ಮ ,ನಾಗರಾಜು ,ಆರ್ ವೆಂಕಟೇಶ್, ಶ್ರೀನಿವಾಸ್ ಮೂರ್ತಿ, ಕಲ್ಲಹಳ್ಳಿ ಗ್ರಾಮ ಪಂಚಾಯಿತಿ ಸದಸ್ಯರಾದ ಮಹೇಶ್ ಬಾಬು ಬಹುಜನ ಜಾಗೃತಿ ವೇದಿಕೆಯ ತಾಲೂಕು ಅಧ್ಯಕ್ಷ ಹರೀಶ್, ಪ್ರೇಮ್ ಸಾಗರ್ ಆರ್. ಬೆಂಗಳೂರುವೆಂಕಟೇಶ್, ಲೋಕೇಶ್, ಅಂಗನವಾಡಿ ಕಾರ್ಯಕರ್ತೆ ಮಂಜುಳಾ ಹಾಜರಿದ್ದರು.

"ಎಲ್ಲಾ ವರ್ಗದವರಿಗೆ ಸಮಾನ ಹಕ್ಕು ನೀಡಿದ ಮಹಾನ್ ಚೇತನ ಅಂಬೇಡ್ಕರ್"



ಕನಕಪುರ: ಸ್ವಾತಂತ್ರ್ಯದ ನಂತರದ ಸಂದರ್ಭದಲ್ಲಿ ಕಾನೂನು ಸಚಿವರಾಗಲು ಆಹ್ವಾನ ಪಡೆದ ಅಂಬೇಡ್ಕರ್ ಭಾರತದ ಸಂವಿಧಾನ ರೂಪಿಸುವ ಜವಾಬ್ದಾರಿಯನ್ನು ಹೊತ್ತು ಅಪಾರವಾದ ಶ್ರಮವಹಿಸಿ ನಮ್ಮ ದೇಶಕ್ಕೆ ಉತ್ತಮ ಸಂವಿಧಾನವನ್ನು ರಚಿಸಿ ದೇಶದ ಎಲ್ಲಾ ಧರ್ಮ, ಜನ, ವರ್ಗದವರಿಗೆ ಸಮನಾದ ಹಕ್ಕನ್ನು ನೀಡಿದ ಮಹಾನ್ ಚೇತನ ಎಂದು ತಹಶೀಲ್ದಾರ್ ಸ್ಮಿತಾ ರಾಮು ತಿಳಿಸಿದರು.

ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ತಾಲ್ಲೂಕು ಕಛೇರಿ ಸಭಾಂಗಣದಲ್ಲಿ ಆಯೋಜಿಸಿದ್ದ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ರವರ ಜನ್ಮ ಜಯಂತಿಯಲ್ಲಿ ಬಾಬಾ ಸಾಹೇಬ್ ರ ಭಾವಚಿತ್ರಕ್ಕೆ ಪುಷ್ಪ ನಮನವನ್ನು ಸಲ್ಲಿಸಿ ಮಾತನಾಡಿದ ಅವರು ಇಂದು ಇಡೀ ವಿಶ್ವದಲ್ಲಿ ಸ್ವತಂತ್ರವಾದ ಅನೇಕ ದೇಶಗಳು ಸಾರ್ವಜನಿಕರ ಹಕ್ಕುಗಳನ್ನು ಕಾಪಾಡಲು ಅಸಮರ್ಥವಾಗಿರ ಹಿನ್ನೆಲೆಯಲ್ಲಿ ಭಾರತದ ಈ ಸಂವಿಧಾನ ಎದ್ದು ಕಾಣುತ್ತದೆ ಹಾಗೂ ಇದಕ್ಕೆ ಡಾ. ಅಂಬೇಡ್ಕರ್ ಕೊಡುಗೆ ಯನ್ನು ಸಾರ್ವಜನಿಕವಾಗಿ ಒಪ್ಪಿಕೊಳ್ಳಲಾಗಿದ್ದು ಇಂದು ಡಾ. ಅಂಬೇಡ್ಕರ್ ಅವರನ್ನು ಭಾರತದ ಸಂವಿಧಾನಶಿಲ್ಪಿ ವಿಶ್ವರತ್ನ ಎಂದು ಮುಕ್ತ ಕಂಠದಿಂದ ಕರೆಯಲಾಗುತ್ತಿದೆ ಎಂದರು.

ದಲಿತ ಮುಖಂಡ ಮಲ್ಲಿಕಾರ್ಜುನ್ ಮಾತನಾಡಿ ಬಾಬಾ ಸಾಹೇಬರ ಬಾಲ್ಯದ ಜೀವನದ ಕಷ್ಟಗಳ ಬಗ್ಗೆ ಹೇಳುವುದನ್ನು ಬಿಟ್ಟು ಅವರು ದೇಶಕ್ಕೆ ನೀಡಿದ ಕೊಡುಗೆ ಗಳ ಬಗ್ಗೆ ತಿಳಿಸುವಂತಹ ಕೆಲಸ ಮಾಡಬೇಕಾಗಿದೆ ಎಂದರು

ನಗರಸಭಾ ಆಯುಕ್ತ ಮಹದೇವ್, ನೀಲಿ ರಮೇಶ್, ನವೀನ್ , ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ಶಿವಲಿಂಗೇಗೌಡ , ಪ್ರಗತಿ ಪರ ಸಂಘಟನೆಯ ತಾಲ್ಲೂಕು ಅಧ್ಯಕ್ಷ ಕುಮಾರಸ್ವಾಮಿ ಸೇರಿದಂತೆ ದಲಿತ ಸಂಘಟನೆಗಳ ಮುಖಂಡರು, ಸರ್ಕಾರಿ ಇಲಾಖೆ ಅಧಿಕಾರಿಗಳು ಈ ಸಂದರ್ಭದಲ್ಲಿ ಹಾಜರಿದ್ದರು.

ಹನೂರು: ಮತದಾನ ಜಾಗೃತಿ ಜಾಥಾ

■ ಕಾಯಕಯೋಗಿ ಸುದ್ದಿ

ಚಾಮರಾಜನಗರ:– ಲೋಕಸಭಾ ಚುನಾವಣಾ ಹಿನ್ನೆಲೆ ಹನೂರು ತಾಲ್ಲೂಕು ಪಂಚಾಯಿತಿ ಮತ್ತು ತಾಲ್ಲೂಕು ಸ್ವೀಪ್ ಸಮಿತಿ ವತಿಯಿಂದ ಹನೂರು ಪಟ್ಟಣದಲ್ಲಿಂದು ಚುನಾವಣಾ ಪರ್ವ – ದೇಶದ ಗರ್ವ ಘೋಷ ವಾಕ್ಯದೊಂದಿಗೆ ಮತದಾನ ಜಾಗೃತಿಗಾಗಿ ಜಾಥಾ ಹಮ್ಮಿಕೊಳ್ಳಲಾಗಿತ್ತು.

ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಉಮೇಶ್ ಜಾಥಾಗೆ ಚಾಲನೆ ನೀಡಿದರು. ಜಾಥಾ ಕಾರ್ಯಕ್ರಮವು ಅಂಬೇಡ್ಕರ್ ಸಮುದಾಯದ ಭವನದಿಂದ ಪ್ರಾರಂಭವಾಗಿ ಬಸ್ ನಿಲ್ದಾಣದಲ್ಲಿ ಅಂತ್ಯವಾಯಿತು.

ಇದೇ ವೇಳೆ ಮಾತನಾಡಿದ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಉಮೇಶ್ ಅವರು ಪ್ರತಿಯೊಬ್ಬರು ಕಡ್ಡಾಯವಾಗಿ ಮತದಾನ ಮಾಡಿ. ಮತದಾನ ಮಾಡುವಂತೆ ಇತರರನ್ನು ಪ್ರೇರೇಪಿಸಬೇಕು. ಯಾರು ಕೂಡ ಮತದಾನದಿಂದ ವಂಚಿತರಾಗಬಾರದು. ಯಾವುದೇ ಆಮಿಷಗಳಿಗೆ ಒಳಗಾಗದೆ ನಿಷ್ಪಕ್ಷಪಾತವಾಗಿ ಮತಚಲಾಯಿಸಬೇಕು ಎಂದರು.



ಪಂಚಾಯತ್ ಅಭಿವೃದ್ಧಿ ಅಧಿಕಾರಿ ಸುರೇಶ್ ಅವರು ಮತದಾನದ ಪ್ರತಿಜ್ಞಾ ವಿಧಿ ಬೋಧಿಸಿದರು.

ಸಹಾಯಕ ನಿರ್ದೇಶಕರಾದ ರವೀಂದ್ರ, ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ತಾಲೂಕು ಪಂಚಾಯತಿ ಅಧಿಕಾರಿಗಳು, ಎನ್.ಆರ್.ಎಲ್.ಎಂ ಸಂಘದ ಸದಸ್ಯರು, ಬಿ.ಎಲ್.ಓ ಗಳು ಇದೇ ವೇಳೆ ಇದ್ದರು.

ರಾಜ್ಯಾದ್ಯಂತ ಸಂವಿಧಾನ ಜಾಗೃತಿ ಕಾರ್ಯಕ್ರಮ: ಮಹದೇವಪ್ಪ

■ ಕಾಯಕಯೋಗಿ ಸುದ್ದಿ

ಚಾಮರಾಜನಗರ: ರಾಜ್ಯದ ಪ್ರತಿಯೊಬ್ಬರು ಸಂವಿಧಾನದ ಬಗ್ಗೆ ತಿಳಿದುಕೊಳ್ಳಬೇಕೆಂಬ ದೃಷ್ಟಿಯಿಂದ ರಾಜ್ಯಾದ್ಯಂತ ಸಂವಿಧಾನ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು ಎಂದು ಸಮಾಜ ಕಲ್ಯಾಣ ಇಲಾಖೆಯ ಸಚಿವ ಹೆಚ್ ಸಿ ಮಹಾದೇವಪ್ಪ ತಿಳಿಸಿದರು.

ಹನೂರು ಪಟ್ಟಣದ ಕಾಂಗ್ರೆಸ್ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಪರಿಶಿಷ್ಟ ಜಾತಿ ಸಮುದಾಯದ ಮುಖಂಡರ ಸಭೆಯಲ್ಲಿ ಅವರು ಮಾತನಾಡಿದರು.

ದೇಶದ ಪ್ರತಿಯೊಬ್ಬರಿಗೂ ಸಂವಿಧಾನದ ಬಗ್ಗೆ ತಿಳಿಸಿಕೊಳ್ಳುವ ನಿಟ್ಟಿನಲ್ಲಿ ರಾಜ್ಯದ ಪ್ರತಿಯೊಂದು ಸರ್ಕಾರಿ ಶಾಲೆಗಳಲ್ಲಿ ಪ್ರತಿನಿತ್ಯ ಸಂವಿಧಾನ ಪೀಠಿಕೆ ಓದುವುದು ಹಾಗೂ ಸಂವಿಧಾನದ ಬಗ್ಗೆ ಚರ್ಚೆಗಳು ನಡೆದಾಗ ಇದರ ಮೂಲ ಉದ್ದೇಶ ತಿಳಿಯುತ್ತದೆ ಎಂಬ ನಿಟ್ಟಿನಲ್ಲಿ ಸಂವಿಧಾನ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು ನಾವು ಸಂವಿಧಾನ ರಕ್ಷಣೆ ಮಾಡಿದರೆ ಸಂವಿಧಾನ ನಮ್ಮನ್ನು ರಕ್ಷಣೆ ಮಾಡುತ್ತದೆ. ರಾಜ್ಯದಲ್ಲಿ ಮಹಿಳೆಯರಿಗೆ ನಿರ್ದಿಷ್ಟವಾದ ಆದಾಯ ಇಲ್ಲದೆ ಇರುವುದರಿಂದ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಮಹಿಳೆಯರಿಗೆ ಗೃಹಲಕ್ಷ್ಮಿ ಯೋಜನೆಯಡಿ ಒಂದು ಕೋಟಿ 32 ಲಕ್ಷ ಜನರಿಗೆ 2 ಸಾವಿರ ನೀಡಲಾಗುತ್ತಿದೆ. ಸರ್ಕಾರದ 5 ಯೋಜನೆಗಳಿಂದ ಸುಮಾರು ಐದೂ ಸಾವಿರದ ವರೆಗೆ ಗ್ಯಾರಂಟಿ ಆದಾಯ ಸಿಗುತ್ತಿದೆ ಇದರಿಂದ ಬದುಕಿಗೆ ಭರವಸೆ ಬಂದಿದೆ. ಪ್ರತಿಯೊಬ್ಬರಿಗೂ ಸಮಾನತೆ, ಸಮಾನ ಅವಕಾಶ ಕೊಡುವ ನಿಟ್ಟಿನಲ್ಲಿ ಬಜೆಟ್ ನಲ್ಲಿ ಸಂವಿಧಾನದ ಆಶಯದಂತೆ ಗ್ಯಾರಂಟಿ ಯೋಜನೆಗಳು ಬದುಕುವುದಕ್ಕೆ ಅನುಕೂಲ ಕಲ್ಪಿಸಲಾಗಿದೆ. ನಾವು ಸಂವಿಧಾನವನ್ನು ಉಳಿಸಿಕೊಳ್ಳದಿದ್ದರೆ ಭಾರತ ಇನ್ನೊಂದು ಸ್ವಾತಂತ್ರವಾಗಲಾರದು ಸ್ವಾತಂತ್ರದ ರಕ್ಷಣೆಗೆ ಕಾಂಗ್ರೆಸ್ ಸರ್ಕಾರ ಕೋಮು ಸೌಹಾರ್ದತೆ ಎಲ್ಲ ಧರ್ಮದವರು ಸಾಮರಸ್ಯ ಯಿಂದ ಅಸ್ಪೃಶ್ಯತೆ ನಿವಾರಣೆಯಾಗಬೇಕು, ಸಮೃದ್ಧ ಭಾರತ ನಿರ್ಮಾಣವಾಗಬೇಕು ಕೃಷಿ ಮತ್ತು ಕೃಷಿ ಆಧಾರಿತ ಬದುಕು ಅಭಿವೃದ್ಧಿಯಾಗಬೇಕು ಈ ಉದ್ದೇಶವನ್ನು ಸಂವಿಧಾನದಲ್ಲಿ ಉಲ್ಲೇಖಿಸಿದ್ದಾರೆ.



ಬಿಜೆಪಿಯವರು ಒಂದು ಧರ್ಮದ ದೇಶ ಕಟ್ಟಬೇಕು ಒಂದು ಮತ ಒಂದು ಚುನಾವಣೆ ಒಂದು ರಾಷ್ಟ್ರ ಎಂದು ಹೇಳಲು ಹೊರಟಿದ್ದಾರೆ. ವ್ಯಕ್ತಿ ಪೂಜೆ ಮಾಡಬೇಡಿ ಎಂದು ಹೇಳುತ್ತಾರೆ. ದೇಶದಲ್ಲಿ ಸರ್ವಾಧಿಕಾರ ಆಡಳಿತ ಬಂದರೆ ಜನರ ಜೊತೆ ಬೆರೆಯು ವುದು ಜನಸಾಮಾನ್ಯರ ನೋವು ಸಮಸ್ಯೆ ಕೇಳದಿದ್ದರೆ ಪರಿಹಾರ ಹೇಗೆ ಸಾಧ್ಯ ಜನರ ಪರವಾಗಿ ನ್ಯಾಯ ಕೊಡಿಸು ವವರು ಯಾರು ಎಂದು ಬಿಜೆಪಿ ಸರ್ಕಾರವನ್ನು ತರಾಟೆಗ

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ-6 | 16-04-2024

ಬೆಂಗಳೂರು

ಸ್ವರ್ಣ ಭಾರತ್ ವಿಮೆನ್ ಅಚೀವರ್ 2024 ಪ್ರಶಸ್ತಿ ಪ್ರಧಾನ ಕಾರ್ಯಕ್ರಮ



■ ಕಾಯಕಯೋಗಿ ಸುದ್ದಿ

ದೇವನಹಳ್ಳಿ :ಸ್ವರ್ಣ ಭಾರತ್ ಫೌಂಡೇಶನ್ ವತಿಯಿಂದ ಮಹಿಳಾ ದಿನಾಚರಣೆ ಪ್ರಯುಕ್ತ ನಗರದ ನಯನ ಸಭಾಂಗಣದಲ್ಲಿ ಮಹಿಳಾ ದಿನಾಚರಣೆಯನ್ನು ವಿಜೃಂಭಣೆ ಇಂದ ಆಚರಿಸಲಾಯಿತು ಈ ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಮಹಿಳೆಯರನ್ನು ಗುರುತಿಸಿ ಸ್ವರ್ಣ ಭಾರತ್ ವಿಮೆನ್ ಅಚೀವರ್ 2024 ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಇದೇ ಸಂದರ್ಭದಲ್ಲಿ ಮಾಜಿ ಸುಪ್ರೀಂ ಕೋರ್ಟ್ ನ್ಯಾಯಾಧೀಶರು ಹಾಗೂ ಲೋಕಾಯುಕ್ತ ನ್ಯಾಯಮೂರ್ತಿಗಳಾದ ಸಂತೋಷ್ ಹೆಗಡೆ , ಮಹಿಳಾ ಆಯೋಗದ ಮಾಜಿ ಅಧ್ಯಕ್ಷರಾದ ಪ್ರಮೀಳಾ ನಾಯ್ಡು,ಸಮಾಜ ಸೇವಕರು ಹಾಗೂ ಆರ್ .ವಿ ದೇವರಾಜ ಪ್ರತಿ?ಾನದ ಅಧ್ಯಕ್ಷರಾದ ಡಾ. ಆರ್.ವಿ ಮಮತಾ ದೇವರಾಜ್ ಹಾಗೂ ಸ್ವರ್ಣ ಭಾರತ್ ಫೌಂಡೇಶನ್ ಸಂಸ್ಥಾಪಕರು ಹಾಗೂ ಸಿಇಒ ಡಾ. ರಜಿನಿ ಸಂತೋ?್ ಮತ್ತು ಸಂಸ್ಥೆಯ ಪದಾಧಿಕಾರಿಗಳಾದ ವಿಜಯ್ ಕುಮಾರ್ ಉಪಸ್ಥಿತರಿದ್ದರು.


ಮತ ಪ್ರಚಾರದಲ್ಲಿ ರೈತರಿಂದ ಧಿಕ್ಕಾರ
ಸ್ವಕ್ಷೇತ್ರದಲ್ಲಿಯೇ ಪೇಚಿಗೆ ಸಿಲುಕಿದ ಸಚಿವ ಕೆ.ಎಚ್.ಮುನಿಯಪ್ಪ

■ ಕಾಯಕಯೋಗಿ ಸುದ್ದಿ

ದೇವನಹಳ್ಳಿ: ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ರಕ್ಷಾ ರಾಮಯ್ಯರ ಪರ ಚುನಾವಣಾ ಪ್ರಚಾರಕ್ಕೆ ಭಾನುವಾರ ಆಗಮಿಸಿದ ಸಚಿವ ಕೆ.ಎಚ್.ಮುನಿಯಪ್ಪ ವಿರುದ್ಧ ರೈತರು ಧಿಕ್ಕಾರ ಕೂಗಿ ಪ್ರತಿಭಟಿಸಿದ್ದು, ಸ್ವ ಕ್ಷೇತ್ರದಲ್ಲಿಯೇ ತೀವ್ರ ಮುಖಭಂಗಕ್ಕೆ ಕಾರಣವಾಗಿದೆ.

ಚನ್ನರಾಯಪಟ್ಟಣ ಗ್ರಾಮದ ವೃತ್ತದಲ್ಲಿ ಮತ ಪ್ರಚಾರದ ವೇಳೆ ಸಚಿವರು ಭಾ?ಣ ಪ್ರಾರಂಭಿಸಿದಾಗ, ಭೂ ಸ್ವಾಧೀನ ವಿರೋಧಿ ಹೋರಾಟನಿರತ ರೈತರು ಹಸಿರು ಬಾವುಟ ಪ್ರದರ್ಶಿಸಿ ರಾಜಕೀಯ ಪಕ್ಷಗಳ ಧೋರಣೆಯನ್ನು ಖಂಡಿಸುವ ನಿಟ್ಟಿನಲ್ಲಿ ಪ್ರತಿಭಟಿಸಿದ್ದಾರೆ.

ಇದರಿಂದ ಪೇಚಿಗೆ ಸಿಲುಗಿದ ಕಾಂಗ್ರೆಸ್ ಮುಖಂಡರು ಪ್ರತಿಭಟನಾನಿರತ ರೈತರನ್ನು ಸಮಾಧಾನ ಮಾಡಲು ಜಿಪಂ ಮಾಜಿ ಅಧ್ಯಕ್ಷ ಚನ್ನಹಳ್ಳಿ ಬಿ.ರಾಜಣ್ಣರನ್ನು ಕಳುಸಹಿಸಿದ್ದು, ಸಂಧಾನ ವಿಫಲವಾಗಿ ಹೋರಾಟ ಇನ್ನಷ್ಟು ತೀವ್ರಗೊಂಡಿದ್ದು, ಇದರಿಂದಾಗಿ ಮತ ಪ್ರಚಾರ ಸಭೆಯನ್ನು ಅರ್ಧದಲ್ಲಿ ಮೊಟಕುಗೊಳಿಸಲಾಯಿತು.





ರೈತ ಹೋರಾಟ ಗೊತ್ತೆ ಇಲ್ಲ: ರಕ್ಷಾ ರಾಮಯ್ಯ

ಚನ್ನರಾಯಪಟ್ಟಣದ 13 ಹಳ್ಳಿಗಳ ರೈತ ಹೋರಾಟಗಾರರೊಂದಿಗೆ ಮಾತನಾಡಿದ ಕಾಂಗ್ರೆಸ್ ಅಭ್ಯರ್ಥಿ ರಕ್ಷಾ ರಾಮಯ್ಯ 742 ದಿನಗಳಿಂದ ಕೃಷಿ ಭೂಮಿಯ ಉಳಿವಿಗಾಗಿ ಹೋರಾಟ ಮಾಡುತ್ತಿರುವುದು ಗೊತ್ತೇ ಇಲ್ಲ ಎಂದು ತಿಳಿಸಿದ್ದು, ಈ ಬಾರಿ ಕಾಂಗ್ರೆಸ್ ಪಕ್ಷಕ್ಕೆ ಬೆಂಬಲಿ ನೀಡಿ ರೈತ ಪರವಾಗಿ ನಾವಿದ್ದೇವೆ. ಯಾವುದೇ ಕಾರಣಕ್ಕೂ ಕೃಷಿಕರಿಗೆ ಅನ್ಯಾಯವಾಗಲು ಬಿಡುವುದಿಲ್ಲ ಎಂದು ಸಮಾಧಾನ ಪಡಿಸಲು ಯತ್ನಿಸಿದ್ದಾರೆ.

ಭೂ ಸ್ವಾಧೀನ ವಿರೋಧಿ ರೈತರ ಧರಣಿ ಸ್ಥಳಕ್ಕೆ ಕಾಂಗ್ರೆಸ್ ಅಭ್ಯರ್ಥಿ ರಕ್ಷಾ ರಾಮಯ್ಯರವರೊಂದಿಗೆ ತೆರಳಿದ ಸಚಿವ ಕೆ.ಎಚ್.ಮುನಿಯಪ್ಪ ರೈತರೊಂದಿಗೆ ಮಾತನಾಡಿ, 'ನನ್ನಿಂದ ತಪ್ಪಾಗಿದೆ, ನಿಮ್ಮ ವಿಚಾರದಲ್ಲಿ ವಿವಿಧ ಕಾರಣಗಳಿಂದ ತಡವಾಗಿದ್ದು, ಏ.26ರ ಲೋಕಸಭಾ ಚುನಾವಣೆಯ ನಂತರ ಪ್ರಾಮಾಣಿಕವಾಗಿ ಮುಖ್ಯಮಂತ್ರಿಗಳು, ಕೈಗಾರಿಕಾ ಸಚಿವರೊಂದಿಗೆ ಚರ್ಚಿಸಿ ಸಮಸ್ಯೆ ಬಗೆಹರಿಸಲಾಗುವುದು' ಎಂದು ಆಶ್ವಾಸನೆ ನೀಡಿದರು.

ಚುನಾವಣೆ ಬಹಿಷ್ಕಾರ ಮಾಡಂತೆ ಸಚಿವರು ಮನವಿ ಮಾಡಲು ಯತ್ನಿಸಿದ್ದು, ರೈತರು ಕೇಳಿದ ಪ್ರಶ್ನೆಗಳಿಗೆ ಉತ್ತರಿಸಲಾಗದೆ ತೆರಳಿದರು. ಬಿಜೆಪಿ ಸರ್ಕಾರದಲ್ಲಿ 72 ರೈತರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲು ಮಾಡಿ, ಪೊಲೀಸರಿಂದ ದಬ್ಬಾಳಿಕೆ ಮಾಡಿದ್ದರೂ ಎಂದು ರಕ್ಷಾ ರಾಮಯ್ಯರ ಮುಂದೆ ರೈತರು ಕಣ್ಣೀರಾಕಿದರು.

'ಕಾಂಗ್ರೆಸ್ ಪಕ್ಷವನ್ನು ನಂಬಲು ಸಿದ್ಧರಿಲ್ಲ'

ರೈತ ಹೋರಾಟಗಾರ ಚೀಮಾಚನಹಳ್ಳಿ ರಮೇಶ್, 'ಈ ಹಿಂದೆ ವಿಧಾನ ಸಭಾ ಚುನಾವಣೆ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಬೆಂಬಲಿಸಿದರೇ ಭೂ ಸ್ವಾಧೀನ ಪ್ರಕ್ರಿಯೆ ಕೈಬಿಡುವುದಾಗಿ ಆಶ್ವಾನೆ ನೀಡಿದ್ದೀರಿ. ಸಿದ್ಧರಾಮಯ್ಯ ಅಧಿಕಾರಕ್ಕೆ ಬಂದರೇ ರೈತಪರ ನಿಲುವು ತಾಳುವುದಾಗಿ ತಿಳಿಸಿದ್ದರು. ಈಗಾಗಲೇ ಕೆ.ಎಚ್.ಮುನಿಯಪ್ಪರನ್ನು 20ಕ್ಕೂ ಹೆಚ್ಚು ಬಾರಿ ಭೇಟಿ ಮಾಡಿದ್ದರು ಉಪಯೋಗವಾಗಿಲ್ಲ, ನೀವು ಬಂದು ಮನವೊಲಿಸಿದ ತಕ್ಷಣ ಕಾಂಗ್ರೆಸ್ ಪಕ್ಷವನ್ನು ನಂಬಲು ಸಿದ್ಧರಿಲ್ಲ ಎಂದು ಸಚಿವರಿಗೆ ತರಾಟೆಗೆ ತೆಗೆದುಕೊಂಡಿದ್ದಾರೆ.

ಅರೆಸ್ಟ್ ಮಾಡಲು ಬಂದಾಗ ಹಲ್ಲೆಗೆ ಯತ್ನ

ಕೋಲಾರ: ಅರೆಸ್ಟ್ ಮಾಡಲು ಬಂದ ಪೊಲೀಸರ ಮೇಲೆ ಚಾಕುವಿನಿಂದ ಹಲ್ಲೆಗೆ ಮುಂದಾಗಿದ್ದಕ್ಕೆ ಇಬ್ಬರು ಆರೋಪಿಗಳ ಮೇಲೆ ಪೊಲೀಸರು ಫೈರಿಂಗ್ ಮಾಡಿರುವ ಘಟನೆ ಮಾಲೂರು ತಾಲೂಕಿನ ಸಿಗೊಂಡಹಳ್ಳಿ ಬಳಿ ನಡೆದಿದೆ.

ಆರೋಪಿಗಳಾದ ಪ್ರಮೋದ್ ಮತ್ತು ಅನಿಲ್ ಎನ್ನುವರ ಮೇಲೆ ಫೈರಿಂಗ್ ಮಾಡಲಾಗಿದೆ.

ಕೊಲೆ ಕೇಸ್ವೊಂದಕ್ಕೆ ಸಂಬಂಧಿಸಿದಂತೆ ಪೊಲೀಸರು ಇವರನ್ನು ಬಂಧಿಸುವ ವೇಳೆ ಪೊಲೀಸರ ಮೇಲೆಯೇ ಚಾಕುವಿನಿಂದ ಹಲ್ಲೆಗೆ ಮುಂದಾಗಿದ್ದಾರೆ. ಈ ಹಿನ್ನೆಲೆಯಲ್ಲಿ ಪ್ರಾಣ ರಕ್ಷಣೆಗಾಗಿ ಕೋಲಾರದ ಮಾಸ್ತಿ ಇನ್ಸ್ಪೆಕ್ಟರ್ ರಾಮಪ್ಪ ಬಿ.ಗುತ್ತೇರ್ ಅವರು ಪ್ರಮೋದ್ ಮೇಲೆ ಫೈರಿಂಗ್ ಮಾಡಿದ್ರೆ, ಶ್ರೀನಿವಾಸಪುರ ಇನ್ಸ್ಪೆಕ್ಟರ್ ಗೌರವಿನಕೊಳ್ಳ ಅವರಿಂದ ಅನಿಲ್ ಮೇಲೆ ಗುಂಡು ಹಾರಿಸಿದ್ದಾರೆ. ಕೋಲಾರದ ಮಾಲೂರು ತಾಲೂಕಿನ ಟೇಕಲ್ನಲ್ಲಿ ಲೋಕೇಶ್ ಎಂಬುವರನ್ನ ಕೊಲೆ ಮಾಡಲಾಗಿತ್ತು. ಈ ಪ್ರಕರಣದಲ್ಲಿ ನಾಲ್ವರು ಆರೋಪಿಗಳಾದ ತಂದೆ ರಾಜಪ್ಪ, ತಾಯಿ ಜಯಮ್ಮ, ಇಬ್ಬರು ಮಕ್ಕಳಾದ ಪ್ರಮೋದ್, ಅನಿಲ್ ಬಂಧನಕ್ಕೆಂದು ಬಂದಿದ್ದರು. ಇದೇ ವೇಳೆ ಆರೋಪಿಗಳು ಹಲ್ಲೆಗೆ ಮುಂದಾಗಿದ್ದಕ್ಕೆ ಪೊಲೀಸರು ಗುಂಡು ಹಾರಿಸಿದ್ದಾರೆ.

ಕೇಂದ್ರದ ಬಿಜೆಪಿ ಸರ್ಕಾರದ ವೈಫಲ್ಯಗಳನ್ನು ಪ್ರತಿಯೊಬ್ಬರಿಗೂ ಮನದಟ್ಟು ಮಾಡಬೇಕು

ದೇವನಹಳ್ಳಿ: ಕೇಂದ್ರದ ಬಿಜೆಪಿ ಸರ್ಕಾರದ ವೈ?ಲ್ಯಗಳನ್ನು ಪ್ರತಿಯೊಬ್ಬರಿಗೂ ಮನದಟ್ಟು ಮಾಡಬೇಕು.ಎಂದು ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ರಕ್ಷಾ ರಾಮಯ್ಯ ತಿಳಿಸಿದರು.

ಪಟ್ಟಣದ ಹೊಸ ಬಸ್ ನಿಲ್ದಾಣದಲ್ಲಿ ದೇವನಹಳ್ಳಿ ಬ್ಲಾಕ್ ಕಾಂಗ್ರೆಸ್ ವತಿಯಿಂದ ಹಮ್ಮಿಕೊಂಡಿದ್ದ ಲೋಕಸಭಾ ಚುನಾವಣೆಯ ಹಿನ್ನೆಲೆಯಲ್ಲಿ ಕಾಂಗ್ರೆಸ್ ಪ್ರಚಾರ ಸಭೆಯಲ್ಲಿ ಮಾತನಾಡಿದರು. ಕೇಂದ್ರದಲ್ಲಿ ಬಿಜೆಪಿ ಸರ್ಕಾರವನ್ನು ಕೊನೆಗಾಣಿಸಬೇಕು. ಬಿಜೆಪಿ ಶ್ರೀಮಂತದ ಪಕ್ಷ ನಮ್ಮ ಕಾಂಗ್ರೆಸ್ ಪಕ್ಷ ಎಲ್ಲ ಜನರ ಪರವಾಗಿದೆ. ಕೇಂದ್ರದಲ್ಲಿ ಅಽಕಾರಕ್ಕೆ ಬಂದಲ್ಲಿ ಪ್ರತಿಯೊಂದು ಮನೆಗೆ ಪ್ರತಿ ತಿಂಗಳು 15000 ದೊರೆಯಲಿದೆ. ನಾವು ಅಽಕಾರಕ್ಕೆ ಬಂದಲ್ಲಿ ಕೃಷಿ ಮೇಲಿನ ಜಿಎಸ್ಟಿ ರದ್ದು ಮಾಡುತ್ತೇವೆ. ಬಿಜೆಪಿ ಸರ್ಕಾರ ಅಬಾನಿ, ಅದಾನಿ ಸಾಲ ಮನ್ನಾ ಮಾಡುತ್ತಿದೆ. ಯುವಕರು ನಿರುದ್ಯೋಗ ಸಮಸ್ಯೆಯನ್ನು ಎದುರಿಸುತ್ತಿದ್ದಾರೆ. ಲೋಕಸಭಾ ಚುನಾವಣೆಯಲ್ಲಿ ತಮ್ಮನ್ನು ಆಯ್ಕೆಗೊಳಿಸಿದರೆ ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸಲಾಗುವುದು. ಎಂದು ಹೇಳಿದರು.

ಜಿಲ್ಲಾ ಉಸ್ತುವಾರಿ ಸಚಿವ ಕೆಎಚ್ ಮುನಿಯಪ್ಪ ಮಾತನಾಡಿ ಅಗತ್ಯ ವಸ್ತುಗಳ ಬೆಲೆ ಏರಿಕೆ ಮಾಡಿದೆ. ಮಧ್ಯಮ ಮತ್ತು ಬಡವರ್ಗದ ಜನರಿಗೆ ಹೆಚ್ಚಿನ ಹೊರೆ ಬೀಳುವಂತೆ ಮಾಡಿದ್ದಾರೆ. ನಿರುದ್ಯೋಗ ಸಮಸ್ಯೆ ಹೆಚ್ಚು ಮಾಡಿದೆ. 25ಕ್ಕೂ ಹೆಚ್ಚು ಗ್ಯಾರಂಟಿಗಳನ್ನು ಕಾಂಗ್ರೆಸ್ ಘೋಷಣೆ ಮಾಡಿದೆ. ದೇವನಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ 25,000 ಮತಗಳ ಮುನ್ನಡೆ ಕೊಡಬೇಕು. ಪ್ರತಿ ಬೂತ್ ನಲ್ಲೂ ಪ್ರತಿಯೊಬ್ಬರು ಅಭ್ಯರ್ಥಿ ಪರವಾಗಿ ಕೆಲಸ ಮಾಡಬೇಕು. ಕಳೆದ ಹತ್ತು ವರ್ಷಗಳಲ್ಲಿ ಕೇಂದ್ರ ಸರ್ಕಾರ ಬಡವರು ಮಧ್ಯಮ ವರ್ಗದವರ ಏಳಿಗೆಗಾಗಿ ಏನು ಮಾಡಲಿಲ್ಲ. ಹಿಂದೆ ಯುಪಿಎ ಸರ್ಕಾರದಲ್ಲಿ ಮಾಡಿದ್ದ ಕಾರ್ಯಕ್ರಮಗಳನ್ನು ಹೊರತುಪಡಿಸಿ ಬಡವರಿಗೆ ಉಪಯೋಗವಾಗುವಂತಹ ಯಾವ ಕಾರ್ಯಕ್ರಮಗಳು ಮಾಡಲಿಲ್ಲ. ಎಂದು ಹೇಳಿದರು.

ಈ ವೇಳೆಯಲ್ಲಿ ರಾಷ್ಟ್ರೀಯ ಯುವ ಕಾಂಗ್ರೆಸ್ ಅಧ್ಯಕ್ಷ ಶ್ರೀನಿವಾಸ್ ,ವಿಧಾನ ಪರಿಷತ್ ಸದಸ್ಯ ಎಸ್ ರವಿ, ರಾಜ್ಯ ಯುವ ಕಾಂಗ್ರೆಸ್ ಅಧ್ಯಕ್ಷ ಮಹಮ್ಮದ್ ನಲಪಾಡ್, ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಯೋಜನಾ ಪ್ರಾಕಾರದ ಅಧ್ಯಕ್ಷ ಶಾಂತಕುಮಾರ್ ,ತಾಲೂಕು ಗ್ಯಾರೆಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಸಿ ಜಗನ್ನಾಥ್, ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷ ಎಸ್ ಆರ್ ರವಿಕುಮಾರ್,ದೇವನಹಳ್ಳಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸಿ ಪ್ರಸನ್ನ ಕುಮಾರ್, ಜಿಪಂ ಮಾಜಿ ಸದಸ್ಯ ಕೆ ಸಿ ಮಂಜುನಾಥ್,ಪುರಸಭಾ ಸದಸ್ಯರಾದ ಎನ್ ರಘು, ವೇಣುಗೋಪಾಲ್, ಎಸ್ ಸಿ ಚಂದ್ರಪ್ಪ, ಮುನಿಕೃಷ್ಣ, ಸುರೇಶ್, ಬಾಲರಾಜ್, ಮಂಜುನಾಥ್, ಮಾಜಿ ಪುರಸಭಾ ಅಧ್ಯಕ್ಷ ಎಂ ಮೂರ್ತಿ, ಕೆಪಿಸಿಸಿ ಸದಸ್ಯ ಚಿನ್ನಪ್ಪ ,ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕೆ ಆರ್ ನಾಗೇಶ್, ದೇವನಹಳ್ಳಿ ಬ್ಲಾಕ್ ಕಾಂಗ್ರೆಸ್ ಮಹಿಳಾ ಘಟಕದ ಅಧ್ಯಕ್ಷ ರಾಧಾ ರೆಡ್ಡಿ, ವಿಜಯಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಾಮಚಂದ್ರಪ್ಪ, ಜಿಲ್ಲಾ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಆರ್ ಸುಮಂತ್, ಮುಖಂಡರಾದ ಅಬ್ದುಲ್ ಖಿದ್ದೂಸ್, ಶ್ರೀಧರ್ ಮೂರ್ತಿ, ಮಂಜುನಾಥ್, ಸೋಮಶೇಖರ್, ಡಿ.ಎನ್ ವೆಂಕಟೇಶ್, ಸಿಎಂ ರಾಜಣ್ಣ, ವಸಂತ್ ಬಾಬು, ಮತ್ತಿತರರು ಇದ್ದರು.

E-mail: kayakayoginews @gmail.com

ಜನರು ಬಿಜೆಪಿಯನ್ನು ಕಿತ್ತೊಗೆಯುತ್ತಾರೆ



ಯಳಂದೂರು: ಅಂಬಾನಿ ಅಧಾನಿಯಂತಹ ಶ್ರೀಮಂತರ ಸಾಲಮನ್ನ ಮಾಡಿ ರೈತರನ್ನು ಮತ್ತು ದೇಶವನ್ನು ದುಸ್ಥಿತಿಗೆ ತಳ್ಳಿರುವ ಮೋದಿ ನೇತೃತ್ವದ ಬಿಜೆಪಿ ಸರ್ಕಾರವನ್ನು ದೇಶದ ಜನರು ಈ ಬಾರಿ ಕಿತ್ತೊಗೆಯುತ್ತಾರೆ ಎಂದು ಶಾಸಕ ಎ.ಆರ್ ಕೃಷ್ಣಮೂರ್ತಿ ಅಭಿಪ್ರಾಯಪಟ್ಟರು.

ತಾಲೂಕಿನ ಕೊಮಾರನಪುರ ಗ್ರಾಮದಲ್ಲಿ ಚಾಮರಾಜನಗರ ಲೋಕಸಭೆ ಚುನಾವಣೆಯ ಕಾಂಗ್ರೇಸ್ ಪಕ್ಷದ ಅಭ್ಯರ್ಥಿ ಸುನೀಲ್ ಬೋಸ್ ಪರವಾಗಿ ಮತಯಾಚನೆ ಮಾಡಿದರು.

ನಂತರ ಮಾತನಾಡಿದ ಅವರು ರೈತರು ಬೆಳೆ ಬೆಳೆಯುವುದಕ್ಕೆ ಬೇಕಾದ ಗೊಬ್ಬರದ ಬೆಲೆ ಗಗನ ಮುಟ್ಟಿದೆ ಇಂತಹ ಸಂದರ್ಭದಲ್ಲಿ ರೈತರು ಹೇಗೆ ತಾನೆ ಬೆಳೆ ಬೆಳೆಯಲು ಸಾಧ್ಯ.? ರೈತನು ಇಂದು ಸಾಲದ ಸುಳಿಯಲ್ಲಿ ಸಿಲುಕಿದ್ದಾನೆ. ದೇಶದ ಬೆನ್ನೆಲುಬಾಗಿರುವ ಅನ್ನದಾತ ರೈತನ ಸಾಲವನ್ನು ಮನ್ನಾ ಮಾಡದೆ ಕೇವಲ ಅಂಬಾನಿ ಅಧಾನಿಯಂತಹ ಶ್ರೀಮಂತರ ಸಾಲಮನ್ನಾ ಮಾಡಿ ಬಡವರಿಗೆ ದ್ರೋಹ ಬಗೆದಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಕಾಂಗ್ರೇಸ್ ಪಕ್ಷ ಕೇಂದ್ರದಲ್ಲಿ ಅಧಿಕಾರಕ್ಕೆ ಬಂದ್ರೆ ಮಹಿಳೆಯರಿಗೆ ವರ್ಷಕ್ಕೆ ಒಂದು ಲಕ್ಷ ರೂಪಾಯಿ ಹಾಗೂ ರೈತರ ಸಾಲಮನ್ನಾ ಮಾಡಲಾಗುವುದು ಎಂಬ ಗ್ಯಾರೇಂಟಿಯನ್ನು ನಮ್ಮ ರಾಷ್ಟ್ರೀಯ ನಾಯಕರು ಘೋಷಣೆ ಮಾಡಿದ್ದಾರೆ ಅದ್ದರಿಂದ ನಮ್ಮ ಪಕ್ಷದ ಅಭ್ಯರ್ಥಿ ಸುನೀಲ್ ಬೋಸ್ ರವರಿಗೆ ಮತನೀಡಿ ಗೆಲ್ಲಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಬದಲ್ಲಿ ಗುಂಬಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಮೀನಾಗೋವಿಂದರಾಜು, ಬ್ಲಾಕ್ ಕಾಂಗ್ರೇಸ್ ಅಧ್ಯಕ್ಷ ಹೆಚ್ ವಿ ಚಂದ್ರು, ಜಿಲ್ಲಾ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಜೆ ಯೋಗೇಶ್, ಕಾಂಗ್ರೇಸ್ ವಕ್ತಾರ ವಡಗೆರೆ ದಾಸ್ ಟಿಎಪಿಸಿಸಿಎಂ ಸದಸ್ಯ ಪುಟ್ಟರಾಜು, ಗ್ರಾಮ ಪಂಚಾಯಿತಿ ರಂಗರಾಮು, ಸದಸ್ಯ ಭಾಗ್ಯವೆಂಕಟರಾಜು,

ಕೃಷ್ಣಮಾರ್, ಮುಖಂಡರಾದ ಪ್ರಕಾಶ್, ನಾಗರಾಜು, ಸ್ವಾಮೀ, , ಬಸವರಾಜು, ಎಲ್ ರಂಗಸ್ವಾಮಿ, ಮಹದೇವಸ್ವಾಮಿ,ಹಾಗೂ ಗ್ರಾಮಸ್ಥರು ಭಾಗವಹಿಸಿದರು

ಮೊದಲನೇ ಪುಟದಿಂದ

ಏ.18,19ರಂದು 13 ಪರೀಕ್ಷಾ ಕೇಂದ್ರಗಳಲ್ಲಿ ಸಿಇಟಿ ಪರೀಕ್ಷೆ: ಎಡಿಸಿ

ಅಭ್ಯರ್ಥಿಗಳು ಬ್ಲೂಟೂತ್ ಸಾಧನಗಳನ್ನು ಪರೀಕ್ಷಾ ಕೊಠಡಿಯಲ್ಲಿ ಬಳಸುವುದನ್ನು ತಡೆಯುವ ಸಲುವಾಗಿ ಫುಲ್ಷರ್ಟ್, ಶೂ. ಟೋಪಿ, ಬಾಯಿ, ಕಿವಿ ಹಾಗೂ ತಲೆಮುಚ್ಚುವ ವಸ್ತುವನ್ನು ಧರಿಸುವುದನ್ನು ನಿಷೇಧಿಸಿದೆ. ಯಾವುದೇ ರೀತಿಯ ಮಾಸ್ಕ್ ಅನ್ನು ಧರಿಸುವಂತಿಲ್ಲ ಎಂದರು.

ಪ್ರತಿ ಪರೀಕ್ಷಾ ಕೇಂದ್ರಗಳಲ್ಲಿನ ಸಿ.ಸಿ.ಟಿವಿ ಅಳವಡಿಸುವುದು ಕಡ್ಡಾಯವಾಗಿರುತ್ತದೆ. ಎಲ್ಲಾ ಪರೀಕ್ಷಾ ಕೊಠಡಿಗಳಲ್ಲಿ ಗೋಡೆ ಗಡಿಯಾರವನ್ನು ಅಳವಡಿಸಿ ಎಂದರು.

ಪರೀಕ್ಷಾ ಕೇಂದ್ರಗಳ ಬಳಿ ಯಾವುದೇ ರೀತಿಯ ಅಹಿತಕರ ಘಟನೆಗಳು ನಡೆಯದಂತೆ ಪರೀಕ್ಷೆ ಪ್ರಾರಂಭವಾಗುವ ಮೊದಲು ಒಂದುಗಂಟೆ ಮುಂಚಿತವಾಗಿ ಮತ್ತು ಮಾರ್ಗಾಧಿಕಾರಿಗಳು ಬಂಡಲ್ ಪಡೆದು ತೆರಳುವವರೆವಿಗೆ ಮಾರ್ಗಾಧಿಕಾರಿಗಳಿಗೆ ಸೂಕ್ತ ಪೊಲೀಸ್ ಬಂದೋಬಸ್ತ್ ಒದಗಿಸುವಂತೆ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ತಿಳಿಸಲಾಯಿತು.

ಪರೀಕ್ಷಾ ಕೇಂದ್ರಗಳ ಉಪಮುಖ್ಯ ಅಧೀಕ್ಷಕರುಗಳು ಸಮೀಪದ ಪೊಲೀಸ್ ವೃತ್ತ ನಿರೀಕ್ಷಕರ ಸಂಪರ್ಕದಲ್ಲಿದ್ದು ಯಾವುದೇ ಪರೀಕ್ಷಾ ಅವ್ಯವಹಾರ ನಡೆಯದಂತೆ ನಿಗಾವಹಿಸುವಂತೆ ತಿಳಿಸಿದರು.

ಪ್ರತಿ ಪರೀಕ್ಷಾ ಕೇಂದ್ರಗಳಿಗೆ ಒಬ್ಬರು ಆರೋಗ್ಯ ಸಹಾಯಕಿಯರು ಹಾಗೂ ಒಬ್ಬರು ಆಶಾಕಾರ್ಯಕರ್ತರುಗಳನ್ನು ನಿಯೋಜಿಸುವಂತೆ ಜಿಲ್ಲಾ ವೈದ್ಯಾಧಿಕಾರಿಗಳಿಗೆ ಸೂಚಿಸಿದರು.

ಕೆ.ಇ.ಎ ವತಿಯಿಂದ ನಡೆಸಲಾಗುವ ಪರೀಕ್ಷೆಯಲ್ಲಿ ಯಾವುದೇ ಲೋಪದೋಷಗಳು ಉಂಟಾಗದ ರೀತಿಯಲ್ಲಿ ಬಹಳ ಎಚ್ಚರಿಕೆಯಿಂದ ಹಾಗೂ ಜಾಗೃತವಾಗಿ ಕರ್ತವ್ಯ ನಿವಹಿಸುವಂತೆ ಎಲ್ಲ ಅಧಿಕಾರಿಗಳಿಗೂ ಅಗತ್ಯಕ್ರಮವಹಿಸುವಂತೆ ತಿಳಿಸಿದರು.

ಸಭೆಯಲ್ಲಿ ಡಿ.ಡಿ.ಪಿ.ಐ ಶಿವರಾಮೇಗೌಡ, ಡಿ.ಡಿ.ಪಿಯು ಚಲುವಯ್ಯ ಹಾಗೂ ಇನ್ನಿತರ ಅಧಿಕಾರಿಗಳು ಉಪಸ್ಥಿತರಿದ್ದರು.

ಚೆಕ್ಪೋಸ್ಟ್ಗಳಲ್ಲಿ ಎಲ್ಲಾ ವಾಹನಗಳ ತಪಾಸಣೆ ಕಡ್ಡಾಯ: ಜಿಲ್ಲಾಧಿಕಾರಿ

ವಿಡಿಯೋ ಗ್ರಾಫರ್ ಗಳಿಗೆ ಸರಿಯಾದ ತರಬೇತಿ ನೀಡಿ ಎಂದರು.

ಸಭೆಯಲ್ಲಿ ಜಿ.ಪಂ. ಸಿಇಒ ಶೇಖ್ ತನ್ವೀರ್ ಆಸಿಫ್, ಉಪವಿಭಾಗಾಧಿಕಾರಿ ಮಹೇಶ್ ಸೇರಿದಂತೆ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಆರ್'ಆರ್ ಕರಾಟೆ ಶಾಲೆಯಿಂದ ವಿಶೇಷ ಬೇಸಿಗೆ ಶಿಬಿರ ಪ್ರಾರಂಭ

■ ಕಾಯಕಯೋಗಿ ಸುದ್ದಿ

ಮಂಜುಸ್ವಾಮಿ ಎಂ ಎನ್ ಕೊರಟಗೆರೆ

ಕೊರಟಗೆರೆ : ಮಕ್ಕಳ ಬೇಸಿಗೆ ರಜೆಯ ದಿನಗಳನ್ನು ಕಳೆಯಲು ಮಕ್ಕಳ ಪ್ರತಿಭೆಯನ್ನ ಹೆಚ್ಚಿಸಲು ಇಂದೇ ನಿ